ಸಂಪುಟ: 4 ಸಂಚಿಕೆ: 101 ಪುಟ: 4 ₹: 4 newsbelagavi@gmail.com 9900332089 9900332089



# ಬೆಳಗಾವಿ ವರದಿ

ಕನ್ನಡ ದಿನಪತ್ರಿಕೆ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

Read,Share and Follow - www.belagavivaradi.com

Vol-04 Issue: 101 Sunday, 04, June, 2023 RNI: KARKAN/2020/79084 Regn,No:G-2/PMG/KA/NK/BM/139/2021-23 24

## ಒಡಿಶಾ ರೈಲು ದುರಂತ: ಪ್ರತಿಯೊಬ್ಬ ಕನ್ನಡಿಗನನ್ನು ಸುರಕ್ಷಿತವಾಗಿ ನಾಡಿಗೆ ಕರೆತರಲು ಸರ್ಕಾರ ಬದ್ಧ : ಸಿಎಂ

ಬೆಂಗಳೂರು: ಪ್ರತಿಯೊಬ್ಬ ಕನ್ನಡಿಗನನ್ನು ಸುರಕ್ಷಿತವಾಗಿ ನಾಡಿಗೆ ಕರೆತರಲು ಸರ್ಕಾರ ಬದ್ಧವಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶನಿವಾರ ಹೇಳಿದ್ದಾರೆ.

ಒಡಿಶಾ ರೈಲು ದುರಂತ ಪ್ರಕರಣ–ಕ್ಕೆ ಸಂಬಂಧಿಸಿದಂತೆ ಸಾಮಾಜಿಕ ಜಾಲತಾಣ ಟ್ವಿಟರ್ ನಲ್ಲಿ ಟ್ವೀಟ್ ಮಾಡಿರುವ ಅವರು, ಒಡಿಶಾದ ಬಾಲಸೋರ್ ನಲ್ಲಿ ಸಂಭವಿಸಿದ ರೈಲು ದುರಂತದ ಹಿನ್ನೆಲೆಯಲ್ಲಿ ತಕ್ಷಣ ಘಟನಾ ಸ್ಥಳಕ್ಕೆ ತೆರಳಿ ಕನ್ನಡಿಗರ ಸುರಕ್ಷತೆ ಬಗ್ಗೆ ಗಮನ ಹರಿಸುವಂತೆ ಹಾಗೂ ಅವರಿಗೆ ಅಗತ್ಯ ನೆರವನ್ನು ನೀಡುವಂತೆ ಸಚಿವ ಸಂತೋಷ್ ಲಾಡ್ ಅವರಿಗೆ ಸೂಚಿಸಿದ್ದೇನೆ. ಘಟನೆಯಲ್ಲಿ ಗಾಯಗೊಂಡ ಅಥವಾ ಇತರೆ ಯಾವುದೇ ಸಮಸ್ಯೆ ಎದುರಿಸುತ್ತಿರುವ ಕನ್ನಡಿಗರ ರಕ್ಷಣೆಗೆ ನಾವು ಬದ್ಧರಿದ್ದೇವೆ.

ಪ್ರತಿಯೊಬ್ಬ ಕನ್ನಡಿಗನನ್ನು ನಾವು ಸುರಕ್ಷಿತವಾಗಿ ನಾಡಿಗೆ ಕರೆ ತರುತ್ತೇವೆಂದು ಹೇಳಿದ್ದಾರೆ.

ಈ ನಡುವೆ ಮುಖ್ಯಮಂತ್ರಿ ಸಿದ್ದರಾಮಯ್ಯ



ಅವರ ಸೂಚನೆ ಮೇರೆಗೆ ಸಚಿವ ಸಂತೋಷ್ ಲಾಡ್ ಅವರು, ಮೇರೆಗೆ ಒಡಿಶಾ ರಾಜ್ಯಕ್ಕೆ ತೆರಳುತ್ತಿದ್ದು, ಮಧ್ಯಾಹ್ನ 2.30ಕ್ಕೆ ಸಚಿವರು ಭುವನೇಶ್ವರಕ್ಕೆ ತೆರಳುತ್ತಿದ್ದಾರೆಂದು ತಿಳಿದುಬಂದಿದೆ.

ರಾಜ್ಯ ವಿಪತ್ತು ನಿರ್ವಹಣಾ ಇಲಾಖೆ ತಂಡದ ಜೊತೆ ಸಂತೋಶ್ ಅವರು ಚಾರ್ಟರ್ಡ್ ಫ್ಲೈಟ್ನಲ್ಲಿ ಒಡಿಶಾಗೆ ತೆರಳುತ್ತಿದ್ದಾರೆಂದು ವರದಿಗಳು ತಿಳಿಸಿವೆ.

ವಿಶೇಷ ಏರ್ ಕ್ರಾಫ್ಟ್ ಮೂಲಕ ಮಧ್ಯಾಹ್ನ 2.30 ಕ್ಕೆ ವಿಪತ್ತು ನಿರ್ವಹಣಾ ಇಲಾಖೆ ಅಧಿಕಾರಿಗಳ ಜೊತೆ ಭುವನೇಶ್ವರಕ್ಕೆ ಹೋಗುತ್ತಿದ್ದೇನೆ. ಅಲ್ಲಿಂದ ರಸ್ತೆ ಮಾರ್ಗವಾಗಿ ಸ್ಥಳಕ್ಕೆ ತೆರಳಬೇಕಾಗಿದೆ.

ಸಂಜೆ 6–7 ಗಂಟೆಗೆ ನಾನು ದುರಂತ ಸ್ಥಳಕ್ಕೆ ತಲುಪಬಹುದು. ಅಲ್ಲಿ ಹೋದ ಮೇಲೆ ವ್ಯವಸ್ಥೆಗೆ ಏನು ಲಭ್ಯ ಇದೆ ಎಂಬುದನ್ನು ನೋಡಬೇಕಾಗುತ್ತದೆ. ಕನ್ನಡಿಗರಿಗೆ ಯಾವುದೇ ತೊಂದರೆ ಇದ್ದರೆ ಚಿಕಿತ್ಸೆ, ಸುರಕ್ಷಿತವಾಗಿ ಕರೆತರುವುದು ನಮ್ಮ ಜವಾಬ್ದಾರಿಯಾಗಿದೆ ಎಂದು ಹೇಳಿದ್ದಾರೆ.

ಪ್ರಾಥಮಿಕ ಮಾಹಿತಿ ಪ್ರಕಾರ ಕನ್ನಡಿಗ–ರಿಗೆ ಈಗ ಯಾರಿಗೂ ಯಾವುದೇ ಸಮಸ್ಯೆ ಆಗಿಲ್ಲ. ಯಾವ ರೀತಿ ಕರೆತರುವುದು ಎಂಬ ಬಗ್ಗೆ ಅಲ್ಲಿನ ಪರಿಸ್ಥಿತಿ ನೋಡಿ ನಿರ್ಧಾರ ಮಾಡುತ್ತೇನೆ.

ದುರಂತ ಸ್ಥಳದಲ್ಲಿರುವ ಕನ್ನಡಿಗರು ನನ್ನ ಮೊಬೈಲ್ ಸಂಖ್ಯೆಗೆ 9845739999 ಸಂಪರ್ಕಿಸಬಹುದು. ನಾನು ವೈಯಕ್ತಿಕವಾಗಿ ಅಲ್ಲಿ ಅವರನ್ನು ಅಟೆಂಡ್ ಮಾಡುತ್ತೇನೆ ಎಂದು ತಿಳಿಸಿದ್ದಾರೆ.

## ಕನ್ನಡಿಗರ ರಕ್ಷಣೆಗೆ ಸಚಿವ ಸಂತೋಷ್ ಲಾಡ್ ಗೆ ನಿಯೋಜಿಸಿದ ಸಿಎಂ ಸಿದ್ದರಾಮಯ್ಯ



ಬೆಂಗಳೂರು: ಒಡಿಶಾದ ಬಾಲಸೋರ್ ನಲ್ಲಿ ಸಂಭವಿಸಿದ ರೈಲು ದುರಂತದ ಹಿನ್ನೆಲೆಯಲ್ಲಿ ಕನ್ನಡಿಗರ ಸುರಕ್ಷತೆ ಬಗ್ಗೆ ಗಮನ ಹರಿಸಲು ಸಚಿವ ಸಂತೋಷ್ ಲಾಡ್ ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ನಿಯೋಜಿಸಿದ್ದಾರೆ.

ಈ ಹಿನ್ನಲೆಯಲ್ಲಿ ಅವರು ಇಂದು ಒಡಿಶಾದ ಬಾಲಸೂರ್ ನ ಬಹನಾಗ ರೈಲ್ವೆ ನಿಲ್ದಾಣಕ್ಕೆ ಭೇಟಿ ನೀಡಲಿದ್ದಾರೆ.

ಈ ಘಟನೆ ಕುರಿತಾಗಿ ಸರ್ಕಾರದ ಮುಖ್ಯ ಕಾರ್ಯದರ್ಶಿ ಅವರಿಂದ ವರದಿ ಕೇಳಿದ ಬಳಿಕ ಸಂಬಂಧಪಟ್ಟ ಹಿರಿಯ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿದರು.

ಬಳಿಕ ತಕ್ಷಣ ಸ್ಥಳಕ್ಕೆ ತೆರಳಿ ಕನ್ನಡಿಗರ ಸುರಕ್ಷತೆ ಬಗ್ಗೆ ಗಮನ ಹರಿಸಲು ಹಾಗೂ ಅಗತ್ಯ ನೆರವನ್ನು ಒದಗಿಸಲು ಸೂಚನೆ ನೀಡಿದ್ದಾರೆ.

ಸಂತೋಷ್ ಲಾಡ್ ಅವರ ಜತೆಗೆ ವಿಪತ್ತು ನಿರ್ವಹಣಾ ಪ್ರಾಧಿಕಾರದ ಆಯುಕ್ತ ಮನೋಜ್ ರಾಜನ್ ಸೇರಿ ಇತರೆ ಅಧಿಕಾರಿಗಳ ತಂಡ ಘಟನಾ ಸ್ಥಳಕ್ಕೆ ಹೊರಟಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸೂಚನೆ ಮೇರೆಗೆ ಕಾರ್ಮಿಕ ಸಚಿವ ಸಂತೋಷ್ ಲಾಡ್ ಮತ್ತು ವಕ್ತಾರ ಅನಿಲ್ ಕುಮಾರ್ ಟಿ ಅವರು ಒಡಿಶಾದ ದುರಂತ ಸ್ಥಳಕ್ಕೆ ಪ್ರಯಾಣಿಸುತ್ತಿದ್ದಾರೆ. ಈ ಮೂಲಕ ಕನ್ನಡಿಗರ ರಕ್ಷಣೆಯ ಕೆಲಸ ಮಾಡಲಿದ್ದಾರೆ.



ಒಡಿಶಾದ ಬಾಲಸೋರ್ ಜಿಲ್ಲೆಯ ಬಹನಾಗಾ ರೈಲು ನಿಲ್ದಾಣದ ಬಳಿ ನಡೆದ ಎಕ್ಸ್‌ಪ್ರೆಸ್ ರೈಲು ಭೀಕರ ಅಪಘಾತದಲ್ಲಿ ಮೃತಪಟ್ಟವರ ಸಂಖ್ಯೆ 300ಕ್ಕೆ ಏರಿಕೆ

## ರೈಲು ದುರಂತ: ಘಟನಾ ಸ್ಥಳಕ್ಕೆ ಪ್ರಧಾನಿ ಮೋದಿ ಭೇಟಿ ನೀಡಿ, ಪರಿಶೀಲನೆ



ಒಡಿಶಾ: ಒಡಿಶಾದ ಬಾಲಸೋರ್ ನ ಬಹನಾಗ ರೈಲ್ವೆ ನಿಲ್ದಾಣದ್ಲಿ ಸಂಭವಿಸಿದ ರೈಲು ಅಪಘಾತದ ಸ್ಥಳಕ್ಕೆ ಪ್ರಧಾನಿ ನರೇಂದ್ರ ಮೋದಿ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಬಾಲಸೋರ್ ನ ಬಹನಾಗದಲ್ಲಿನ ಘಟನಾ ಸ್ಥಳಕ್ಕೆ ಪ್ರಧಾನಿ ನರೇಂದ್ರ ಮೋದಿ ಭೇಟಿ ನೀಡಿ ರೈಲ್ವೆ ಅಧಿಕಾರಿಗಳಿಂದ ಘಟನೆ ಬಗ್ಗೆ ಮಾಹಿತಿ ಪಡೆದರು. ಬಳಿಕ ಕಟಕ್ ಆಸ್ಪತ್ರೆಗೆ ಭೇಟಿ ನೀಡಲು ಪ್ರಧಾನಿ ನರೇಂದ್ರ ಮೋದಿ ತೆರಳುತ್ತಿದ್ದು, ಗಾಯಾಳುಗಳ ಯೋಗಕ್ಷೇಮ ವಿಚಾರಿಸಿದ್ದಾರೆ.

## ರೈಲ್ವೆ ನನ್ನ ಮಗು ಇದ್ದಂತೆ, ಯಾವುದೇ ಸಲಹೆ ನೀಡಲು ಸಿದ್ಧ: ಮಮತಾ ಬ್ಯಾನರ್ಜಿ

ನವದೆಹಲಿ: 280 ಮಂದಿಯ ಸಾವಿಗೆ ಕಾರಣವಾಗಿರುವ ಒಡಿಶಾದ ಭೀಕರ ರೈಲು ಅಪಘಾತದ ಬಗ್ಗೆ ಪಶ್ಚಿಮ ಬಂಗಾಳ ಸಿಎಂ, ಮಾಜಿ ರೈಲ್ವೆ ಸಚಿವೆ ಮಮತಾ ಬ್ಯಾನರ್ಜಿ ಪ್ರತಿಕ್ರಿಯೆ ನೀಡಿದ್ದು, ತಾವು ಯಾವುದೇ ಸಲಹೆ ನೀಡುವುದಕ್ಕೂ ಸಿದ್ಧ ಎಂದು ಹೇಳಿದ್ದಾರೆ.

ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಹಾಗೂ ಕೇಂದ್ರ ಸಚಿವ ಧರ್ಮೇಂದ್ರ ಪ್ರಧಾನ್ ಅವರನ್ನು ಭೇಟಿ ಮಾಡಿದ್ದು, ಇದು ರಾಜಕೀಯ ಮಾಡುವ ಸಂದರ್ಭವಲ್ಲ, ರೈಲ್ವೆ ನನ್ನ ಮಗು ಇದ್ದಂತೆ ಆದ್ದರಿಂದ ನಾನು ಯಾವುದೇ ಸಲಹೆ ನೀಡುವುದಕ್ಕೂ ಸಿದ್ಧ ಎಂದು ಹೇಳಿದ್ದಾರೆ.

ರೈಲ್ವೆ ತಲಾ 10 ಲಕ್ಷ ರೂಪಾಯಿ ಪರಿಹಾರವನ್ನು ಘೋಷಿಸಿದ್ದು, ನಮ್ಮ ರಾಜ್ಯದ ಜನತೆಗೆ ನಾವು ತಲಾ 5 ಲಕ್ಷ ರೂಪಾಯಿ ಪರಿಹಾರ ನೀಡಲಿದ್ದೇವೆ, ರಕ್ಷಣಾ ಕಾರ್ಯಾಚರಣೆ ಮುಕ್ತಾಯವಾಗುವವರೆಗೆ ನಾವು ಒಡಿಶಾ ಸರ್ಕಾರ ಹಾಗೂ ರೈಲ್ವೆಗೆ ಅಗತ್ಯ ನೆರವಿಗೆ



ಸಹಕರಿಸುತ್ತೇವೆ ಎಂದು ಮಮತಾ ಬ್ಯಾನರ್ಜಿ ಹೇಳಿದ್ದಾರೆ.

ಒಂದು ವೇಳೆ ರೈಲು ಡಿಕ್ಕಿ ತಡೆ ವ್ಯವಸ್ಥೆ ಅಳವಡಿಸಿದ್ದರೆ ಇಷ್ಟು ಪ್ರಮಾಣದಲ್ಲಿ ಸಾವು ಸಂಭವಿಸುತ್ತಿರಲಿಲ್ಲ ಎಂದು ಮಮತಾ ಬ್ಯಾನರ್ಜಿ ಅಶ್ವಿನಿ ವೈಷ್ಣವ್ ಎದುರು ಹೇಳಿದ್ದಾರೆ.

ಕೋರಮಂಡಲ್ ಎಕ್ಸ್‌ಪ್ರೆಸ್‌ನಲ್ಲಿ ಯಾವುದೇ ಆಂಟಿ–ಕೊಲ್ಯೂಷನ್ ಸಾಧನ ಇರಲಿಲ್ಲ, ನಾನು ರೈಲ್ವೆ ಸಚಿವನಾಗಿದ್ದಾಗ, ಅದೇ ಹಳಿಯಲ್ಲಿ ಚಲಿಸುವ ರೈಲುಗಳು ನಿರ್ದಿಷ್ಟ ದೂರದಲ್ಲಿ ನಿಲ್ಲುವುದನ್ನು ಖಾತ್ರಿಪಡಿಸುವ ಢಿಕ್ಕಿ ತಡೆ ಸಾಧನವನ್ನು ನಾನು ಪರಿಚಯಿಸಿದೆ. ಈಗ, ನೀವು (ಅಶ್ವಿನಿ ವೈಷ್ಣವ್) ಇದ್ದಾಗ. ಇಲ್ಲಿ, ಈ ರೈಲಿನಲ್ಲಿ ಇಂತಹ ಯಾವುದೇ ಸಾಧನ ಇರಲಿಲ್ಲ . ಒಂದು ವೇಳೆ ಆ ತಂತ್ರಜ್ಞಾನ ಅಳವಡಿಸಿದ್ದರೆ, ಈ ಘಟನೆಯನ್ನು ತಪ್ಪಿಸಬಹುದಿತ್ತು" ಎಂದು ಮಮತಾ ಬ್ಯಾನರ್ಜಿ ಹೇಳಿದ್ದಾರೆ.

ಇಂದಿನ ದಿನಗಳಲ್ಲಿ ರೈಲ್ವೆ ಬಜೆಟ್ ಮಂಡಿಸುತ್ತಿಲ್ಲ, ರೈಲ್ವೆ ನನ್ನ ಮಗುವಿನಂತೆ, ನಾನು ರೈಲ್ವೆ ಕುಟುಂಬದ ಸದಸ್ಯೆ ಮತ್ತು ಸಲಹೆ ನೀಡಲು ಸದಾ ಸಿದ್ಧಳಿದ್ದೇನೆ ಎಂದು 1999ರಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಸರಕಾರದಲ್ಲಿ ರೈಲ್ವೇ ಸಚಿವೆಯಾಗಿ ಸೇವೆ ಸಲ್ಲಿಸಿದ್ದ ಮಮತಾ ಬ್ಯಾನರ್ಜಿ ಹೇಳಿದ್ದಾರೆ.

## ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹ ಕ್ಯಾನ್ಸರ್ ಮುಕ್ತ



ಬೆಂಗಳೂರು: ಜೂನ್ 4ರ ಕ್ಯಾನ್ಸರ್ ಸರ್ವೈವರ್ಸ್ ಡೇ ಪ್ರಯುಕ್ತ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲಿ ಕ್ಯಾನ್ಸರ್ ತಪಾಸಣಾ ಶಿಬಿರ ಆಯೋಜಿಸಲಾಗಿದ್ದು, ಯಾವುದೇ ಕೈದಿಗಳಿಗೆ ಕ್ಯಾನ್ಸರ್ ಪತ್ತೆಯಾಗಿಲ್ಲ.

ಕೈದಿಗಳನ್ನು ಸಾಮಾನ್ಯವಾಗಿ ಸರಿಯಾದ ನೈರ್ಮಲ್ಯ ಇಲ್ಲದ, ಮುಚ್ಚಿದ ಸ್ಥಳಗಳಲ್ಲಿ ಇರಿಸಲಾಗುತ್ತದೆ. ಕೈದಿಗಳ ಆರೋಗ್ಯ ಹಕ್ಕುಗಳು ಮತ್ತು ವೈಯಕ್ತಿಕ ನೈರ್ಮಲ್ಯಕ್ಕೆ ಸಂಬಂಧಿಸಿದಂತೆ ಅವರನ್ನು ಹೆಚ್ಚಾಗಿ ನಿರ್ಲಕ್ಷಿಸಲಾಗುತ್ತದೆ" ಎಂದು ಸಕ್ರಿಯಾ ಚಾರಿಟಬಲ್ ಟ್ರಸ್ಟ್‌ನ ಅನಿತಾ ರಾವ್ ಅವರು ಹೇಳಿದ್ದಾರೆ.

ಕಾರ್ಕಿನೋಸ್ ಹೆಲ್ತ್‌ಕೇರ್ ಸಕ್ರಿಯಾ ಚಾರಿಟೇಬಲ್ ಟ್ರಸ್ಟ್‌ನ ಸಹಯೋಗದೊಂದಿಗೆ ಆಯೋಜಿಸಿದ್ದ ಸ್ಕ್ರೀನಿಂಗ್ ಕ್ಯಾಂಪ್ ವೇಳೆ ಯಾರಿಗೂ ಕ್ಯಾನ್ಸರ್ ಇರುವುದು ಪತ್ತೆಯಾಗಿಲ್ಲ. ಈ ಕ್ಯಾಂಪ್ ಇರುವವರನ್ನು ಅಥವಾ ಹೆಚ್ಚಿನ ಅಪಾಯದಲ್ಲಿರುವವರನ್ನು ಗುರುತಿಸಲು ಸಹಾಯ ಮಾಡುತ್ತದೆ ಎಂದು ರಾವ್ ವಿವರಿಸಿದ್ದಾರೆ.

ಮಹಿಳಾ ಕೈದಿಗಳಲ್ಲಿ ಉತ್ತಮ ಮುಟ್ಟಿನ ನೈರ್ಮಲ್ಯ ಖಚಿತಪಡಿಸಿಕೊಳ್ಳಲು, ಸಂಘಟಕರು ಮರುಬಳಕೆ ಮಾಡಬಹುದಾದ ಸ್ಯಾನಿಟರಿ ನ್ಯಾಪ್ಕಿನ್ಗಳು ಮತ್ತು ಮುಟ್ಟಿನ ಕಪ್ ಗಳನ್ನು ವಿತರಿಸಿದರು.

ರಾವ್ ಅವರು 300 ಮಹಿಳಾ ಕೈದಿಗಳೊಂದಿಗೆ ಮಾತನಾಡಿದ್ದು, ಅವರು ಕಡಿಮೆ ಗುಣಮಟ್ಟದ ಸ್ಯಾನಿಟರಿ ಪ್ಯಾಡ್‌ಗಳನ್ನು ಬಳಸುತ್ತಿರುವುದು ಕಂಡುಬಂದಿದೆ.

1,100 ಕ್ಕೂ ಹೆಚ್ಚು ಜನರಿಗೆ ಸ್ತನ, ಮೌಖಿಕ, ಗರ್ಭಕೋಶ, ಶ್ವಾಸಕೋಶ, ಪ್ರಾಸ್ಟೇಟ್, ಜೊತೆಗೆ ಸಾಂಕ್ರಾಮಿಕವಲ್ಲದ ರೋಗಗಳ ತಪಾಸಣೆ ಮಾಡಲಾಯಿತು. ಸುಮಾರು 113 ಮಹಿಳೆಯ–ರಿಗೆ ಗರ್ಭಕೋಶದ ಕ್ಯಾನ್ಸರ್ ತಪಾಸಣೆ ಮಾಡಲಾಯಿತು ಎಂದು ಹೇಳಿದ್ದಾರೆ.

## ಖಾದ್ಯ ತೈಲ ಬೆಲೆ ಲೀಟರ್ ಗೆ ರೂ. 8–12 ಇಳಿಕೆಗೆ ಸರ್ಕಾರ ಸೂಚನೆ



ಹೊಸದಿಲ್ಲಿ: ಜಾಗತಿ–ಕ ಮಾರುಕಟ್ಟೆಯಲ್ಲಿ ಖಾದ್ಯ ತೈಲದ ಬೆಲೆ ಇಳಿಕೆ ಹಿನ್ನೆಲೆಯಲ್ಲಿ ದೇಶದಲ್ಲೂ ಖಾದ್ಯತೈಲಗಳ ಗರಿಷ್ಠ ಮಾರಾಟ ಬೆಲೆಯನ್ನು ಪ್ರತಿ ಲೀಟರ್ ಗೆ ಗೆ 8–12 ರೂಪಾಯಿ ಇಳಿಸುವಂತೆ ಕೇಂದ್ರ ಸರ್ಕಾರ ಶುಕ್ರವಾರ ಖಾದ್ಯತೈಲ ಉತ್ಪಾದಕರ ಸಂಘಗಳಿಗೆ ಸೂಚನೆ ನೀಡಿದೆ.

ಇತರ ಬ್ರಾಂಡ್ಗಳಿಗಿಂತ ಅಧಿಕ ಬೆಲೆ ಇರುವ, ಇನ್ನೂ ಬೆಲೆ ಕಡಿತಗೊಳಿಸದ ಬ್ರಾಂಡ್ಗಳ ಕಂಪನಿಗಳು ಬೆಲೆ ಇಳಿಸುವಂತೆ ಸೂಚಿಸಲಾಗಿದೆ" ಎಂದು ಆರೋಗ್ಯ ಕಾರ್ಯದರ್ಶಿ ಸಂಜೀವ್ ಛೋಪ್ರಾ ಅವರು ಉದ್ಯಮ ಪ್ರತಿನಿಧಿಗಳ ಜತೆ ನಡೆಸಿದ ಸಭೆಯ ಬಳಿಕ ಸಚಿವಾಲಯ ಪ್ರಕಟಿಸಿದೆ.

ಉತ್ಪಾದಕರು ಹಾಗೂ ರಿಫೈನರಿಗಳು ವಿತರಕರಿಗೆ ನೀಡುವ ಬೆಲೆಯನ್ನು ಕೂಡಾ ತಕ್ಷಣದಿಂದ ಜಾರಿಯಾಗುವಂತೆ ಇಳಿಸಬೇಕು. ಈ ಮೂಲಕ ಬೆಲೆ ಇಳಿಕೆಯ ಲಾಭ ಉದ್ಯಮದಿಂದ ಜನಸಾಮಾನ್ಯರ ವರೆಗೆ ಎಲ್ಲರಿಗೂ ಲಭಿಸುವಂತಾಗಬೇಕು. ಈ ಬಗ್ಗೆ ಸಚಿವಾಲಯಕ್ಕೆ ನಿಯತವಾಗಿ ಮಾಹಿತಿ ನೀಡಬೇಕು ಎಂದು ಸ್ಪಷ್ಟಪಡಿಸಿದೆ.

ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ಖಾದ್ಯತೈಲಗಳ ಬೆಲೆ ಇಳಿಮುಖವಾಗುತ್ತಿದ್ದು, ಖಾದ್ಯತೈಲ ಉದ್ಯಮ ಮತ್ತಷ್ಟು ಬೆಲೆ ಇಳಿಸುವ ಸೂಚನೆಗಳಿವೆ ಎಂದು ಸಚಿವಾಲಯ ಹೇಳಿದೆ. ಭಾರತೀಯ ಗ್ರಾಹಕರು ತಮ್ಮ ಖಾದ್ಯತೈಲಗಳಿಗೆ ಕಡಿಮೆ ದರ ತೆರಬೇಕಾಗುವ ನಿರೀಕ್ಷೆ ಇದೆ. ಖಾದ್ಯತೈಲಗಳ ಬೆಲೆ ಇಳಿಕೆ ಹಣದುಬ್ಬರದ ಭೀತಿಯನ್ನೂ ಕಡಿಮೆ ಮಾಡಲಿದೆ ಎಂದು ಉನ್ನತ ಮೂಲಗಳು ಹೇಳಿವೆ.

## ಪಠ್ಯ ಪುಸ್ತಕಗಳ ಪರಿಷ್ಕರಣೆ ಮಾಡುವುದು ಖಚಿತ: ಸಚಿವ ಮಧು ಬಂಗಾರಪ್ಪ



ಶಿವಮೊಗ್ಗ: ಪಠ್ಯ ಪುಸ್ತಕಗಳ ಪರಿಷ್ಕರಣೆ 100% ಮಾಡುಮಾಡುತ್ತೇವೆ, ಯಾವುದೇ ಗೊಂದಲವಿಲ್ಲ ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ಶನಿವಾರ ಹೇಳಿಕೆ ನೀಡಿದ್ದಾರೆ.

ಮಕ್ಕಳಿಗೆ ಅವಶ್ಯಕತೆ ಏನಿದೆ ಅದನ್ನು ನೀಡುತ್ತೇವೆ.ಮಕ್ಕಳಿಗೆ ಏನೂ ಬೇಕು ಅದನ್ನು ನೀಡುತ್ತೇವೆ ಎಂದು ಸಿಎಂ ಸಿದ್ದರಾಮಯ್ಯ ಅವರು ಹೇಳಿದ್ದಾರೆ.

ನಮ್ಮ ಪ್ರಣಾಳಿಕೆಯಲ್ಲಿ ಪಠ್ಯ ಪುಸ್ತಕ ಪರಿಷ್ಕರಣೆ ಆಗುತ್ತದೆ ಎಂದು ತಿಳಿಸಿದ್ದೆವು .ಈಗಾಗಲೇ ಪಠ್ಯ ಪುಸ್ತಕ ಶಾಲೆಗಳಿಗೆ ಹೋಗಿದೆ. ಅದನ್ನು ತಡೆಯಲು ಅಗಲಿಲ್ಲ ಎಂದರು.

ನಾನು ಅಧಿಕಾರ ತೆಗೆದುಕೊಂಡಾಗ ಪಠ್ಯ ಪುಸ್ತಕ ಹೋಗಿ ಅಗಿತ್ತು.ಅದಕ್ಕೆ ಕಾನೂನು ಬದ್ದವಾಗಿ ತಡೆಯುವವ್ಯವಸ್ಥೆ ಇದೆ ಎಂದರು. ಬರಗೂರು ರಾಮಚಂದ್ರಪ್ಪನವರ ಜೊತೆ ಚರ್ಚೆ ನಡೆಸಲಾಗಿದೆ. ಸಿಎಂ ರವರ ನೇತೃತ್ವದಲ್ಲಿ ಎಲ್ಲಾ ನಡೆಯುತ್ತಿದೆ. ಅವರ ಆಸೆ ಸಹ ಪಠ್ಯ ಪುಸ್ತಕ ಬದಲಾವಣೆ ಮಾಡಡಬೇಕೆಂದು ಇದೆ ಎಂದರು.

ಮಕ್ಕಳ ಭವಿಷ್ಯಕ್ಕಾಗಿ ಏನ್ ಬದಲಾವಣೆ ಮಾಡಬೇಕೂ ಅದನ್ನು ಮಾಡೇ ಮಾಡುತ್ತೇವೆ.ಅದರಲ್ಲಿ ಏನೂ ಬದಲಾವಣೆ ಇಲ್ಲ ಎಂದರು. ಶಿಕ್ಷಕರ ನೇಮಕಾತಿ ವಿಚಾರದಲ್ಲಿ ನಾನು ಮಾಹಿತಿ ಪಡೆದುಕೊಂಡಿದ್ದೇನೆ.

ಎಲ್ಲಾ ವಾತಾವರಣ ಚೆನ್ನಾಗಿದೆ. ಸ್ವಲ್ಪ ಆಡಳಿತವನ್ನು ಒಂದು ಹಂತಕ್ಕೆ ತರಬೇಕಿದೆ. ಉತ್ತಮ ಅಧಿಕಾರಿಗಳು, ಶಿಕ್ಷಕರು ಹಾಗೂ ಮಕ್ಕಳಿದ್ದಾರೆ, ಪೋಷಕರು ಇದ್ದಾರೆ ಎಲ್ಲಾವನ್ನು ಸರಿಮಾಡೋಣ ಎಂದರು.

## ಕಿರುಕುಳ: ಯುವಕನಿಗೆ ಹಿಗ್ಗಾಮುಗ್ಗ ಥಳಿಸಿದ ಯುವತಿ

ಮಂಡ್ಯ: KSRTC ಬಸ್ ನಲ್ಲಿ ಪ್ರಯಾಣಿಸುತ್ತಿರುವಾಗ ಕಿರುಕುಳ ನೀಡಿದ ಯುವಕನಿಗೆ ಯುವತಿಯೋರ್ವಳು ಹಿಗ್ಗಾಮುಗ್ಗ ಥಳಿಸಿರುವ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ.

ಮಂಡ್ಯದ ಕೆಎಸ್‌ಆರ್ಟಿಸಿ ಬಸ್ ನಿಲ್ದಾಣದಲ್ಲಿ ಈ ಘಟನೆ ನಡೆದಿದೆ. ಮಂಡ್ಯದಿಂದ ಪಾಂಡವಪುರಕ್ಕೆ ತೆರಳುವ ಬಸ್ನಲ್ಲಿ ಯುವತಿ ಒಬ್ಬಳೆ ಕುಳಿತಿದ್ದಳು. ಇದನ್ನು ಗಮನಿಸಿದ ಯುವಕ ಹಿಂದಿನ ಸೀಟಿನಿಂದ ಕೀಟಲೆ ಕೊಡಲು ಶುರು ಮಾಡಿದ್ದನು. ಇದರಿಂದ ಕೋಪಗೊಂಡ ಯುವತಿ ಕುಚೇಷ್ಟೆ ಮಾಡುತ್ತಿದ್ದ ಯುವಕನಿಗೆ ಕಪಾಳಮೋಕ್ಷ ಮಾಡಿದ್ದಾಳೆ.

ಯುವಕನ ಟೀ ಶರ್ಟ್ ಹಿಡಿದು ಹಿಗ್ಗಾ ಮುಗ್ಗ ಕೆನ್ನೆಗೆ ಬಾರಿಸಿದ್ದಾಳೆ. ಇನ್ನು ಯುವತಿ ಯುವಕನಿಗೆ ಥಳಿಸಿರುವ ದೃಶ್ಯಗಳು ಮೊಬೈಲ್ ಕ್ಯಾಮರಾದಲ್ಲಿ ಸೆರೆಯಾಗಿದೆ. ಯುವತಿ ಕೈಯಲ್ಲಿ ಏಟು ತಿಂದ ಯುವಕ ಬಸ್ಸಿಂದ ಇಳಿದು ಪರಾರಿಯಾಗಿದ್ದಾನೆ.

## ಏಷ್ಯಾಕಪ್ ಟೂರ್ನಿಗೆ ಭಾರತ ತಂಡ ಪ್ರಕಟ: ವಿದೇಶಿ ನೆಲದಲ್ಲಿ ಪಾಕ್ ಜೊತೆ ಸೆಣಸಾಟ

ನವದೆಹಲಿ : ಏಷ್ಯಾ ಕಪ್ 2023ರ ಸ್ಥಳದ ವಿವಾದ ನಡುವೆ ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ ದೊಡ್ಡ ಘೋಷಣೆ ಮಾಡಿದೆ. ವಾಸ್ತವವಾಗಿ, ಮಂಡಳಿಯು ಮುಂಬರುವ ಪಂದ್ಯಾವಳಿಗೆ ತಂಡವನ್ನ ಪ್ರಕಟಿಸಿದ್ದು, ಇದಕ್ಕಾಗಿ 14 ಸದಸ್ಯರ ಮುಖ್ಯ ತಂಡವನ್ನ ಆಯ್ಕೆ ಮಾಡಲಾಗಿದೆ.

ಇನ್ನು ಭಾರತ ತಂಡ ಲೀಗ್ ಹಂತದಲ್ಲಿ ಮೂರು ಪಂದ್ಯಗಳನ್ನ ಆಡಲಿದ್ದು, ಒಂದು ಪಂದ್ಯವು ಪಾಕಿಸ್ತಾನ ವಿರುದ್ಧವೂ ನಡೆಯಲಿದೆ.

ವಾಸ್ತವವಾಗಿ, ಪುರುಷರ ಏಷ್ಯಾ ಕಪ್ಗಾಗಿ ಬಿಸಿಸಿಐ ಈ ತಂಡವನ್ನ ಬಿಡುಗಡೆ ಮಾಡಿಲ್ಲ. ವಾಸ್ತವವಾಗಿ, ಮಹಿಳಾ ಉದಯೋನ್ಮುಖ



ಏಷ್ಯಾ ಕಪ್ಗಾಗಿ ಭಾರತ ಎ ತಂಡವನ್ನು ಮತ್ತು ಅದರ ಪಂದ್ಯಗಳ ವೇಳಾಪಟ್ಟಿಯನ್ನ ಮಂಡಳಿ ಬಿಡುಗಡೆ ಮಾಡಿದೆ. ಇದಕ್ಕಾಗಿ 14 ಆಟಗಾರ–ರಿಗೆ ತಂಡದಲ್ಲಿ ಸ್ಥಾನ ನೀಡಲಾಗಿದೆ. ಭಾರತ ತಂಡ ಜೂನ್ 13ರಿಂದ ತನ್ನ ಪಂದ್ಯವಳಿ ಶುರುವಾಗಲಿದ್ದು, ಈ ಸಮಯದಲ್ಲಿ ತಂಡವು ಜೂನ್ 17ರಂದು ಪಾಕಿಸ್ತಾನ ವಿರುದ್ಧ ತನ್ನ ಪಂದ್ಯವನ್ನ ಆಡಲಿದೆ.

ಪಂದ್ಯಾವಳಿಯು ಹಾಂಗ್ ಕಾಂಗ್'ನಲ್ಲಿ ನಡೆಯಲಿದ್ದು, ಇದಕ್ಕಾಗಿ ತಂಡಗಳನ್ನ ಎ ಮತ್ತು ಬಿ ಎಂಬ ಎರಡು ಗುಂಪುಗಳಲ್ಲಿ ಇರಿಸಲಾಗಿದೆ. ಪ್ರತಿ ಗುಂಪಿನಲ್ಲಿ ನಾಲ್ಕು ತಂಡಗಳಿವೆ. 'ಬಿ' ಗುಂಪಿನಲ್ಲಿ ಬಾಂಗ್ಲಾದೇಶ 'ಎ', ಶ್ರೀಲಂಕಾ 'ಎ', ಮಲೇಷ್ಯಾ 'ಎ' ಮತ್ತು ಯುಎಇ 'ಎ' ತಂಡಗಳಿವೆ. ಇದು ಜೂನ್ 12ರಿಂದ ಪಂದ್ಯವಳಿ ಪ್ರಾರಂಭವಾಗಲಿದ್ದು, ಫೈನಲ್ ಪಂದ್ಯ ಜೂನ್ 21ರಂದು ನಡೆಯಲಿದೆ.

## ಲೋಕಸಭಾ ಚುನಾವಣೆಗೆ ಪಕ್ಷಗಳು ಅಲರ್ಟ್

ಮೈಸೂರು: ಸಿದ್ದರಾಮಯ್ಯ ಸರ್ಕಾರದ 5 ಗ್ಯಾರಂಟಿಗಳ ಘೋಷಣೆ ರಾಜ್ಯ ರಾಜ–ಕಾರಣದಲ್ಲಿ ಕಾಂಗ್ರೆಸ್ ಮೇಲುಗೈ ಸಾಧಿಸಲು ಸಹಕಾ–ರಿಯಾಗಿದ್ದು, ಈ ಘೋಷಣೆ ರಾಜ್ಯದಲ್ಲಷ್ಟೇ ರಾಷ್ಟ್ರ ರಾಜ–ಕಾರಣದ ಮೇಲೂ ಪರಿಣಾಮ ಬೀರುವ ಸಾಧ್ಯತೆಗಳಿವೆ ಎಂದು ಹೇಳಲಾಗುತ್ತಿದೆ. ಹೀಗಾಗಿ ಬಿಜೆಪಿ–ಜೆಡಿಎಸ್ ನಲ್ಲಿ ಬಿರುಗಾಳಿ ಶುರುವಾಗಿದೆ ಎನ್ನಲಾಗಿದೆ.

ಇನ್ನು ಕೆಲವೇ ತಿಂಗಳುಗಳಲ್ಲಿ ಲೋಕಸಭೆ ಚುನಾವಣೆ ನಡೆಯಲಿದ್ದು, ಇತರೆ ರಾಜ್ಯಗಳಲ್ಲೂ ವಿಧಾನಸಭಾ ಚುನಾವಣೆಗಳು ಎದುರಾಗಲಿವೆ. ಒಂದು ವೇಳೆ ಕಾಂಗ್ರೆಸ್ 5 ಗ್ಯಾರಂಟಿಗಳ ಘೋಷಣೆ ಮಾಡದೇ ಹೋಗಿದ್ದರೆ ಇದನ್ನು ದಾಳವಾಗಿ ಬಳಸಿಕೊಳ್ಳಲು ಬಿಜೆಪಿ ಹಾಗೂ ಜೆಡಿಎಸ್ ತಂತ್ರಗಳ ರೂಪಿಸಿತ್ತು.

ಆದರೀಗ ಸರ್ಕಾರ ಗ್ಯಾರಂಟಿ ಯೋಜನೆಗಳ ಘೋಷಣೆ




ಮಾಡಿರುವ ಹಿನ್ನೆಲೆಯಲ್ಲಿ ಆಡಳಿತಾರೂಢ ಪಕ್ಷವನ್ನು ಎದು–ರಿಸುವುದು ಬಿಜೆಪಿ ಹಾಗೂ ಜೆಡಿ–ಎಸ್ ಪಕ್ಷಕ್ಕೆ ದೊಡ್ಡ ಸವಾಲಾಗಿ ಪರಿಣಮಿಸಿದೆ. ಕರ್ನಾಟಕದ ಉಚಿತ ಗ್ಯಾರಂಟಿಗಳ ಮಾದ–ರಿಯಿಂದ ಪ್ರೇರಣೆ ಪಡೆದು ಶೀಘ್ರದಲ್ಲೇ ವಿಧಾನಸಭಾ ಚುನಾವಣೆಯ ನಿರೀಕ್ಷೆಯಲ್ಲಿರುವ ರಾಜಸ್ಥಾನದಲ್ಲಿ ಅಲ್ಲಿನ ಕಾಂಗ್ರೆಸ್ ಸರ್ಕಾರವು ಕೂಡಲೇ ಜಾ–ರಿಗೆ ಬರುವಂತೆ 100 ಯುನಿಟ್ ಗಳವರೆಗೆ ಉಚಿತ ವಿದ್ಯುತ್ ಪ್ರಕಟ ಮಾಡಿದೆ.

ಜೊತೆಗೆ ಆಂಧ್ರಪ್ರದೇಶ, ತೆಲಂಗಾಣ ರಾಜ್ಯಗಳಲ್ಲೂ ಉಚಿತ ಕೊಡುಗೆಗಳ ಘೋಷಣೆ ಜೋರಾಗಿದೆ. ಇನ್ನು ಮುಂದಿನ ದಿನಗಳಲ್ಲಿ ಚುನಾವಣೆಗೆ ಸಜ್ಜಾಗಲಿರುವ ಮಧ್ಯಪ್ರದೇಶ, ಛತ್ತೀಸ್ಗಢ, ತೆಲಂಗಾಣದಂತಹ ರಾಜ್ಯಗಳಲ್ಲೂ ಈ ಉಚಿತ ಯೋಜನೆಗಳು ದೊಡ್ಡ ಪ್ರಮಾಣದಲ್ಲಿ ಸದ್ದು ಮಾಡುವ ಸಾಧ್ಯತೆಗಳಿವೆ. ರಾಜ್ಯ ಕಾಂಗ್ರೆಸ್ ಸರ್ಕಾರವು ನಿರೀಕ್ಷೆಗಿಂತಲೂ ವೇಗವಾಗಿ ಸಮರ್ಪಕವಾಗಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಘೋಷಣೆ ಮಾಡಿದೆ. ಈ ಮೂಲಕ ಹೊಸ ಕರ್ನಾಟಕ ಮಾದರಿ ರಾಜಕೀಯಕ್ಕೆ ಮುನ್ನುಡಿ ಬರೆದಿದ್ದು, ಕರ್ನಾಟಕ ಗ್ಯಾರಂಟಿ ಮಾದರಿಯ ಬೇರೆ ರಾಜ್ಯಗಳಿಗೂ ಮಾದರಿಯಾಗಿ ರಾಷ್ಟ್ರ ರಾಜ–ಕೀಯದಲ್ಲಿ ಸ್ಥಿತ್ಯಂತರ ಸೃಷ್ಟಿಸುವ ಸಾಧ್ಯತೆಗಳಿವೆ.

ಮತದಾರರು ಗ್ಯಾರಂಟಿ ಯೋಜನೆಗಳಿಗೆ ಈ ಪರಿ ಮನ ಸೋಲುವುದು ಖಾತ್ರಿಯಾಗಿರುವುದರಿಂದ ಬೇರೆ ರಾಜ್ಯಗಳು ಹಾಗೂ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವು ಇದೇ ಉಚಿತ ಗ್ಯಾರಂಟಿಗಳ ಮೊರೆ ಹೋಗುವ ಸಾಧ್ಯತೆಗಳಿವೆ ಎಂದು ಹೇಳಲಾಗುತ್ತಿದೆ. ದೇಶದಾದ್ಯಂತ ತನ್ನ ಶಕ್ತಿಯನ್ನು ಪ್ರದರ್ಶಿಸಿ ಬಿಜೆಪಿ ಪ್ರಬಲ ಪಕ್ಷವಾಗಿ ಬೆಳೆದಿದೆ. 2019ರ ಲೋಕಸಭೆ ಚುನಾವಣೆಯಲ್ಲಿ ರಾಜ್ಯದಲ್ಲಿ 25 ಸ್ಥಾನಗಳನ್ನು ಬಿಜೆಪಿ ಗೆದ್ದಿತ್ತು. 2024ರ ಚುನಾವಣೆಯಲ್ಲಿ ಇದೇ ರೀತಿಯ ಫಲಿತಾಂಶ ಪಡೆಯುವ ಉತ್ಸಾಹದಲ್ಲಿದೆ.

ದಕ್ಷಿಣ ಭಾರತದಲ್ಲಿ ಕರ್ನಾಟಕವನ್ನು ಬಿಜೆಪಿಯ ಹೆಬ್ಬಾಗಿಲು ಎಂದೇ ಪರಿಗಣಿಸಲಾಗುತ್ತಿದೆ. ರಾಜಕೀಯ ವಿಮರ್ಶಕ ಮುಜಾಫರ್ ಅಸಾದಿ ಮಾತನಾಡಿ, ಆಡಳಿತಾರೂಢ ಕಾಂಗ್ರೆಸ್ ಬಿಜೆಪಿ ವಿರುದ್ಧ ಆಡಳಿತ ವಿರೋಧಿ ತಂತ್ರಗಳನ್ನು ಮುಂದುವರಿಸಬೇಕು. ಎಲ್ಲಾ ಹಂತಗಳಲ್ಲಿ ಭ್ರಷ್ಟಾಚಾರವನ್ನು ತಡೆಯಲು ಶ್ರಮಿಸಬೇಕು. ಐದು ಗ್ಯಾರಂಟಿ ಯೋಜನೆಗಳ ಜನ–ರಿಗೆ ತಲುಪಿಸುವಲ್ಲಿ ಎಲ್ಲಾ ರೀತಿಯ ಪ್ರಯತ್ನಗಳನ್ನೂ ಮಾಡಬೇಕೆಂದು ಹೇಳಿದ್ದಾರೆ.

## ಕುಸ್ತಿಪಟುಗಳ ಪ್ರತಿಭಟನೆಗೆ ರೈತ ಸಂಘ ಸಾಥ್



ನವದೆಹಲಿ: ಭಾರತೀಯ ಕುಸ್ತಿ ಫೆಡರೇಶನ್ ಅಧ್ಯಕ್ಷ ಬ್ರಿಜ್ ಭೂಷಣ್ ಶರಣ್ ಸಿಂಗ್ ವಿರುದ್ಧ ಲೈಂಗಿಕ ಕಿರುಕುಳ ಆರೋಪ ಹೊರಿಸಿ ದೆಹಲಿಯ ಜಂತರ್ ಮಂತರ್‌ನಲ್ಲಿ ನಡೆಸುತ್ತಿರುವ ಕುಸ್ತಿಪಟುಗಳ ಪ್ರತಿಭಟನೆಗೆ ರೈತಸಂಘ ಬೆಂಬಲ ನೀಡಿದೆ. ಬ್ರಿಜ್ ಭೂಷಣ್ ನನ್ನ ಜೂನ್ 9ರ ಒಳಗೆ ಬಂಧಿಸುವಂತೆ ಕೇಂದ್ರ ಸರ್ಕಾರಕ್ಕೆ ಗಡುವು ನೀಡಿದೆ. ಈ ಕುರಿತು ಮಾತನಾಡಿರುವ ರೈತ ನಾಯಕ ರಾಕೇಶ್ ಟಿಕಾಯತ್, ಬಿಜೆಪಿ ಸಂಸದನೂ ಆಗಿರುವ ಭೂಷಣ್ ಅಥ್ಲೀಟ್‌ಗಳಿಗೆ ಲೈಂಗಿಕ ಕಿರುಕುಳ ನೀಡಿದ್ದಾರೆ. ಡಬ್ಲ್ಯೂಎಫ್‌ಐ ಮುಖ್ಯಸ್ಥನ ಸ್ಥಾನವನ್ನ ದುರುಪಯೋಗಪಡಿಸಿಕೊಂಡಿದ್ದಾರೆ. ಮೇ 9ರ ಒಳಗೆ ಬ್ರಿಜ್ ಭೂಷಣ್‌ನನ್ನ ಬಂಧಿಸಬೇಕು. ಜೊತೆಗೆ ಕುಸ್ತಿಪಟುಗಳ ವಿರುದ್ಧ ದಾಖಲಿಸಿರುವ ಪ್ರಕರಣಗಳನ್ನ ಹಿಂಪಡೆಯಬೇಕು. ಇಲ್ಲದಿದ್ದರೇ ದೊಡ್ಡ ಮಟ್ಟದ ಪ್ರತಿಭಟನೆ ಎದುರಿಸಬೇಕಾಗುತ್ತದೆ. ದೇಶಾದ್ಯಂತ ಪಂಚಾಯ್ತಿ ನಡೆಸುವ ಮೂಲಕ ಪ್ರತಿಭಟನೆ ತೀವ್ರಗೊಳಿಸುತ್ತೇವೆ ಎಂದು ಎಚ್ಚರಿಕೆ ನೀಡಿದ್ದಾರೆ.

ಈ ನಡುವೆ ಕುಸ್ತಿಪಟುಗಳ ಮನವೊಲಿಸುವ ಕ್ರೀಡಾ ಸಚಿವ ಅನುರಾಗ್ ಠಾಕೂರ್ ಅವರ ಪ್ರಯತ್ನವೂ ವಿಫಲವಾಗಿದೆ. ಅನುರಾಗ್ ಠಾಕೂರ್ ಕುಸ್ತಿಪಟುಗಳಿಗೆ ನ್ಯಾಯ ಒದಗಿಸುವುದಾಗಿ ಭರವಸೆ ನೀಡಿದರೂ, ಅದಕ್ಕೆ ಒಪ್ಪದ ಕುಸ್ತಿಪಟುಗಳು ಭೂಷಣ್ ಬಂಧನವಾಗಲೇಬೇಕೆಂದು ಪಟ್ಟು ಹಿಡಿದಿದ್ದಾರೆ. ಕಳೆದ ಭಾನುವಾರ ನೂತನ ಸಂಸತ್ ಭವನ ಉದ್ಘಾಟನೆ ದಿನದಂದು ಕುಸ್ತಿಪಟುಗಳು ಭವನದ ಎದುರು ಪ್ರತಿಭಟನೆ ನಡೆಸಲು ಮೆರವಣಿಗೆ ಹೊರಟಿದ್ದರು. ಈ ವೇಳೆ ದೆಹಲಿ ಪೊಲೀಸರು ಅವರನ್ನು ಬ್ಯಾರಿಕೇಡ್ ಹಾಕಿ ತಡೆದರು. ಬ್ಯಾರಿಕೇಡ್ ಸರಿಸಿ ಕುಸ್ತಿಪಟುಗಳು ಮುನ್ನುಗಲು ಮುಂದಾದಾಗ ಅವರ ಮೇಲೆ ಹಲ್ಲೆ ನಡೆಸಲಾಗಿತ್ತು. ಅಲ್ಲದೇ ಪ್ರಮುಖ ಕ್ರೀಡಾಪಟುಗಳ ವಿರುದ್ಧ ಎಫ್‌ಐಆರ್ ಸಹ ದಾಖಲಿಸಲಾಗಿದೆ. ಇದರಿಂದ ಬೇಸತ್ತಿದ್ದ ಕುಸ್ತಿಪಟುಗಳು ತಾವು ಗೆದ್ದ ಪದಕಗಳನ್ನ ಗಂಗಾ ನದಿಗೆ ಎಸೆಯಲು ತೆರಳಿದ್ದರು. ಬಳಿಕ ರೈತಸಂಘದ ನಾಯಕರು ಮನವೊಲಿಸಿ ಕರೆತಂದಿದ್ದರು.

## ಯುವತಿಗೆ ಚೂರಿ ಇರಿದು ಆತ್ಮಹತ್ಯೆಗೆ ಶರಣಾದ ಪಾಗಲ್ ಪ್ರೇಮಿ

ನವದೆಹಲಿ: ಪಾಗಲ್ ಪ್ರೇಮಿಯ ಪ್ರೀತಿಯ ಫಲಿತಾಂಶ ವು ಭಯಾನಕವಾಗಿದೆ. ದೆಹಲಿಯ ರೋಹಿಣಿ ಜಿಲ್ಲೆಯ ಬೇಗಂಪುರದಲ್ಲಿ ವಾಸವಿದ್ದ ಅಮಿತ್ ಎಂಬಾತ ತನ್ನ ಪ್ರೀತಿಯನ್ನು ಒಪ್ಪಿಕೊಳ್ಳದ ಯುವತಿಗೆ ಚಾಕುವಿನಿಂದ ಇರಿದು ನಂತರ ತಾನು ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಮಧ್ಯಾಹ್ನ ಕಚೇರಿಗೆ ಬಂದ ಅಮಿತ್ ಯುವತಿಗೆ ಇರಿದಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಈ ವೇಳೆ ಆತನನ್ನು ಸಿಬ್ಬಂದಿ ತಡೆದಿದ್ದಾರೆ. ಇನ್ನು ಚೂರಿ ಇರಿತದಿಂದ ಗಾಯಗೊಂಡಿದ್ದ ಯುವತಿಯನ್ನು ಕೂಡಲೇ ಆಸ್ಪತ್ರೆಗೆ ಕರೆದೊಯ್ಯಲಾಯಿತು. ನಂತರ ಕಚೇರಿಗೆ ಬಂದ ಬಳಿಕ ಅಮಿತ್ ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಸದ್ಯ ಪೊಲೀಸರು ಈ ಬಗ್ಗೆ ತನಿಖೆ ನಡೆಸುತ್ತಿದ್ದಾರೆ.

## ಕೈಮಗ್ಗು ಮತ್ತು ಜವಳಿ ಇಲಾಖೆ: ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

ಬೆಳಗಾವಿ: ಕೈಮಗ್ಗ ಮತ್ತು ವಿದ್ಯುತ್ ಮಗ್ಗಗಳ ನೇಕಾರರಿಗೆ, ನೇಕಾರಿಕೆ ಉದ್ದೇಶಕ್ಕಾಗಿ ರಾಜ್ಯದ ನೇಕಾರರ ಸಹಕಾರ ಸಂಘಗಳು/ ಕೈಗಾರಿಕಾ ಸಹಕಾರ ಬ್ಯಾಂಕುಗಳು, ಕೃಷಿಯೇತರ / ಕೃಷಿ ಪತ್ತಿನ ಸಹಕಾರ ಸಂಘಗಳು, ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್‌ಗಳು ಹಾಗೂ ಇತರೆ ಸಹಕಾರ ಬ್ಯಾಂಕಗಳು ಕಡಿಮೆ ಬಡ್ಡಿ ದರದಲ್ಲಿ ಸಾಹಾಯಧನಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಶೂನ್ಯ ಬಡ್ಡಿ ದರದಲ್ಲಿ ರೂ.2. ಲಕ್ಷಗಳವರೆಗೆ ನೀಡುವ ಸಾಲಕ್ಕೆ ಗರಿಷ್ಟ ಶೇ.11 ರಷ್ಟು ಬಡ್ಡಿ ಸಹಾಯಧನ ಮತ್ತು ಶೇ.3 ರ ಬಡ್ಡಿ ದರದಲ್ಲಿ ರೂ.2. ಲಕ್ಷಗಳಿಂದ ರೂ.5. ಲಕ್ಷಗಳ ವರೆಗೆ ನೀಡುವ ಸಾಲಕ್ಕೆ ಗರಿಷ್ಟ ಶೇ.8 ರಷ್ಟು ಬಡ್ಡಿ ಸಹಾಯಧನ ಹಾಗೂ ರಾಜ್ಯದ ಸಹಕಾರಿ ವಾಣಿಜ್ಯ ಬ್ಯಾಂಕುಗಳ ಮೂಲಕ ಪಡೆಯುವ ಸಾಲದ ಮೇಲೆ ಶೇ.8 ರಷ್ಟು ಬಡ್ಡಿ ಸಹಾಯಧನ ಒದಗಿಸಲಾಗುವುದು.

ಯೋಜನೆಗೆ ಸಂಬಂಧಿಸಿದಂತೆ ಸಾಲದ ಅವಶ್ಯಕತೆ ಇರುವ ನೇಕಾರರು https://dev.kardht.com ವೆಬ್‌ಸೈಟ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಕಛೇರಿ ಅಥವಾ ಕಛೇರಿ ದೂರವಾಣಿ ಸಂಖ್ಯೆ: 0831–2950674 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಪಂಚಾಯತ್, ಕೈಮಗ್ಗು ಮತ್ತು ಜವಳಿ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮೆಟ್ರಿಕ್ ಪೂರ್ವ ಬಾಲಕರ ಹಾಗೂ ಬಾಲಕಿಯರ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

ಬೆಳಗಾವಿ: 2023–24 ನೇ ಸಾಲಿನ ಹಿಂದುಳಿದ ವರ್ಗಗಳ ಕಲ್ಯಾಣ, ಸಮಾಜ ಕಲ್ಯಾಣ, ಪರಿಶಿಷ್ಟ ವರ್ಗಗಳ ಕಲ್ಯಾಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳ ವತಿಯಿಂದ ಮೆಟ್ರಿಕ್ ಪೂರ್ವ ಬಾಲಕರ ಹಾಗೂ ಬಾಲಕಿಯರ ವಿದ್ಯಾರ್ಥಿ ನಿಲಯಗಳ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಂದ ಆನ್‌ಲೈನ್ (ರಾಜ್ಯ ವಿದ್ಯಾರ್ಥಿನಿಲಯ ತಂತ್ರಾಂಶದ) ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

5ನೇ ತರಗತಿಯಿಂದ 10ನೇ ತರಗತಿಯವರೆಗೆ ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳು ತಮ್ಮ SATS ID ಯೊಂದಿಗೆ ರಾಜ್ಯ ವಿದ್ಯಾರ್ಥಿನಿಲಯ ತಂತ್ರಾಂಶದ ವೆಬ್ ಸೈಟ್ http://shp.karnataka.gov.in/ ನಲ್ಲಿ ಅರ್ಜಿಗಳನ್ನು ಸಲ್ಲಿಸಬಹುದಾಗಿದ್ದು, ಅರ್ಜಿ ಸಲ್ಲಿಸಲು ಜೂನ್ 15 2023 ರಂದು ಕೊನೆಯ ದಿನಾಂಕ ವಾಗಿರುತ್ತದೆ.

ವಿಶೇಷ ಸೂಚನೆ: ವಿದ್ಯಾರ್ಥಿಗಳು 2023 24ನೇ ಸಾಲಿನಲ್ಲಿ ಬೇರೆ ಶಾಲೆಗಳಿಗೆ ಪ್ರವೇಶ ಪಡೆದಿದ್ದರೆ ಸದರಿ ವಿದ್ಯಾರ್ಥಿಗಳ ಖಂಖಿಖ ಖಆ ಯನ್ನು ಪ್ರಸಕ್ತ ಶಾಲೆಯಲ್ಲಿ ಸಂಬಂಧಿಸಿದ ಮಾಹಿತಿಯನ್ನು ಇಂಧಿಕರಿಸಿ ಅರ್ಜಿಗಳನ್ನು ಸಲ್ಲಿಸಬಹುದು ಎಂದು ಬೆಳಗಾವಿ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿಗಳು ಪ್ರಕಣೆಯಲ್ಲಿ ತಿಳಿಸಿದ್ದಾರೆ.

## ಪ್ರಧಾನ ಮಂತ್ರಿ ವಿಕಾಸ ಯೋಜನೆ ಸೆ.17 ರಂದು ಚಾಲನೆ

ಬೆಳಗಾವಿ: ಭಾರತ ಸರ್ಕಾರದ ಎಂ.ಎಸ್.ಎಂ.ಇ. ಮಂತ್ರಾಲಯವು ಹೊಸ ಯೋಜನೆ ಪ್ರಧಾನ ಮಂತ್ರಿ ವಿಕಾಸ ಯೋಜನೆಯನ್ನು ಅನುಷ್ಠಾನಗೊಳಿಸಲು ಉದ್ದೇಶಿಸಿದು, ಯೋಜನೆಯನ್ನು ಸೇಪ್ಟೆಂಬರ್. 17 2023 ರಂದು ದೇಶಾದ್ಯಂತ ಪ್ರಧಾನ ಮಂತ್ರಿಗಳು ಚಾಲನೆ ನೀಡಲಿದ್ದಾರೆ,

ಕಾರಣ ಬೆಳಗಾವಿ ಜಿಲ್ಲೆಯ ವಿವಿಧ ಆನುವಂಶಿಕ ಕರಕುಶಲಕರ್ಮಿಗಳಾದ ಬಡಿಗತನ, ಕ್ಷೌರಿಕ, ದೋಬಿ, ಕಲ್ಲು ಒಡೆಯುವುದು (ಕಲ್ಲು ಕುಟುಕ), ಕಲ್ಲು ಕೆತ್ತನೆ, ಚರ್ಮಗಾರಿಕೆ, ಗೌಂಡಿ ಕೆಲಸ, ಕಮ್ಮಾರಿಕೆ, ಕುಂಬಾರಿಕೆ, ಕಸೂತಿ, ಬೆತ್ತದ ಕೆಲಸ, ಕರಕುಶಲ ವಸ್ತು ತಯಾರಿಸುವುದು, ಬಿದಿರು ಬುಟ್ಟಿ ಹೆಣೆಯುವುದು ಹಾಗೂ ಇತರೆ ಅನುವಂಶಿಕ ಕರಕುಶಲಕರ್ಮಿಗಳ ಚಟುವಟಿಕೆ ಮಾಡುತ್ತಿರುವ ಕುಶಲಕರ್ಮಿಗಳ ದತ್ತಾಂಶ ಸಂಗ್ರಹಿಸ ಬೇಕಾಗಿರುತ್ತದೆ.

ಸದರಿ ಕುಶಲಕರ್ಮಿಗಳು ಜೂ.12 2023 ರೊಳಗಾಗಿ ಗೂಗಲ್ ಫಾರ್ಮ **https://docs.google.com/forms/d/e/1FAIpQLSeRr25CVcbzLfLzz7l8E7OvHa6rYqA-kz6huKO6cRNgyJy2Fg/viewform?pli=1** ಲಿಂಕ್‌ನಲ್ಲಿ ವಿವರಗಳನ್ನು ಅಳವಡಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಬೆಳಗಾವಿ ಕೈಗಾರಿಕಾ ವಿಸ್ತರಣಾಧಿಕಾರಿಗಳು, ಮೊಬೈಲ್ ಸಂಖ್ಯೆ (9448866919) ಖಾನಾಪೂರ (6362546707) ರವರನ್ನು ಸಂಪರ್ಕಿಸಬಹುದು ಹಾಗೂ ಬೆಳಗಾವಿ ಜಿಲ್ಲಾ ಕೈಗಾರಿಕಾ ಕೇಂದ್ರ, ಕಚೇರಿಯ ವೇಳೆಯಲ್ಲಿ ಸಂಪರ್ಕಿಸಿ ಮಾಹಿತಿ ಪಡೆಯಬಹುದು ಎಂದು ಜಿಲ್ಲಾ ಕೈಗಾರಿಕಾ ಕೇಂದ್ರ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಂದಾಯ ಇಲಾಖೆಯ ಅಧಿಕಾರಿಗಳ ಜಿಲ್ಲಾಮಟ್ಟದ ಸಭೆ

# ಗ್ಯಾರಂಟಿ ಗಳ ಸಮರ್ಪಕ ಅನುಷ್ಠಾನ; ಸಂಭವನೀಯ ಪ್ರವಾಹ ನಿರ್ವಹಣೆಗೆ ಅಗತ್ಯ ಸಿದ್ಧತೆ ಮಾಡಿಕೊಳ್ಳಲು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ನಿರ್ದೇಶನ



ಬೆಳಗಾವಿ: ಗೃಹಲಕ್ಷ್ಮೀ, ಯುವನಿಧಿ, ಅನ್ನಭಾಗ್ಯ ಸೇರಿದಂತೆ ಐದೂ "ಗ್ಯಾರಂಟಿ"ಗಳನ್ನು ಜಾರಿಗೊಳಿಸಲಾಗುವುದು ಎಂದು ಸರಕಾರ ಘೋಷಿಸಿದೆ. ಇವುಗಳ ಸಮರ್ಪಕ ಅನುಷ್ಠಾನ, ಫಲಾನುಭವಿಗಳ ಗುರುತಿಸುವಿಕೆ ಹಾಗೂ ಜಿಲ್ಲೆಯಲ್ಲಿ ಸಂಭವನೀಯ ಪ್ರವಾಹ ನಿರ್ವಹಣೆಗೆ ಎಲ್ಲ ರೀತಿಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಕಂದಾಯ ಇಲಾಖೆಯ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಪ್ರವಾಹ ನಿರ್ವಹಣೆ ಹಾಗೂ ವಿವಿಧ ಯೋಜನೆಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಶನಿವಾರ (ಜೂ.3) ನಡೆದ ಉಪ ವಿಭಾಗಾಧಿಕಾರಿಗಳು ಹಾಗೂ ತಹಶಿಲ್ದಾರರ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಐದು ಗ್ಯಾರಂಟಿ ಗಳನ್ನು ಸರಕಾರ ಅನುಷ್ಠಾನಗೊಳಿಸುತ್ತಿದ್ದು, ಕೆಲವು ಗ್ಯಾರಂಟಿ ಯೋಜನೆಗೆ ಸಂಬಂಧಿಸಿದಂತೆ ಅರ್ಜಿಗಳನ್ನು ಆಹ್ವಾನಿಸಲಾಗುವುದು ಎಂದು ತಿಳಿಸಲಾಗಿರುತ್ತದೆ. ಈ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಎಲ್ಲ ಅಧಿಕಾರಿಗಳು ಮತ್ತು ಸಿಬ್ಬಂದಿ ದಕ್ಷತೆ ಹಾಗೂ ಜಾಗರೂಕತೆಯಿಂದ ಕೆಲಸ ಮಾಡಬೇಕಿದೆ ಎಂದರು.

ಸರಕಾರದ ಮಾರ್ಗಸೂಚಿಂಯ ಪ್ರಕಾರ ಐದೂ ಗ್ಯಾರಂಟಿಗಳ ಅನುಷ್ಠಾನಗೊಳಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯ. ಫಲಾನುಭವಿಗಳ ಆಯ್ಕೆ ಸೇರಿದಂತೆ ಪ್ರತಿಯೊಂದು ಕಾರ್ಯವು ಕಟ್ಟುನಿಟ್ಟಾಗಿ ಸರಕಾರದ ಮಾರ್ಗದರ್ಶನ ಪ್ರಕಾರ ಕೆಲಸ ಮಾಡಬೇಕಿದೆ.

**ಕಾಳಜಿ ಕೇಂದ್ರ–ಅಗತ್ಯ ಸಿದ್ಧತೆಗೆ ಸೂಚನೆ:**

ಸಂಭವನೀಯ ಪ್ರವಾಹ ಸಂದರ್ಭದಲ್ಲಿ ಯಾವುದೇ ರೀತಿಯ ಪ್ರಾಣಹಾನಿ ಆಗದಂತೆ ಎಲ್ಲ ಅಗತ್ಯ ಮುನ್ನೆಚ್ಚರಿಕೆ ತೆಗೆದುಕೊಳ್ಳಬೇಕು.

ಒಂದು ವೇಳೆ ಎಲ್ಲಿಯಾದರೂ ಪ್ರಕೃತಿ ವಿಕೋಪದಿಂದ ಜನರು ಅಥವಾ ಜಾನುವಾರುಗಳ ಜೀವಹಾನಿ ವರದಿಯಾದರೆ ಅಂತಹ ಸಂದರ್ಭಗಳಲ್ಲಿ 24 ಗಂಟೆಯ ಒಳಗಾಗಿ ಪರಿಹಾರವನ್ನು ವಿತರಿಸಲು ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಎಲ್ಲ ಉಪ ವಿಭಾಗಾಧಿಕಾರಿ ಹಾಗೂ ತಹಶಿಲ್ದಾರರಿಗೆ ಕಟ್ಟುನಿಟ್ಟಿನ ಸೂಚನೆಯನ್ನು ನೀಡಿದರು.

ಪ್ರವಾಹ ಸಂದರ್ಭದಲ್ಲಿ ಮನೆಗಳಿಗೆ ನೀರು ನುಗ್ಗಿದ ಸಂದರ್ಭದಲ್ಲಿ ಹಾನಿ ಉಂಟಾಗಿರುತ್ತದೆ. ಆದ್ದರಿಂದ ಹಾನಿಯಾದ ದಾಖಲೆಗಳನ್ನು ಒದಗಿಸಬೇಕಿರುವುದರಿಂದ ಸಂಬಂಧಿಸಿದ ಅಧಿಕಾರಿಗಳು ಮತ್ತು ಸಿಬ್ಬಂದಿಯು ಕೂಡಲೇ ಛಾಯಾಚಿತ್ರ–ವಿಡಿಯೋ ಚಿತ್ರೀಕರಣ ಮಾಡಬೇಕು.

ಪ್ರವಾಹ ಪರಿಸ್ಥಿತಿ ಎದುರಾದಾಗ ಅಗತ್ಯವಿರುವ ಕಡೆಗಳಲ್ಲಿ ಜನರನ್ನು ಕೂಡಲೇ ಕಾಳಜಿ ಕೇಂದ್ರಗಳಿಗೆ ಸ್ಥಳಾಂತರಿಸಬೇಕು. ಕಾಳಜಿ ಕೇಂದ್ರದಲ್ಲಿ ಉತ್ತಮ ಊಟೋಪಹಾರದ ವ್ಯವಸ್ಥ ಕಲ್ಪಿಸಬೇಕು.

ಪ್ರವಾಹ ಸಂಭವಿರುವ ಸ್ಥಳಗಳಲ್ಲಿ ಗುರುತಿಸಲಾಗಿರುವ ಕಾಳಜಿ ಕೇಂದ್ರಗಳನ್ನು ಮುಂಚಿತವಾಗಿಯೇ ಎಲ್ಲ ಅಧಿಕಾರಿಗಳು ಖುದ್ದಾಗಿ ಪರಿಶೀಲಿಸಿ ಪ್ರತಿಯೊಂದನ್ನು ಸಿದ್ಧವಾಗಿಟ್ಟುಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ಎರಡನೇ ಅವಧಿಗೆ ಗ್ರಾಪಂ ಅಧ್ಯಕ್ಷ–ಉಪಾಧ್ಯಕ್ಷರ ಮೀಸಲಾತಿ ನಿಗದಿಗೆ ತಾಲ್ಲೂಕುವಾರು ಸಭೆ:

ಸರಕಾರದ ಮಾರ್ಗಸೂಚಿ ಪ್ರಕಾರ ಎರಡನೇ ಅವಧಿಗೆ ಗ್ರಾಮ ಪಂಚಾಯತಿ ಅಧ್ಯಕ್ಷ–ಉಪಾಧ್ಯಕ್ಷರ ಮೀಸಲಾತಿ ನಿಗದಿಗೆ ಸಂಬಂಧಿಸಿದಂತೆ ಜೂನ್ 9 ರಿಂದ 21ರವರೆಗೆ ಜಿಲ್ಲೆಯ ಎಲ್ಲ ತಾಲ್ಲೂಕುಗಳಲ್ಲಿ ಆಯಾ ತಾಲ್ಲೂಕುಗಳಲ್ಲಿ ಪ್ರತ್ಯೇಕವಾಗಿ ಸಭೆಯನ್ನು ನಡೆಸಲಾಗುವುದು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯತ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ನೇತೃತ್ವದಲ್ಲಿ ಈ ಪ್ರಕ್ರಿಯೆ ನಡೆಯಲಿದೆ.

ಅದೇ ದಿನಗಳಂದು ಆಯಾ ತಾಲ್ಲೂಕಿಗೆ ಸಂಬಂಧಿಸಿದಂತೆ ಪ್ರವಾಹ ನಿರ್ವಹಣೆ ಹಾಗೂ ಗ್ಯಾರಂಟಿ ಅನುಷ್ಠಾನ, ಸಾರ್ವಜನಿಕ ಅಹವಾಲುಗಳ ಕುರಿತು

ತಾಲ್ಲೂಕು ಮಟ್ಟದ ಅಧಿಕಾರಿಗಳ ಸಭೆಯನ್ನು ಕೂಡ ಪ್ರತ್ಯೇಕವಾಗಿ ನಡೆಸಲಾಗುವುದು.

ಇದೇ ಸಂದರ್ಭದಲ್ಲಿ ಸಾರ್ವಜನಿಕರ ಭೇಟಿ ಹಾಗೂ ಅಹವಾಲು ಆಲಿಕೆಗೂ ಅವಕಾಶವನ್ನು ಕಲ್ಪಿಸಲಾಗುವುದು ಎಂದು ಜಿಲ್ಲಾಧಿಕಾರಿ ತಿಳಿಸಿದರು.

**ಬೆಳೆಹಾನಿ– ಪರಿಹಾರ ಪೋರ್ಟಲ್ ನಲ್ಲಿ ಮಾಹಿತಿ ಭರ್ತಿ:**

ಜಿಲ್ಲೆಯಲ್ಲಿ ಇತ್ತೀಚಿನ ಮಳೆಯಿಂದ ಕೃಷಿ ಹಾಗೂ ತೋಟಗಾರಿಕೆ ಬೆಳೆಹಾನಿಗೆ ಸಂಬಂಧಿಸಿದಂತೆ ಜಂಟಿ ಸಮೀಕ್ಷೆ ನಡೆಸಿ ಹಾನಿಯ ಕುರಿತು ಪರಿಹಾರ ಪೋರ್ಟಲ್ ನಲ್ಲಿ ಮಾಹಿತಿಯನ್ನು ದಾಖಲಿಸಲಾಗಿದೆ.

ಬೇಸಿಗೆ ತಾಪ ಹೆಚ್ಚಾಗಿರುವುದರಿಂದ ಜಿಲ್ಲೆಯ ಕೆಲವೆಡೆ ಕುಡಿಯುವ ನೀರಿನ ಸಮಸ್ಯೆಗಳು ಕಂಡುಬರುತ್ತವೆ.

ಈ ಕುರಿತು ಅಧಿಕಾರಿಗಳು ಸ್ಥಳೀಯ ಮಟ್ಟದಲ್ಲಿ ಸಭೆಗಳನ್ನು ನಡೆಸಿ ಅಗತ್ಯವಿರುವ ಕಡೆಗಳಲ್ಲಿ ಟ್ಯಾಂಕರ್ ಮೂಲಕ ನೀರು ಪೂರೈಕೆ ಹಾಗೂ ಕೊಳವೆ ಬಾವಿ ದುರಸ್ತಿಗೆ ಕ್ರಮ ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು.

ರೈತರ ಆತ್ಮಹತ್ಯೆ ಪ್ರಕರಣಗಳಲ್ಲಿ ಪರಿಹಾರ ವಿತರಣೆಗೆ ಸಂಬಂಧಿಸಿದಂತೆ ಶೀಘ್ರ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

ಇದೇ ರೀತಿ ಹಾವು ಕಡಿತದಿಂದ ಉಂಟಾದ ಸಾವುಗಳು ಸೇರಿದಂತೆ ಯಾವುದೇ ಬಗೆಯ ಪರಿಹಾರ ಬಾಕಿ ಪ್ರಕರಣಗಳ ತ್ವರಿತ ವಿಲೇವಾರಿಗೆ ಆದ್ಯತೆ ನೀಡಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ನಿರ್ದೇಶನ ನೀಡಿದರು.

ಬಹುದಿನಗಳಿಂದ ಬಾಕಿ ಉಳಿದಿರುವ ಕೆಜೆಪಿ, ದರಖಾಸ್ತು ಪ್ರಕರಣಗಳನ್ನು ಕಾಲಮಿತಿಯಲ್ಲಿ ವಿಲೇವಾರಿ ಮಾಡಬೇಕು. ತಹಶೀಲ್ದಾರರು, ಭೂದಾಖಲೆಗಳ ಇಲಾಖೆಯ ಸಹಾಯಕ ನಿರ್ದೇಶಕರು ಹಾಗೂ ಸರ್ವೇಯರ್ ಗಳು ಪ್ರತಿ ಹದಿನೈದು ದಿನಗಳಿಗೊಮ್ಮೆ ಸಭೆಯನ್ನು ನಡೆಸಬೇಕು.

ಸಾರ್ವಜನಿಕರ ಯಾವುದೇ ಕೆಲಸಗಳು ಬಾಕಿ ಉಳಿಯದಂತೆ ತ್ವರಿತವಾಗಿ ಪೂರ್ಣಗೊಳಿಸಬೇಕು ಎಂದು ಸೂಚನೆ ನೀಡಿದರು.

ವಿತರಣೆಗೆ ಬಾಕಿ ಇರುವ ಹಕ್ಕುಪತ್ರಗಳನ್ನು ಕೂಡಲೇ ವಿತರಿಸಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಹೇಳಿದರು.

ಚಿಕ್ಕೋಡಿ ಉಪ ವಿಭಾಗಾಧಿಕಾರಿ ಮಾಧವ್ ಗಿತ್ತೆ, ಬೆಳಗಾವಿ ಉಪ ವಿಭಾಗಾಧಿಕಾರಿ ಬಲರಾಮ್ ಚವಾಣ, ಬೈಲಹೊಂಗಲ ಉಪ ವಿಭಾಗಾಧಿಕಾರಿ ಪ್ರಭಾವತಿ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ್ ಕಂಕಣವಾಡಿ ಸೇರಿದಂತೆ ಜಿಲ್ಲೆಯ ಎಲ್ಲ ತಹಶೀಲ್ದಾರರು ಸಭೆಯಲ್ಲಿ ಉಪಸ್ಥಿತರಿದ್ದರು.

# ಸಣ್ಣ ರೈತರಿಗೆ ಸೌರಶಕ್ತಿ ಚಾಲಿತ ಸ್ಮಾರ್ಟ್ ಫಾರ್ಮಿಂಗ್



ಹುಬ್ಬಳ್ಳಿ : ಸಣ್ಣ ಹಿಡುವಳಿ ಫಾರ್ಮ್‌ಗಳು ನಮ್ಮ ಜಾಗತಿಕ ಆಹಾರದ ಮೂರನೇ ಒಂದು ಭಾಗ ಉತ್ಪಾದಿಸುತ್ತವೆ, ಆದರೂ ಹವಾಮಾನ ಬದಲಾವಣೆ ಮತ್ತು ಇಳಿಯುತ್ತಿರುವ ಅಂತರ್ಜಲಗಳಿಂದ ಇವುಗಳ ಮೇಲೆ ಪ್ರಭಾವವುಂಟಾಗುತ್ತಿದೆ. ವಿಶ್ವ ಪರಿಸರ ದಿನದ ಅಂಗವಾಗಿ, ಭಾರತ ಮತ್ತು ಸ್ವೀಡನ್ ಸುಸ್ಥಿರ ಆಹಾರ ಉತ್ಪಾದನಾ ವ್ಯವಸ್ಥೆಯನ್ನು ಪ್ರೋತ್ಸಾಹಿಸುವುದಕ್ಕಾಗಿ ಅನನ್ಯ ಸ್ಮಾರ್ಟ್ ಫಾರ್ಮ್ ಅನಾವರಣಗೊಳಿಸಲು ಒಂದಾಗಿದ್ದವು. ಸ್ಮಾರ್ಟ್ ಫಾರ್ಮಿಂಗ್ ಅಭ್ಯಾಸಗಳು ಮತ್ತು ತಂತ್ರಜ್ಞಾನ ಗಮನಾರ್ಹವಾಗಿ ಕಡಿಮೆ ನೀರಿನಿಂದ ಹೆಚ್ಚಿನ ಪ್ರಮಾಣದ ಆಹಾರ ಬೆಳೆಯಲು ಸಣ್ಣ ಹಿಡುವಳಿ ರೈತರಿಗೆ ಅವಕಾಶ ಮಾಡಿಕೊಡುತ್ತವೆ. ಇವು ಸೂರ್ಯನನ್ನು ತಮ್ಮ ಏಕೈಕ ವಿದ್ಯುತ್ ಮೂಲವಾಗಿ ಬಳಸಿಕೊಳ್ಳುತ್ತವೆ. ಮುಖ್ಯವಾಗಿ, ಅತಿಯಾದ ನೀರಿನ ಬಳಕೆ ಮತ್ತು ಆಹಾರ ಉತ್ಪಾದನೆಗೆ ಪಳೆಯುಳಿಕೆ ಇಂಧನಗಳ ಮೇಲಿನ ಅವಲಂಬನೆ ಕಡಿಮೆ ಮಾಡುವ ಗುರಿ ಹೊಂದಿದೆ.

ಭಾರತ ಮತ್ತು ಸ್ವೀಡನ್ ಸಹಿ ಹಾಕಿರುವ ದ್ವಿಪಕ್ಷೀಯ ಶಕ್ತಿ ಮತ್ತು ಪರಿಸರ ಸಂಬಂಧಿತ ಒಡಂಬಡಿಕೆಗಳ (ಎಂಒಯು–ಮೆಮೊರಾಂಡಮ್ ಆಫ್ ಅಂಡರ್‌ಸ್ಟ್ಯಾಂಡಿಂಗ್) ಅಡಿಯಲ್ಲಿ ಸ್ಮಾರ್ಟ್ ಫಾರ್ಮ್ ಪ್ರಾರಂಭಿಸಲಾಯಿತು.

ಸ್ವೀಡನ್ ರಾಯಭಾರ ಕಚೇರಿಯ ವಿದ್ಯಮಾನಗಳ ಉಸ್ತುವಾರಿ ನೋಡಿಕೊಳ್ಳುವ ಮತ್ತು ವ್ಯಾಪಾರ, ಆರ್ಥಿಕ ಮತ್ತು ಸಾಂಸ್ಕೃತಿಕ ವ್ಯವಹಾರಗಳ ವಿಭಾಗದ ಮುಖ್ಯಸ್ಥ ಮಾರ್ಕಸ್ ಲುಂಡ್‌ಗ್ರೆನ್ ಮಾತನಾಡಿ, "ಕಳೆದ ಕೆಲವು ವರ್ಷಗಳಲ್ಲಿ, ಸ್ವೀಡನ್ ಮತ್ತು ಭಾರತದಲ್ಲಿ ನೀರಿನ ಕೊರತೆ ಪ್ರಮುಖ ವಿಷಯವಾಗಿದೆ. ಜಾಗತಿಕ ತಾಪಮಾನ ಹೆಚ್ಚಾಗುತ್ತಿದ್ದಂತೆ, ಅದು ಮತ್ತಷ್ಟು ತೀವ್ರಗೊಳ್ಳುವ ನಿರೀಕ್ಷೆಯಿದೆ. ಆಧುನಿಕ ತಂತ್ರಜ್ಞಾನಗಳನ್ನು ಸದುಪಯೋಗಪಡಿಸಿಕೊಳ್ಳುವುದು ಮುಂದಿರುವ ಸವಾಲುಗಳನ್ನು ಜಯಿಸಲು ಏಕೈಕ ಮಾರ್ಗವಾಗಿದೆ" ಎಂದರು.

ಸ್ವೀಡನ್‌ನ ಮಾರಾಟ ಮತ್ತು ಹೂಡಿಕೆ ಆಯುಕ್ತರು ಅಲ್ಲದೇ ದಕ್ಷಿಣ ಏಷ್ಯಾದ ಬಿಸಿನೆಸ್ ಸ್ವೀಡನ್ ಮುಖ್ಯಸ್ಥರಾದ ಶ್ರೀಮತಿ ಸಿಸಿಲಿಯಾ ಓಸ್ಕಾರ್ಸನ್ ಈ ಸಂದರ್ಭದಲ್ಲಿ ಮಾತನಾಡಿ, "ಹವಾಮಾನ ಸಮಸ್ಯೆಗಳನ್ನು ಜಂಟಿಯಾಗಿ ಪರಿಹರಿಸಲು ಭಾರತದೊಂದಿಗೆ ಕೆಲಸ ಮಾಡಲು ಸ್ವೀಡನ್ ಬದ್ಧವಾಗಿದೆ. ಎನ್‌ಐಎಸ್‌ಇ ಕ್ಯಾಂಪಸ್‌ನಲ್ಲಿರುವ ಸ್ಪೌಡಿಯ ಸ್ಮಾರ್ಟ್ ಫಾರ್ಮ್ ಎರಡು ದೇಶಗಳ ವಿಭಿನ್ನ ವ್ಯಕ್ತಿಗಳು ಹೇಗೆ ಒಟ್ಟಾಗಿ ಮುಂದಿನ ಪೀಳಿಗೆಯ ಸುಸ್ಥಿರ ಪರಿಹಾರಗಳನ್ನು ಕೂಡ ಸೃಷ್ಟಿಸುತ್ತಿದ್ದಾರೆ ಎಂಬುದಕ್ಕೆ ಒಂದು ಅತ್ಯುತ್ತಮ ಉದಾಹರಣೆಯಾಗಿದೆ" ಎಂದರು.

ತಂತ್ರಜ್ಞಾನದ ಸಮಗ್ರ ಮೌಲ್ಯಮಾಪನವನ್ನು ಎನ್‌ಐಎಸ್‌ಇ ನಡೆಸುತ್ತಿದೆ. ನಿಖರವಾದ ನೀರಿನ ಪ್ರಮಾಣ ಮತ್ತು ಸೂಕ್ತ ಒತ್ತಡದೊಂದಿಗೆ ಅದರ ಕಾರ್ಯಕ್ಷಮತೆ ಮತ್ತು 400 ಚದರ ಮೀಟರ್ ಭೂಪ್ರದೇಶಕ್ಕೆ ಹನಿ ನೀರಾವರಿ ಪೂರೈಸುವ ಸಾಮರ್ಥ್ಯವನ್ನು ಮೌಲ್ಯೀಕರಿಸುತ್ತದೆ.

ಈ ವ್ಯವಸ್ಥೆ ಮೊಬೈಲ್ ಮತ್ತು ಚಿಕ್ಕ ಗಾತ್ರದ 150–ವ್ಯಾಟ್ ಸೌರ ಫಲಕದಿಂದ ಚಾಲಿತವಾಗಿದ್ದು, ನವೀಕರಿಸಬಹುದಾದ ಶಕ್ತಿ ವ್ಯವಸ್ಥೆಯ ಸಮರ್ಥ ಬಳಕೆಯನ್ನು ಎತ್ತಿ ತೋರಿಸುತ್ತದೆ.

ಭಾರತ ಸರ್ಕಾರದ ನೂತನ ಮತ್ತು ನವೀಕರಿಸಬಹುದಾದ ಇಂಧನ ಇಲಾಖೆಯ (ಎಂಎನ್‌ಆರ್‌ಇ) ಜಂಟಿ ಕಾರ್ಯದರ್ಶಿ ಲಲಿತ್ ಬೋಹ್ರಾ ತಮ್ಮ ಭಾಷಣದಲ್ಲಿ, "ಸುಸ್ಥಿರ ಕೃಷಿ ವ್ಯವಸಾಯದ ಭವಿಷ್ಯವಾಗಿದೆ. ಈ ದಿಕ್ಕಿನಲ್ಲಿ ಕಾರ್ಯನಿರ್ವಹಿಸಲು ಇದೇ ಸೂಕ್ತ ಸಮಯವಾಗಿದೆ.


ಅತ್ಯಾಧುನಿಕ ತಂತ್ರಜ್ಞಾನಗಳು ಮತ್ತು ಪರಿಸರ ಸ್ನೇಹಿ ಅಭ್ಯಾಸಗಳನ್ನು ಅಳವಡಿಸಿಕೊಳ್ಳುವ ಮೂಲಕ, ನಾವು ಕೃಷಿ ಕ್ಷೇತ್ರದಲ್ಲಿ ಕ್ರಾಂತಿ ತರಬಹುದು" ಎಂದರು.

ಸ್ಪೌಡಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹೆನ್ರಿಕ್ ಜೋಹಾನ್ಸನ್ ಮಾತನಾಡಿ, "ಇಂದು ಜಾಗತಿಕ ರಂಗದಲ್ಲಿ, ನೀರು, ಸುಸ್ಥಿರ ಕೃಷಿ, ಮಹಿಳೆಯರಿಗೆ ಜೀವನೋಪಾಯಗಳು ಮತ್ತು ನವೀನತೆಗಳು ಕಾರ್ಯಸೂಚಿಯಲ್ಲಿ ಅಗ್ರಸ್ಥಾನದಲ್ಲಿವೆ. ನಾವು ಸಣ್ಣ ಹಿಡುವಳಿದಾರರನ್ನು ನವೀನ ತಂತ್ರಜ್ಞಾನಗಳನ್ನು ಅಳವಡಿಸಿಕೊಳ್ಳುವ ಅವಕಾಶ ಹೊಂದಿರುವ ಉದ್ಯಮಿಗಳಾಗಿ ನೋಡುತ್ತೇವೆ.

ಇದನ್ನು ಸ್ಮಾರ್ಟ್ ಫಾರ್ಮಿಂಗ್ ಪರಿಸರ ವ್ಯವಸ್ಥೆ ಸೃಷ್ಟಿಸುವ ಮೂಲಕ ಸಾಧಿಸಬಹುದು. ಸ್ಮಾರ್ಟ್ ಫಾರ್ಮಿಂಗ್ ವಿಧಾನಗಳು ಮತ್ತು ನವೀನ ತಂತ್ರಜ್ಞಾನ ಭಾರತದಲ್ಲಿನ ಸಣ್ಣ–ಹಿಡುವಳಿ ರೈತರನ್ನು ಸಬಲೀಕರಿಸಬಹುದು, ಅವರಲ್ಲಿ ಹೆಚ್ಚಿನವರು ಮಹಿಳೆಯರಾಗಿದ್ದು, ಹೆಚ್ಚಿದ ಫಸಲು, ಹೆಚ್ಚಿನ ಲಾಭದಾಯಕತೆ ಮತ್ತು ಉತ್ತಮ ಜೀವನೋಪಾಯವನ್ನು ಹೊಂದಲು ಇದು ನೆರವಾಗಬಹುದು" ಎಂದರು.

ಕಾರ್ಯಕ್ರಮದಲ್ಲಿ ಶ್ರೀ ಆಂಡರ್ಸ್ ಆಂಡರ್ಸನ್, ಉಪಾಧ್ಯಕ್ಷರು– ಸ್ಪೌಡಿಯಲ್ಲಿ ವಿಶೇಷ ಕಾರ್ಯಾಚರಣೆಗಳ ಮುಖ್ಯಸ್ಥರು; ಶ್ರೀಮತಿ ರೂಪಾಲಿ ಮೆಹ್ರಾ, ಸ್ಪೌಡಿಯಲ್ಲಿ ಮುಖ್ಯ ಮಾರುಕಟ್ಟೆ ಅಧಿಕಾರಿ; ಡಾ. ಚಂದನ್ ಬ್ಯಾನರ್ಜಿ, ಉಪ ಮಹಾನಿರ್ದೇಶಕರು, ಎನ್‌ಐ–ಎಸ್‌ಇ; ಡಾ. ಜೈ ಪ್ರಕಾಶ್, ಉಪ ಮಹಾನಿರ್ದೇಶಕರು, ಎನ್‌ಐ–ಎಸ್‌ಇ; ಡಾ. ಅವಧೇಶ್ ಯಾದವ್, ಉಪ ಮಹಾನಿರ್ದೇಶಕರು, ಎನ್‌ಐ–ಎಸ್‌ಇ; ಪ್ರಶಾಂತ್ ಮಿಶ್ರಾ, ಎನ್‌ಐ–ಎಸ್‌ಇ ನಿರ್ದೇಶಕ ಡಾ. ಶ್ರೀಮತಿ ರಿಚಾ ಪರ್ಮಾರ್, ಉಪ ನಿರ್ದೇಶಕರು, ಎನ್‌ಐಎಸ್‌ಇ ಮತ್ತು ಸ್ವಯಂ ಉದ್ಯೋಗಿ ಮಹಿಳಾ ಸಂಘದಿಂದ (ಸೇವಾ – ಎಸ್‌ಇಡಬ್ಲ್ಯುಎ) ಸ್ಮಾರ್ಟ್ ರೈತರು ಹಾಜರಿದ್ದರು.

# ಬೇರೊಂದು ಹಳಿಯಲ್ಲಿ ಸಂಚರಿಸಿದ್ದೇ ಅಪಘಾತಕ್ಕೆ ಕಾರಣ



ನವದೆಹಲಿ: ಒಡಿಶಾದ ಬಾಲೆಸೋರ್‌ನಲ್ಲಿ ಶುಕ್ರವಾರ ಸಂಜೆ ಅಪಘಾತಕ್ಕೀಡಾದ ಕೋರಮಂಡಲ ಎಕ್ಸ್‌ಪ್ರೆಸ್ ರೈಲು ಬೇರೊಂದು ಟ್ರ್ಯಾಕ್‌ನಲ್ಲಿ ಸಂಚರಿಸಿದ್ದರಿಂದ ತ್ರಿವಳಿ ಅಪಘಾತಕ್ಕೆ ಕಾರಣವಾಯಿತೇ?

ಪ್ರಾಥಮಿಕ ತನಿಖೆಯಲ್ಲಿ ಈ ಒಂದು ಅಂಶ ಬೆಳಕಿಗೆ ಬಂದಿದೆ.

ಕೋರಮಂಡಲ ಎಕ್ಸ್‌ಪ್ರೆಸ್ ರೈಲು ಗಂಟೆಗೆ 128 ಕಿ.ಮೀ. ವೇಗದಲ್ಲಿ ಸಂಚರಿಸುತ್ತಿತ್ತು. ಎದುರಿನಿಂದ ಬರುತ್ತಿದ್ದ ಸೂಪರ್‌ಫಾಸ್ಟ್ ಎಕ್ಸ್‌ಪ್ರೆಸ್ ರೈಲು ಗಂಟೆಗೆ 116 ಕಿ.ಮೀ. ವೇಗದಲ್ಲಿ ಸಂಚರಿಸುತ್ತಿತ್ತು. ಇದರ ವರದಿಯನ್ನು ರೈಲ್ವೆ ಮಂಡಳಿಗೆ ಸಲ್ಲಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.

ನಿಲ್ದಾಣ ಜಾಗದಲ್ಲಿ ಬಹು ಎಂಜಿನ್ ಗೂಡ್ಸ್ ರೈಲು ಸಂಚಾರಕ್ಕೆ ಅನುಕೂಲವಾಗುವಂತೆ 750 ಮೀಟರ್ ಉದ್ದದ ಲೂಪ್ ಲೇನ್ ನಿರ್ಮಿಸಲಾಗಿತ್ತು.

ಪ್ರತ್ಯಕ್ಷದರ್ಶಿ ಅನುಭವ ದಾಸ್ ಅವರ ಪ್ರಕಾರ, 'ಕೋರಮಂಡಲ್ ಎಕ್ಸ್‌ಪ್ರೆಸ್ ರೈಲು ಗೂಡ್ಸ್ ರೈಲಿನತ್ತ ರಭಸವಾಗಿ ನುಗ್ಗಿದಾಗ ಅಪಘಾತ ಸಂಭವಿಸಿ, ಬೋಗಿಗಳು ಮುಖ್ಯ ಟ್ರ್ಯಾಕ್ ಮೇಲೆ ಬಿದ್ದವು' ಎಂದಿದ್ದಾರೆ.

ಆದರೆ ಈ ಸಂಗತಿಯನ್ನು ರೇಲ್ವೆ ಅಧಿಕಾರಿಗಳು ಈವರೆಗೂ ದೃಢಪಡಿಸಿಲ್ಲ. ಅಪಘಾತ ಸಂದರ್ಭದಲ್ಲಿ ಈ ಎರಡೂ ರೈಲುಗಳು ಸುಮಾರು 2 ಸಾವಿರ ಪ್ರಯಾಣಿಕರನ್ನು ಹೊತ್ತು ಸಾಗುತ್ತಿದ್ದವು.

**ತಪ್ಪಿತಸ್ಥರ ವಿರುದ್ಧ ಕ್ರಮ:ಪ್ರಧಾನಿ ಮೋದಿ**

ಒಡಿಶಾದ ತ್ರಿವಳಿ ರೈಲು ಅಪಘಾತಕ್ಕೆ ಕಾರಣರಾದ ತಪ್ಪಿತಸ್ಥರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳುವುದಾಗಿ ಪ್ರಧಾನ ಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ.

ದೇಶದ ಅತ್ಯಂತ ದೊಡ್ಡ ರೈಲು ಅಪಘಾತ ಸಂಭವಿಸಿದ ಬಾಲಸೋರ್ ಜಿಲ್ಲೆಯ ಬಹನಾಗಾಕ್ಕೆ ಭೇಟಿ ನೀಡಿದ ಬಳಿಕ ಶನಿವಾರ ಸುದ್ದಿಗಾರರ ಜೊತೆ ಮಾತನಾಡಿದ ಅವರು, ರೈಲು ಅಪಘಾತ ಪ್ರಕರಣದಲ್ಲಿ ತಪ್ಪಿತಸ್ಥರೆಂದು ಸಾಬೀತಾದವರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳುತ್ತೇವೆ.

ಯಾರನ್ನೂ ಸುಮ್ಮನೆ ಬಿಡುವುದಿಲ್ಲ ಎಂದು ಹೇಳಿದ್ದಾರೆ. ಬಾಲಸೋರ್ ಆಸ್ಪತ್ರೆಯಲ್ಲಿ ಗಾಯಾಳುಗಳ ಆರೋಗ್ಯವನ್ನು ಸಹ ಮೋದಿ ವಿಚಾರಿಸಿದರು.

'ಗಾಯಾಳುಗಳಿಗೆ ಸಾಧ್ಯವಿರುವ ಅತ್ಯುತ್ತಮ ಚಿಕಿತ್ಸೆ ಒದಗಿಸುತ್ತೇವೆ. ಅಪಘಾತದ ಸಂದರ್ಭ ನೆರವಿಗೆ ಬಂದ ಸ್ಥಳೀಯ ನಿವಾಸಿಗಳಿಗೂ ಧನ್ಯವಾದ' ಎಂದು ಮೋದಿ ಹೇಳಿದ್ದಾರೆ.

'ಈ ದುರಂತ ಕುರಿತಾದ ನೋವನ್ನು ವ್ಯಕ್ತಪಡಿಸಲು ನನಗೆ ಪದಗಳೇ ಸಿಗುತ್ತಿಲ್ಲ. ಮೃತರ ಸಂಬಂಧಿಕರಿಗೆ ನೋವು ತಡೆದುಕೊಳ್ಳುವ ಶಕ್ತಿ ನೀಡಲೆಂದು ದೇವರನ್ನು ಪ್ರಾರ್ಥಿಸುತ್ತೇನೆ' ಎಂದು ಮೋದಿ ಹೇಳಿದ್ದಾರೆ.

ರೈಲ್ವೆ ಸಚಿವ ಅಶ್ವಿನಿ ವೈಷ್ಣವ್, ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಸಹ ಮೋದಿ ಜೊತೆಗಿದ್ದರು. ಘಟನಾ ಸ್ಥಳದಲ್ಲಿ ರಕ್ಷಣಾ ಕಾರ್ಯಾಚರಣೆಯ ನೇತೃತ್ವ ವಹಿಸಿರುವ ಅಧಿಕಾರಿಗಳು ಪ್ರಧಾನಿಗೆ ಮಾಹಿತಿ ನೀಡಿದರು.

ಬಾಲಸೋರ್: ರೈಲುಗಳು ಡಿಕ್ಕಿಯಾಗುವುದನ್ನು ತಡೆಯಲು, ದೇಶೀಯವಾಗಿಯೇ ಅಭಿವೃದ್ಧಿಪಡಿಸಲಾಗಿರುವ ವ್ಯವಸ್ಥೆ 'ಕವಚ' ಆಗಿದೆ.

ಆದರೆ ಭೀಕರ ರೈಲು ಅಪಘಾತ ಸಂಭವಿಸಿದ ಒಡಿಶಾದ ಬಾಲಸೋರ್ ರೈಲ್ವೆ ಮಾರ್ಗದಲ್ಲಿ ಕವಚ ಸುರಕ್ಷಾ ವ್ಯವಸ್ಥೆ ಇರಲಿಲ್ಲ ಎಂದು ರೈಲ್ವೆ ಅಧಿಕಾರಿಗಳು ತಿಳಿಸಿದ್ದಾರೆ.

ಒಂದು ವೇಳೆ ಕವಚ ವ್ಯವಸ್ಥೆ ಇದ್ದಿದ್ದರೆ ರೈಲುಗಳ ಮಧ್ಯೆ ಡಿಕ್ಕಿ ತಪ್ಪಿಸಬಹುದಿತ್ತು ಎಂಬ ಮಾತುಗಳು ಕೇಳಿ ಬರುತ್ತಿವೆ.

ಒಡಿಶಾದ ಬಾಲಸೋರ್‌ನಲ್ಲಿ ನಡೆದ ರೈಲು ಅವಘಡದಲ್ಲಿ 261 ಮಂದಿ ಮೃತಪಟ್ಟಿದ್ದು, 900 ಮಂದಿ ಗಾಯಗೊಂಡಿದ್ದಾರೆ.

**ಕವಚ ಸುರಕ್ಷಾ ವ್ಯವಸ್ಥೆಯ ವೈಶಿಷ್ಟ್ಯತೆಗಳೇನು?**

ಸಂಶೋಧನೆ, ವಿನ್ಯಾಸ ಹಾಗೂ ಮಾನಕ ಸಂಸ್ಥೆ (ಆರ್‌ಡಿಎಸ್‌ಒ) ಕವಚ ಸುರಕ್ಷಾ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸಿದೆ.

ರೈಲುಗಳ ಮಧ್ಯೆ ಮುಖಾಮುಖಿ ಡಿಕ್ಕಿ ತಪ್ಪಿಸುತ್ತದೆ. ಸ್ವಯಂಚಾಲಿತವಾಗಿ ಬ್ರೇಕ್ ವ್ಯವಸ್ಥೆ ಹೊಂದಿದೆ.

ರೆಡ್ ಸಿಗ್ನಲ್ ದಾಟದಂತೆ ತಡೆಯುವ ವ್ಯವಸ್ಥೆಯನ್ನು ಕವಚ ಹೊಂದಿದ್ದು, ತತ್‌ಕ್ಷಣವೇ ಕಾರ್ಯಪ್ರವೃತವಾಗಿ ಬ್ರೇಕ್ ಹಾಕುತ್ತದೆ.

ರೈಲ್ವೆ ಕ್ರಾಸಿಂಗ್ ಗೇಟ್ ಸಮೀಪಿಸುತ್ತಿದ್ದಂತೆಯೇ ಜೋರಾಗಿ ವಿಷಲ್ ಶಬ್ದ ಹೊಮ್ಮಿಸಿ ಎಚ್ಚರಿಕೆಯ ಸಂದೇಶ ರವಾನಿಸುತ್ತದೆ.

ಲೊಕೊ ಪೈಲಟ್‌ಗೆ ಓವರ್ ಸ್ಪೀಡಿಂಗ್ ತಪ್ಪಿಸಲು ನೆರವಾಗುತ್ತದೆ.

ಅತ್ಯಂತ ದಟ್ಟವಾದ ಮಂಜಿನ ವಾತಾವರಣದಲ್ಲೂ ರೈಲು ಸುರಕ್ಷತೆಯಿಂದ ಚಲಿಸಲು ನೆರವಾಗುತ್ತದೆ.

ಒಟ್ಟಾರೆಯಾಗಿ ಸುರಕ್ಷಿತ ರೈಲ್ವೆ ಪಯಣವನ್ನು ಕವಚ ವ್ಯವಸ್ಥೆ ಖಾತ್ರಿಪಡಿಸುತ್ತದೆ.

ಕವಚ ಸುರಕ್ಷಾ ವ್ಯವಸ್ಥೆ ಅಭಿವೃದ್ಧಿಗೆ ರೂ 16.88 ಕೋಟಿ ವೆಚ್ಚ ಮಾಡಲಾಗಿದೆ. ಪರೀಕ್ಷಾರ್ಥ ಪ್ರಯೋಗ ಯಶಸ್ವಿಯಾಗಿದೆ.

## ಕೇಂದ್ರ ನೀಡುವ ಅಕ್ಕಿಯಲ್ಲಿ ಕಾಂಗ್ರೆಸ್ ಸರ್ಕಾರ ರಾಜಕೀಯ: ಶಾಸಕ ಅರವಿಂದ ಬೆಲ್ಲದ ಲೇವಡಿ



ಹುಬ್ಬಳ್ಳಿ: 'ಕೇಂದ್ರ ಸರ್ಕಾರ ರಾಜ್ಯಕ್ಕೆ ನೀಡುತ್ತಿರುವ ಐದು ಕೆ.ಜಿ. ಅಕ್ಕಿಯಲ್ಲಿಯೇ ರಾಜ್ಯ ಕಾಂಗ್ರೆಸ್ ಸರ್ಕಾರ ರಾಜಕೀಯ ಬೇಳೆ ಬೇಯಿಸಿಕೊಳ್ಳುತ್ತಿದೆ' ಎಂದು ಶಾಸಕ ಅರವಿಂದ ಬೆಲ್ಲದ ಲೇವಡಿ ಮಾಡಿದರು.

ಶನಿವಾರ ನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, 'ಕೇಂದ್ರ ಸರ್ಕಾರ ರಾಜ್ಯಕ್ಕೆ ಐದು ಕೆ.ಜಿ. ಅಕ್ಕಿ ನೀಡುವ ಬದಲು, ಅರ್ಹ ಪಲಾನುಭವಿಗಳ ಖಾತೆಗೆ ಹಣ ವರ್ಗಾವಣೆ ಮಾಡಬೇಕು. ಹಾಗೆ ಮಾಡಿದರೆ, ಜನರಿಗೆ ಯಾರು ಎಷ್ಟು ಅಕ್ಕಿ ಕೊಡುತ್ತಾರೆ ಎನ್ನುವುದು ಗೊತ್ತಾಗುತ್ತದೆ' ಎಂದರು.

'ಜನರು ಕೇವಲ ಅಕ್ಕಿ ಮಾತ್ರ ತಿನ್ನುವುದಿಲ್ಲ. ಒಬ್ಬರಿಗೆ ತಿಂಗಳಿಗೆ 10 ಕೆ.ಜಿ. ಅಕ್ಕಿ ಹೆಚ್ಚಾಗುತ್ತದೆ. ಕೇಂದ್ರ ಸರ್ಕಾರ ನೀಡುವ ಫಲಾನುಭವಿಗಳಿಗೆ ಹಣ ವರ್ಗಾಯಿಸಿದರೆ, ಅವರು ದೈನಂದಿನ ಜೀವನಕ್ಕೆ ಬೇಕಾದ ಜೋಳ, ರಾಗಿಗಳಂಥ ಧಾನ್ಯಗಳನ್ನು ಖರೀದಿಸುತ್ತಾರೆ. ಆಗ ಜನರಿಗೆ ಕಾಂಗ್ರೆಸ್‌ನ ಗ್ಯಾರಂಟಿ ಬಗ್ಗೆ ಅರಿವಾಗುತ್ತದೆ. ಈ ಕುರಿತು ಕೇಂದ್ರ ಸರ್ಕಾರವನ್ನು ಒತ್ತಾಯಿಸುತ್ತೇನೆ' ಎಂದು ಹೇಳಿದರು. ವಿರೋಧ ಪಕ್ಷ ನಾಯಕನ ಆಯ್ಕೆ ಪಕ್ಷಕ್ಕೆ ಬಿಟ್ಟ ವಿಚಾರ. ನನಗೆ ಯಾವುದೇ ಜವಾಬ್ದಾರಿ ನೀಡಿದರೂ ನಿಭಾಯಿಸುತ್ತೇನೆ. ಸದ್ಯ ಶಾಸಕನಾಗಿ ಕೆಲಸ ಮಾಡುತ್ತಿದ್ದೇನೆ' ಎಂದರು.

## ಪಠ್ಯಪುಸ್ತಕ ಪರಿಷ್ಕರಣೆ ಸದ್ಯಕ್ಕೆ ಬೇಡ: ಬಸವರಾಜ ಮ್ಯಾಗಳಮನಿ



ಗಂಗಾವತಿ:–ನೂತನ ಸರಕಾರ ಅಸ್ಥಿತ್ವಕ್ಕೆ ಬಂದಾಗಿನಿಂದ ಪಠ್ಯಪುಸ್ತಕ ಪರಿಷ್ಕರಣೆ ಕುರಿತು ಹೇಳಿಕೆಗಳು ಬರುತ್ತಲೇ ಇವೆ. ಪ್ರಸಕ್ತ ಸಾಲಿನಲ್ಲಿ ಪರಿಷ್ಕರಣೆ ಮಾಡುವದು ಬೇಡ ಎಂದು ನಿವೃತ್ತ ಮುಖ್ಯೋಪಾಧ್ಯಾಯ ಹಾಗೂ ಕೊಪ್ಪಳ ಜಿಲ್ಲಾ ಸರ್ವಾಂಗೀಣ ಅಭಿವ್ರದ್ದಿ ಹೋರಾಟ ಸಮಿತಿಯ ಜಿಲ್ಲಾ ಅಧ್ಯಕ್ಷ ಬಸವರಾಜ ಮ್ಯಾಗಳಮನಿ ಸರಕಾರವನ್ನು ಒತ್ತಾಯಿಸಿದ್ದಾರೆ. ಈಗಾಗಲೆ ಶಾಲೆಗಳು ಪ್ರಾರಂಭವಾಗಿದ್ದು ಪಠ್ಯಪುಸ್ತಕಗಳು ಮಕ್ಕಳನ್ನು ತಲುಪಿದ್ದು ಪಾಠ ಚಟುವಟಿಕೆಳು ಪ್ರಾರಂಭವಾಗಿದ್ದು ಗೊಂದಲ ಸ್ರಷ್ಟಿಸುವದು ಸರಿಯಲ್ಲ. ಇದರಿಂದ ಶಿಕ್ಷಕರಿಗೆ ಹಾಗೂ ಮಕ್ಕಳ ಮನಸ್ಸಿನ ಮೇಲೆ ದುಷ್ಪರಿಣಾಮ ಬೀಳುತ್ತದೆ. ಯಾವ ಅಂಶಗಳನ್ನು ಬೋದನೆ ಮಾಡುವದು ಬೇಡವೂ ಅದನ್ನು ಬೋದಿಸುವದು ಬೇಡ ಎಂದು ಸುತ್ತೋಲೆ ಹೊರಡಿಸಲಿ. ಶಿಕ್ಷಣ ತಜ್ನರ ಸಮಿತಿ ರಚಿಸಿ ಮುಂದಿನ ಶೈಕ್ಷಣಿಕ ವರ್ಷದಲ್ಲಿ ಜಾರಿಗೆ ತರಲಿ ಅಲ್ಲಿಯವರೆಗೆ ಯಾವುದೇ ಗೊಂದಲ ಮಾಡುವದು ಬೇಡ ಎಂದು ಸರಕಾರವನ್ನು ಒತ್ತಾಯಿಸದ್ದಾರೆ.

ಶಾಲಾ,ಕಾಲೇಜು ಒದುತ್ತಿರುವ ಎಲ್ಲಾ ವರ್ಗದ ಬಾಲಕ/ಬಾಲಕಿಯರಿಗೂ ಉಚಿತ ಬಸ್ ಪಾಸ್ ನೀಡಬೇಕು. ಗ್ರಾಮ ಪಂಚಾಯತ್ ಗೆ ಒಂದರಂತೆ ನವೋದಯ ಶಾಲೆ ಪ್ರಾರಂಬಿಸಬೇಕು.ಅಂಗವಿಕಲಮತ್ತು ಅನಾಥ ಮಕ್ಕಳ,ಹಾಗೂ ಬಾಲಕಾರ್ಮಿಕರ ವಸತಿಯುತ ಶಾಲೆಗಳನ್ನು ಪ್ರಾರಂಬಿಸಬೇಕು. ಎಂಟನೇ ತರಗತಿ ಮಕ್ಕಳಿಗೆ ಬೈಸಿಕಲ್ ನೀಡಬೇಕೆಂದು ಮ್ಯಾಗಳಮನಿ ಮನವಿ ಮಾಡಿದ್ದರೆ. ಈ ಕುರಿತು ಮುಂದಿನ ದಿನಗಳಲ್ಲಿ ಹೋರಾಟ ಮಾಡಲಾಗುವದು ಎಂದು ಪತ್ರಿಕಾ ಹೇಳಿಕೆ ನೀಡಿದ್ದಾರೆ.

# ಕೋಕೋ ಬೆಳೆಯಲು ಯುವಜನತೆ ಮುಂದೆ ಬರಬೇಕು: ಡಾ.ಪ್ರಭಾತ್ ಕುಮಾರ್

ಶಿವಮೊಗ್ಗ: ಕೋಕೋ ಬೆಳೆಯನ್ನು ಬೆಳೆಯಲು ಯುವಜನತೆ ಮುಂದೆ ಬರಬೇಕು ಹಾಗೂ ಕೋಕೋ ಸಣ್ಣ ಉದ್ದಿಮೆಗಳು, ಸ್ಟಾರ್ಟ್ ಅಪ್ಗಳನ್ನು ಆರಂಭಿಸಲು ಉತ್ತೇಜನ ಬೇಕೆಂದು ಭಾರತ ಸರ್ಕಾರದ ಕೃಷಿ ಸಚಿವಾಲಯದ ತೋಟಗಾರಿಕೆ ಆಯುಕ್ತರಾದ ಡಾ.ಪ್ರಭಾತ್ ಕುಮಾರ್ ಹೇಳಿದರು.

ಕೆಳದಿ ಶಿವಪ್ಪನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಮತ್ತು ಡೈರೆಕ್ಟರೇಟ್ ಆಫ್ ಕ್ಯಾಶು ಆಂಡ್ ಕೋಕೊ ಡೆವಲಪ್ಮೆಂಟ್, ಕೊಚಿನ್ ಇವರ ಸಹಯೋಗದಲ್ಲಿ ಜೆಎನ್ಎನ್ ಸಿಇ ಕಾಲೇಜಿನಲ್ಲಿ ಏರ್ಪಡಿಸಲಾಗಿದ್ದ ಕೋಕೊ ಅಭಿವೃದ್ಧಿ, ಸವಾಲುಗಳು ಮತ್ತು ಅವಕಾಶ ಕುರಿತಾದ ರಾಷ್ಟ್ರೀಯ ಸಮ್ಮೇಳನವನ್ನು ಉದ್ಘಾಟಿಸಿ ಮಾತನಾಡಿದರು.

ಕೋಕೋ ಒಂದು ವಾಣಿಜ್ಯ ಬೆಳೆಯಾಗಿದ್ದು ಕೋಕೋವನ್ನು ಅಂತರಬೆಳೆಯಾಗಿ ಬೆಳೆದಲ್ಲಿ ರೈತರಿಗೆ ಅನುಕೂಲವಾಗುವುದು. ಸಣ್ಣ ಸಣ್ಣ ಇಡುವಳಿದಾರರು ಅಡಿಕೆ, ತೆಂಗು, ರಬ್ಬರ್ ಹೀಗೆ ವಿವಿಧ ಬೆಳೆಗಳೊಂದಿಗೆ ಅಂತರ ಬೆಳೆಯಾಗಿ ಬೆಳೆದಲ್ಲಿ ಉತ್ಪಾದನಾ ವೆಚ್ಚವೂ ತಗ್ಗುತ್ತದೆ ಎಂದರು.

ಪ್ರಸ್ತುತ 1 ಲಕ್ಷ ಜನರು ಕೋಕೋ ಬೆಳೆಯಲ್ಲಿ ತೊಡಗಿದ್ದಾರೆ. ಮಾರುಕಟ್ಟೆ ಲಭ್ಯವಿದ್ದರೂ ಇಲ್ಲಿರುವ ಅಸಮತೋಲನವನ್ನು ಸರಿಪಡಿಸಿಕೊಳ್ಳಬೇಕಿದೆ. ಹಾಗೂ ಗುಣಮಟ್ಟಕ್ಕೆ ಹೆಚ್ಚಿನ ಪ್ರಾಮುಖ್ಯತೆ ನೀಡಬೇಕಿದೆ. ಇದಕ್ಕಾಗಿ ಸಾಂಸ್ಥಿಕ ಕಾರ್ಯವಿಧಾನವನ್ನು ಬಲಪಡಿಸಬೇಕಿದೆ. ಹಾಗೂ ಸಣ್ಣ ಉದ್ದಿಮೆ, ಸ್ಟಾರ್ಟ್ ಅಪ್ ಕಂಪೆನಿಗಳನ್ನು ಶುರು ಮಾಡಲು ಉತ್ತೇಜನ ನೀಡಬೇಕು. ಜೊತೆಗೆ ಜ್ಞಾನ ಹೆಚ್ಚಬೇಕು. ಜಾಗತಿಕ ಮಾರುಕಟ್ಟೆಗೆ ಪ್ರವೇಶಿಸಲು ಮೌಲ್ಯಸರಪಳಿಗೆ ಒತ್ತು ನೀಡಬೇಕಿದೆ.

ಅಡಿಕೆಯಿಂದ ಲಾಭ ಹೆಚ್ಚಿರುವುದ-ರಿಂದ ಸರ್ಕಾರದ ಸಬ್ಸಿಡಿ, ಉತ್ತೇಜನ ಇಲ್ಲದಿದ್ದರೂ ರೈತರು ಹೆಚ್ಚಾಗಿ ಇದಕ್ಕೆ ವಾಲುತ್ತಿದ್ದಾರೆ. ಆದರೆ ಕೋಕೋ ಬೆಳೆಗೆ ಪೈಲಟ್ ಕಾರ್ಯಕ್ರಮ, ಪ್ರಾತ್ಯಕ್ಷಿಕೆ ಹಾಗೂ ಕಾಳಜಿ ಅವಶ್ಯಕವಾಗಿದೆ. ಕೋಕೋ ಉತ್ಪನ್ನ ಕಂಪೆನಿಗಳು ಮುಂದೆ ಬಂದು ರೈತರಲ್ಲಿ ಒಂದು ವಿಶ್ವಾಸ ಮುಡಿಸಬೇಕು. ಬೆಳೆಗೆ ಸಂಬಂಧಿಸಿದಂತೆ ಒಂದು ಸ್ಪಷ್ಟ ಮಾರ್ಗಸೂಚಿ ಬೇಕು. ಜೊತೆಗೆ ಯುವಜನತೆ ಇದನ್ನು ಅಳವಡಿಸಿಕೊಳ್ಳು ಮುಂದೆ ಬರಬೇಕೆಂದರು.



ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಮಂಗಳೂರಿನ ಕ್ಯಾಂಪ್ಕೊ ಅಧ್ಯಕ್ಷ ಕಿಶೋರ್ ಕುಮಾರ್ ಕೊಡ್ಗಿ ಮಾತನಾಡಿ, ಕೃಷಿ ಮತ್ತು ತೋಟಗಾ-ರಿಕೆ ವಿಶ್ವವಿದ್ಯಾಲಯದವರು ಕೋಕೋ ಗ್ರಾಫ್ಟೆಡ್ ಮತ್ತು ಹೈಬ್ರಿಡ್ ತಳಿಗಳನ್ನು ನೀಡಿದಲ್ಲಿ ರೈತ-ರಿಗೆ ಅನುಕೂಲವಾಗಲಿದೆ. ಆದ್ದ-ರಿಂದ ತಜ್ಞರು ಹೈಬ್ರಿಡ್ ತಳಿಗಳನ್ನು ಅಭಿವೃದ್ಧಿಪಡಿಸಿ ನೀಡುವಂತೆ ಕೋ-ರಿದರು.

ಕೋಕೋ ಕೆಲವು ಪ್ರಾಕೃತಿ-ಕವ ವಿಕೋಪ, ಮಂಗ, ಕಾಡುಬೆಕ್ಕು ಹಾವಳಿಯಿಂದ ಇಳುವರಿ ಕಡಿಮೆ ಆಗುತ್ತಿದ್ದು ಇದಕ್ಕೆ ಇಲಾಖೆಯ, ವಿವಿಗಳ ತಜ್ಞರು ಮಾರ್ಗೋಪಾಯ ಗಳನ್ನು ಸೂಚಿಸಬೇಕು.

ಮೊದಲಿಗಿಂತ ಪ್ರಸ್ತುತದಲ್ಲಿ ಜನರು ಹೆಚ್ಚು ಪ್ರಮಾಣದಲ್ಲಿ ಚಾಕಲೇಟ್ ಸೇವನೆ ಮಾಡುತ್ತಿದ್ದು ಈ ಬೆಳೆಗೆ ಹೆಚ್ಚಿನ ಉತ್ತೇಜನ, ಸಂಶೋಧನೆ ಅವಶ್ಯಕತೆ ಇದೆ.

ಹಾಗೂ ಕೋಕೋ ದಿಂದ ಉಂಟಾಗಬಹುದಾದ ಆರೋಗ್ಯ ಪ್ರಯೋಜನೆಗಳ ಬಗ್ಗೆ ತಜ್ಞರು ಅಧ್ಯಯನ ಮಾಡಿ ಜನರಿಗೆ ತಿಳಿಸುವ ಕೆಲಸವನ್ನು ಮಾಡಬೇಕು. ಯಾವ ಮಣ್ಣಿನಲ್ಲಿ ಯಾವ ಬೆಳೆ ಬೆಳೆದರೆ ಕೃಷಿಕರಿಗೆ ಹೆಚ್ಚಿನ ಆದ-ಾಯ ದೊರಕುತ್ತದೆ ಎಂಬುದಕ್ಕೆ ಒತ್ತು ನೀಡಬೇಕು.

ಕ್ಯಾಂಪ್ಕೊ ಸಂಸ್ಥೆಯು ಏಷ್ಯಾದಲ್ಲಿ ದೊಡ್ಡ ಚಾಕಲೇಟ್ ಮತ್ತು ಇತರೆ ಉತ್ಪನ್ನ ಉತ್ಪಾದಿಸುವ ಸಂಸ್ಥೆಯಾಗಿದ್ದು 23 ಸಾವಿರ ಮೆಟ್ರಿಕ್ ಟನ್ ಕೋಕೋ ದಿಂದ ವಿವಿಧ ರೀತಿಯ ಚಾಕಲೇಟ್, ಉತ್ಪನ್ನ ತಯಾರಿಸುವ ಸಾಮರ್ಥ್ಯ ಹೊಂದಿದೆ.

ಉತ್ತಮ ಗುಣಮಟ್ಟದ ಮಷೀನ್ಗಳೊಂದಿಗೆ ಸಾವಿರಾರು ಜನ-ರಿಗೆ ಉದ್ಯೋಗ ನೀಡಿದೆ.

ಆಂಧ್ರದಲ್ಲಿ ಉತ್ತಮ ಗುಣಮಟ್ಟದ ಕೋಕೋ ಬೆಳೆಯಲಾಗುತ್ತಿದೆ. ಆದರೆ ಬೆಳೆ ತಾಂತ್ರಿಕತೆಯಲ್ಲಿ ಇನ್ನೂ ಸುಧಾರಣೆ ಆಗಬೇಕಿದೆ. ಪ್ರಸ್ತುತ ಆಫ್ರಿಕಾ ಮತ್ತು ಇತರೆ ದೇಶಗಳಿಂದ ಕೋಕೋವನ್ನು ಆಮದುಕೊಳ್ಳಲಾಗುತ್ತಿದೆ. ನಮ್ಮ ರಾಜ್ಯ ಮತ್ತು ದೇಶದಲ್ಲಿ ಕೋಕೋ ಉತ್ಪಾದನೆ ಕಡಿಮೆ ಆಗುತ್ತಿದೆ. ರಾಜ್ಯದಲ್ಲಿ ಅಡಿಕೆಗಾಗಿ ಕೋಕೋ ಬೆಳೆ ನಿಲ್ಲಿಸಲಾಗುತ್ತಿದೆ.

ರೈತರಿಗೆ ಲಾಭ ತರುವ ಅಡಿಕೆಯನ್ನು ಇತ್ತೀಚೆಗೆ ಯಥೇಚ್ಚವಾಗಿ ಬೆಳೆಯಲಾಗುತ್ತಿದೆ. ನೀರಾವರಿ ಭಾಗದಲ್ಲಿ ಸಹ ಅಡಿಕೆ ಹೆಚ್ಚಾಗಿದೆ. ಆಂಧ್ರ, ತಮಿಳುನಾಡಿನಲ್ಲೂ ಅಡಿಕೆ ಬೆಳೆ ಹೆಚ್ಚುತ್ತಿದೆ.

ಮಲೆನಾಡಿನ ಬೆಳೆಯಾದ ಅಡಿಕೆಯನ್ನು ಎಲ್ಲೆಡೆ ಬೆಳೆಯುತ್ತಿರುವುದನ್ನು ನೋಡಿ ಮುಂದೊಂದು ದಿನ ವಿಷಾಧನೀಯ ಪರಿಸ್ಥಿತಿ ಬರಬಹುದು, ಮಲೆನಾಡಿನ ರೈತರಿಗೆ ತೊಂದರೆಯಾಗಬಹುದೆಂಬ ಚಿಂತನೆ ಮೂಡುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಕೋಕೋ ಬೆಳೆದು ಯಶಸ್ವಿಯಾದ ರಾಜ್ಯದ ನವೀನ್ ಕೃಷ್ಣ ಶಾಸ್ತ್ರಿ ಮತ್ತು ಶ್ರೀಮತಿ ಪ್ರಶಾಂತಿ ಶಾಸ್ತ್ರಿ, ಕೇರಳದ ಟೋನಿ ಜೇಮ್ಸ್, ತಮಿಳುನಾಡಿನ ಡಿ.ಚಂದ್ರಶೇಖರನ್, ಆಂಧ್ರಪ್ರದೇಶದ ನೇಮಣಿ ಗಣೇಶ್ವರ ರಾವ್ ಇವರನ್ನು ಸನ್ಮಾನಿಸಲಾಯಿತು.

ಕೆಳದಿ ಶಿವಪ್ಪನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ.ಆರ್ಸಿ.ಜಗದೀಶ ಅಧ್ಯಕ್ಷತೆ ವಹಿಸಿದ್ದರು. ಮಾಜಿ ಕಾಡಾ ಅಧ್ಯಕ್ಷರು ಮತ್ತು ಪ್ರಗತಿಪರ ರೈತರಾದ ನಗರದ ಮಹಾದೇವಪ್ಪ ಮಾನತಾಡಿದರು. ಡಾ.ಬಿ.ಹೇಮ್ಲಾನಾಯ್ಕ್ ಸ್ವಾಗತಿಸಿದರು. ಕೊಚ್ಚಿ ಡಿಸಿಸಿಡಿ ಮಾಜಿ ನಿರ್ದೇಶಕ ಡಾ.ವೆಂಕಟೇಶ್ ಎನ್ ಹುಬ್ಬಳ್ಳಿ ಪ್ರಾಸ್ತಾವಿಕವಾಗಿ ಮಾತನಾಡಿದರು. ವೇದಿಕೆಯಲ್ಲಿ ವಿವಿ ನಿರ್ವಹಣಾ ಮಂಡಳಿ ಸದಸ್ಯರಾದ ಕೆ.ನಾಗರಾಜ್, ವೀರಭದ್ರದ್ದಪ್ಪ ಪೂಜಾರಿ, ಕೊಚಿನ್ ಡಿಸಿಸಿಡಿ ನಿರ್ದೇಶಕ ಡಾ.ರವೀಂದ್ರ ಕುಮಾರ್, ವಿವಿಧ ರಾಜ್ಯಗಳಿಂದ ಆಗಮಿಸಿದ್ದ ಪ್ರತಿನಿಧಿಗಳು, ವಿವಿ ಬೋಧಕ, ಬೋಧಕೇತರ ವರ್ಗದವರು ಹಾಜರಿದ್ದರು.

## ರೈತ, ರೈತ ಮಹಿಳೆಯರಿಗೆ ಪಶುಪಾಲನಾ ಮತ್ತು ಪಶುವೈದ್ಯಕೀಯ ಉಚಿತ ತರಬೇತಿ

ಧಾರವಾಡ: ಜಿಲ್ಲೆಯ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ ಜೂನ್ ಹಾಗೂ ಜುಲೈ –2023 ರಲ್ಲಿ ಪಶುಪಾಲನ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆಯ ವತಿಯಿಂದ ಧಾರವಾಡ, ಗದಗ, ಹಾವೇರಿ, ಕಾರವಾರ ಜಿಲ್ಲೆಯ ರೈತ ಹಾಗೂ ರೈತ ಮಹಿಳೆಯರಿಗೆ 2 ದಿನಗಳ ಅವಧಿಗೆ ತಂಡವಾರು ಉಚಿತವಾಗಿ ವೈಜ್ಞಾನಿಕ ಹೈನುಗಾರಿಕೆ ಮತ್ತು ಕುರಿ, ಮೇಕೆ ಸಾಕಾಣಿಕೆಯ ತರಬೇತಿ ನೀಡಲಾಗುತ್ತಿದೆ.

ಆಸಕ್ತಿಯುಳ್ಳ ರೈತರು ತಮ್ಮ ಹೆಸರನ್ನು ಎಸ್ಎಂಎಸ್ ಸಂದೇಶದ ಮೂಲಕ ಕಚೇ-ರಿಯ ದೂರವಾಣಿ ಕರೆ ಮುಖಾಂತರ ಅಥ-ವಾ ಖುದ್ದಾಗಿ ಭೇಟಿ ನೀಡಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 0836–2443743, 9591024499, 8618022108 ಸಂಪರ್ಕಿಸಬಹುದು ಎಂದು ಪಶುಪಾಲನಾ ಮತ್ತು ಪಶು ವೈದ್ಯಕೀಯ ತರಬೇತಿ ಕೇಂದ್ರದ ಮುಖ್ಯ ಪಶು ವೈದ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆರೋಗ್ಯ ವಿಮೆ ಪಾವತಿಸದ ಚೋಳಮಂಡಲಂ ವಿಮಾ ಕಂಪನಿಗೆ ರೂ. 1 ಲಕ್ಷ 68 ಸಾವಿರರೂ. ದಂಡ ಮತ್ತು ಪರಿಹಾರ

ಧಾರವಾಡ: ಧಾರವಾಡ ರಾಣಿ ಚೆನ್ನಮ್ಮ ನಗರದ ವಾಸಿಗಳಾದ ಸಿ.ಎಂ.ರಮೇಶ ಮತ್ತು ಅವರ ಪತ್ನಿ ಸುಶೀಲಾ ರವರು ಅಕ್ಟೋಬರ್ 29, 2020 ರಂದು ರೂ.17,895ಗಳ ಪ್ರೀಮಿಯಮ್ನ್ನು ಚೋಳಮಂಡಲಂ ವಿಮಾ ಕಂಪನಿಗೆ ಕಟ್ಟಿ ಪ್ಯಾಮೀಲಿ ಪ್ಲೋಟರ್ ಆರೋಗ್ಯ ವಿಮೆ ಪಡೆದಿದ್ದರು. ಪ್ರತಿ ವರ್ಷ ಅವರು ವಿಮೆ ನವೀಕರಿಸುತ್ತಿದ್ದರು.

ತಮ್ಮ ಕಣ್ಣಿನ ತೊಂದರೆಯ ಬಗ್ಗೆ ಏಪ್ರೀಲ್–2022ರಲ್ಲಿ ಅವರಿಬ್ಬರು ಕೇರಳದ ಎರ್ನಾಕುಲಮ್ ಆಯುರ್ವೆದಿಕ್ ಆಸ್ಪತ್ರೆಯಲ್ಲಿ ಒಳ ರೋಗಿಯಾಗಿ ಚಿಕಿತ್ಸೆ ಪಡೆದಿದ್ದರು. ಅದರ ಬಗ್ಗೆ ಅವರು ರೂ.1,08,565 ಆಸ್ಪತ್ರೆಯ ಬಿಲ್ಲನ್ನು ಹಣ ಸಂದಾಯಕ್ಕಾಗಿ ವಿಮಾ ಕಂಪನಿಗೆ ಸಲ್ಲಿಸಿದ್ದರು.

ಅವರಿಬ್ಬರಿಗೂ ಇರುವ ಕಾಯಿಲೆಗಳ ಬಗ್ಗೆ ಅವರು ತಮ್ಮ ಕ್ಲೇಮ ಅರ್ಜಿಯಲ್ಲಿ ಮಾಹಿತಿ ನೀಡಿಲ್ಲ ಅಂತ ಹೇಳಿ ಅವರ ಕ್ಲೇಮ ಅರ್ಜಿಯನ್ನು ವಿಮಾ ಕಂಪನಿ ತೀರಸ್ಕರಿಸಿತ್ತು. ತಾವು ಪಡೆದುಕೊಂಡ ವಿಮೆ ಜಾ-ರಿಯಲ್ಲಿದ್ದರೂ ಆ ರೀತಿ ಇಲ್ಲದ ಕಾರಣ ಹೇಳಿ ಕ್ಲೇಮ ಅರ್ಜಿ ತೀರಸ್ಕರಿಸಿರುವುದು, ಗ್ರಾಹಕರ ರಕ್ಷಣಾ ಕಾಯ್ದೆ ಅಡಿ ಸೇವಾ ನ್ಯೂನ್ಯತೆ ಆಗುತ್ತದೆ ಅಂತ ಹೇಳಿ ಅದಕ್ಕಾಗಿ ಪರಿಹಾರ ಒದಗಿಸಿಕೊಂಡುವಂತೆ ಚೋಳಮಂಡಲಂ ವಿಮಾ ಕಂಪನಿ ಅವರ ಮೇಲೆ ಇಬ್ಬರು ದೂರುದಾರರು ತಮ್ಮ ಫಿರ್ಯಾದಿಯನ್ನು ಧಾರವಾಡ ಜಿಲ್ಲಾಗ್ರಾಹಕರ ಆಯೋಗದ ಮುಂದೆಸಲ್ಲಿಸಿದ್ದರು.

ಈ ದೂರಿನ ಬಗ್ಗೆ ಕೂಲಂಕುಷವಾಗಿ ವಿಚಾರಣೆ ನಡೆಸಿದ ಆಯೋಗದ ಅಧ್ಯಕ್ಷರಾದ ಈಶಪ್ಪ.ಭೂತೆ, ವಿಶಾಲಾಕ್ಷಿ.ಅ. ಬೋಳಶೆಟ್ಟಿ ಹಾಗೂ ಪ್ರಭು .ಸಿ ಹಿರೇಮಠ ಸದಸ್ಯರು ಮೊದಲಿನಿಂದ ಇಬ್ಬರು ಕ್ಲೇಮುದಾರರು ಯಾವುದೇ ರೋಗರುಜಿನದಿಂದ ಬಳಲುತ್ತಿದ್ದರು ಮತ್ತು ಆ ಸಂಗತಿಯನ್ನು ಅವರು ಎದುರುದಾರ, ವಿಮಾ ಕಂಪನಿಯವರ ಮುಂದೆ ಹೇಳದೆ ಬಚ್ಚಿಟ್ಟದ್ದಾರೆ ಅನ್ನುವ ಸಂಗತಿಯನ್ನು ರುಜುವಾತು ಪಡಿಸಲು ವಿಮಾಕಂಪನಿಯವರು ವಿಫಲರಾಗಿದ್ದಾರೆ ಅಂತ ಆಯೋಗ ಅಭಿಪ್ರಾಯ ಪಟ್ಟು ತೀಪು ನೀಡಿದೆ.

ಇಬ್ಬರು ಕ್ಲೇಮುದಾರರು ತೆಗೆದುಕೊಂಡಿರುವ ವಿಮಾ ಪಾಲಸಿ ಚಾಲ್ತಿ ಇರುವುದರಿಂದ ಅವರ ಅನಾರೋಗ್ಯದ ಚಿಕಿತ್ಸೆಯ ಆಸ್ಪತ್ರೆಯ ಖರ್ಚುವೆಚ್ಚವನ್ನು ಭರಿಸುವುದು ವಿಮಾ ಕಂಪನಿಯ ಕರ್ತವ್ಯವಾಗಿದೆ.

ಆದರೆ ಅಂತಹ ಕರ್ತವ್ಯ ನಿರ್ವಹಣೆಯಿಂದ ನುಣುಚಿಕೊಳ್ಳುವುದು ಗ್ರಾಹಕರ ರಕ್ಷಣಾ ಕಾಯ್ದೆ ಅಡಿ ಸೇವಾ ನ್ಯೂನ್ಯತೆ ಆಗುತ್ತದೆ ಅಂತ ಆಯೋಗ ಅಭಿಪ್ರಾಯ ಪಟ್ಟು ದೂರುದಾರರಿಬ್ಬರ ಆಸ್ಪತ್ರೆಯ ಖರ್ಚುವೆಚ್ಚ ರೂ.1,08,565 ಅವರಿಗೆ ತೀಪು ನೀಡಿದ ಒಂದು ತಿಂಗಳೊಳಗಾಗಿ ಸಂದಾಯ ಮಾಡುವಂತೆ ವಿಮಾ ಕಂಪನಿಗೆ ಆಯೋಗ ಆದೇಶಿಸಿದೆ.ಕ್ಲೇಮು ತಿರಸ್ಕಾರದಿಂದ ದೂರುದಾರರಿಗೆ ಆಗಿರುವ ಅನಾನುಕೂಲ ಹಾಗೂ ಮಾನಸಿಕ ತೊಂದರೆಗಾಗಿ ಪ್ರತಿಯೊಬ್ಬರಿಗೆ ತಲಾ ರೂ.25,000 ರಂತೆ ಒಟ್ಟು ರೂ.50,000 ಪರಿಹಾರ ಮತ್ತು ರೂ.10,000 ಅವರ ಪ್ರಕರಣ ನಡೆಸಿದ ಖರ್ಚುವೆಚ್ಚ ಕೊಡುವಂತೆ ವಿಮಾ ಕಂಪನಿಗೆ ನೀಡಿದ ಆದೇಶದಲ್ಲಿ ತಿಳಿಸಿದೆ.

## ಸಿಲಿಂಡರ್ ಮೇಲಿನ ಸಬ್ಸಿಡಿ ಬಿಟ್ಟಂತೆ, ಉಚಿತಗಳು ಬೇಡವೆಂದವರು ಗ್ಯಾರಂಟಿ ಯೋಜನೆಗಳನ್ನು ತ್ಯಜಿಸಬಹುದು: ಡಿಕೆ ಶಿವಕುಮಾರ್

ಬೆಂಗಳೂರು: ಕಾಂಗ್ರೆಸ್ ಸರ್ಕಾರವು ಐದು ಖಾತ-ರಿಗಳನ್ನು ಘೋಷಿಸಿದ ಒಂದು ದಿನದ ನಂತರ, ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಶನಿವಾರ ಹೇಳಿಕೆ ನೀಡಿದ್ದು, 2 ಕೋಟಿ ಉದ್ಯೋಗ ಸೃಷ್ಟಿ ಮತ್ತು ರೈತರ ಆದಾಯವನ್ನು ದ್ವಿಗುಣಗೊಳಿಸುವ ಭರವಸೆಯನ್ನು ಈಡೇರಿಸುವ ಸರದಿ ಈಗ ಕೇಂದ್ರ ಸರ್ಕಾರದ್ದಾಗಿದೆ ಎಂದಿದ್ದಾರೆ.



ಶೀಘ್ರದಲ್ಲೇ ಕೇಂದ್ರ ಸರ್ಕಾರ ಅಗ್ನಿ ಪರೀಕ್ಷೆ (ಲೋಕಸಭಾ ಚುನಾವಣೆ) ಎದುರಿಸಲಿದೆ. ಪರೀಕ್ಷೆಯಲ್ಲಿ ಉತ್ತೀರ್ಣರಾಗಲು, ಅವರು ತಮ್ಮ ಭರವಸೆಗಳನ್ನು ಉಳಿಸಿಕೊಳ್ಳಬೇಕು ಎಂದು ಅವರು ಮಾಧ್ಯಮಗಳಿಗೆ ತಿಳಿಸಿದರು.

ಖಾತ್ರಿ ಯೋಜನೆಗಳ ಬಗ್ಗೆ ವಿರೋಧ ಪಕ್ಷಗಳು, ವಿಶೇಷವಾಗಿ ಬಿಜೆಪಿ ಟೀಕೆಗಳ ಕುರಿತು ಪ್ರತಿಕ್ರಿಯಿಸಿದ ಅವರು, ಟೀಕೆಗಳ ಬದಲು ಪ್ರಧಾನಿ ವಿದೇಶದಲ್ಲಿರುವ ಕಪ್ಪುಹಣವನ್ನು ತರಬೇಕು ಮತ್ತು ವೈಯಕ್ತಿಕ ಬ್ಯಾಂಕ್ ಖಾತೆಗಳಿಗೆ 15 ಲಕ್ಷ ರೂ. ಹಾಕಬೇಕು. ಕೊಟ್ಟ ಮಾತಿನಂತೆ 2 ಕೋಟಿ ಉದ್ಯೋಗ ಸೃಷ್ಟಿಸಿ ಮತ್ತು ರೈತರ ಆದಾಯ ದ್ವಿಗುಣಗೊಳಿಸಲಿ ಎಂದು ಹೇಳಿದರು.

ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರ ಹೇಳಿಕೆಗೆ ಪ್ರತಿಕ್ರಿಯಿಸಿದ ಡಿಕೆ ಶಿವಕುಮಾರ್, ಕುಮಾರಸ್ವಾಮಿ ದೊಡ್ಡ ವ್ಯಕ್ತಿ. ಅವರ ಬಗ್ಗೆ ಮಾತನಾಡಲು ಬಯಸುವುದಿಲ್ಲ. ನಾನು ನನ್ನ ಕರ್ತವ್ಯಗಳನ್ನು ನಿರ್ವಹಿಸುತ್ತೇನೆ ಮತ್ತು ಅವರು ಅವರ ಕೆಲಸವನ್ನು ಮಾಡಲಿ ಎಂದರು.

ಉಚಿತವನ್ನು ನಿರಾಕರಿಸಲು ಬಯಸುವವರು ಇದಕ್ಕೆ ಅವಕಾಶವಿದೆಯೇ ಎಂಬ ಪ್ರಶ್ನೆಗೆ ಉತ್ತ-ರಿಸಿದ ಅವರು, 200 ಯೂನಿಟ್ ಉಚಿತ ವಿದ್ಯುತ್ ಬದಲಿಗೆ ಯಾರಾದರೂ ತಮ್ಮ ವಿದ್ಯುತ್ ಬಿಲ್ಗಳನ್ನು ಪಾವತಿಸಲು ಬಯಸಿದರೆ, ಅವರು ಪಾವತಿಸಬಹುದು. ಹಲವು ಅಧಿಕಾ-ರಿಗಳು, ಮಾಧ್ಯಮದ ವ್ಯಕ್ತಿಗಳು ಉಚಿತ ವಿದ್ಯುತ್ ಪ್ರಯೋಜನ ಪಡೆಯಲು ಬಯಸುವುದಿಲ್ಲ ಎಂದು ಪತ್ರ ಬರೆದಿದ್ದಾರೆ ಎಂದರು.

ಅದಕ್ಕಾಗಿಯೇ ಪ್ರಯೋಜನಗಳನ್ನು ಪಡೆಯಲು ಅರ್ಜಿಗಳನ್ನು ಕರೆಯಲಾಗಿದೆ. ಎಲ್ಪಿಜಿ ಸಿಲಿಂಡರ್ಗಳ ಮೇಲಿನ ಸಬ್ಸಿಡಿಯನ್ನು ಬಿಟ್ಟುಕೊಟ್ಟ ಜನರ ಸಾಲಿನಲ್ಲಿ, ಇಲ್ಲಿಯೂ ಜನರು ಖಾತರಿ ಯೋಜನೆಗಳನ್ನು ತ್ಯಜಿಸಬಹುದು. ಬೆಲೆ ಏರಿಕೆಯಿಂದ ತತ್ತರಿಸಿರುವ ಜನರಿಗೆ ಪರಿಹಾರ ನೀಡುವ ಭರವಸೆಗಳನ್ನು ಕಾಂಗ್ರೆಸ್ ಸರ್ಕಾರ ಜಾರಿಗೆ ತರುತ್ತಿದೆ ಎಂದು ಶಿವಕುಮಾರ್ ಹೇಳಿದರು.

## ಅಪ್ರಾಪ್ತ ಬಾಲಕಿಯ ಮೇಲೆ ಅತ್ಯಾಚಾರ: ಅಪರಾಧಿಗೆ ಜೈಲು ಶಿಕ್ಷೆ

ಕೊಪ್ಪಳ: ಅಪ್ರಾಪ್ತ ವಯಸ್ಸಿನ ಬಾಲಕಿಯ ಮೇಲೆ ಅತ್ಯಾಚಾರ ಎಸಗಿದ ದೇವೇಂದ್ರ ಕುಕನೂರ ಸಾ:ಹಳೆಕನಕಾಪುರ ಈತನ ಮೇಲಿನ ಆರೋಪ ಸಾಭಿತಾಗಿದೆ ಎಂದು ಗೌರವಾನ್ವಿತ ಕೊಪ್ಪಳ ಹೆಚ್ಚುವರಿ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರು ಹಾಗೂ ತ್ವರಿತ ವಿಲೇವಾರಿ ನ್ಯಾಯಾಲಯ (ಪೋಕ್ಸೊ) ಇವರು ಆರೋಪಿಗೆ ಶಿಕ್ಷೆ ವಿಧಿಸಿದ್ದಾರೆ.

*ಪ್ರಕರಣ ಏನು:? ಆರೋಪಿ ದೇವೆಂದ್ರ ಕುಕನೂರು ಈತನು ಅಪ್ರಾಪ್ತ ವಯಸ್ಸಿನ ಬಾಲಕಿಗೆ ಸುಮಾರು 4 ವರ್ಷಗಳಿಂದ ಪ್ರೀತಿಸುತ್ತ ಬಂದು ಪ್ರೀತಿಸುವ ವಿಷಯ ಮನೆಯಲ್ಲಿ ಗೊತ್ತಾದರೆ ಒಪ್ಪಿಕೊಳ್ಳುವುದಿಲ್ಲ ಕಾರಣ ಊರು ಬಿಟ್ಟು ಹೋಗಿ ಮದುವೆ ಮಾಡಿಕೊಳ್ಳೋಣ ಎಂದು ಬಾಲಕಿಗೆ ಪುಸಲಾಯಿಸಿ, 2017ರ ಜೂನ್ 30ರಂದು ಬಾಲಕಿಯು ಪರೀಕ್ಷೆ ಬರೆಯಲು ಕೊಪ್ಪಳಕ್ಕೆ ಹೋದಾಗ ಆರೋಪಿತನು ಬಾಲಕಿಗೆ ಪೋನ್ ಮಾಡಿ ಗಿಣಿಗೇರಾಕ್ಕೆ ಕರೆಯಿಸಿಕೊಂಡು ಅಲ್ಲಿಂದ ದಾವಣಗೇ-ರಿಗೆ ಹೋಗಿ, ಅಲ್ಲಿನ ಒಂದು ಗುಡಿಯಲ್ಲಿ ಮದುವೆಯಾಗಿ ಇತರ ದೇವಸ್ಥಾನಗಳಿಗೆ ಸುತ್ತಾಡಿ, ಹಿಟ್ನಾಳ ಗ್ರಾಮಕ್ಕೆ ಬಂದು ಅಲ್ಲಿ ಒಂದು ಬಾಡಿಗೆ ಮನೆಯಲ್ಲಿ ವಾಸವಾಗಿ ಬಾಲಕಿಂ-ದೊಂದಿಗೆ ಪ್ರತಿದಿನ ಅತ್ಯಾಚಾರ ಮಾಡಿರುವ ಆರೋಪದ ಹಿನ್ನೆಲೆಯಲ್ಲಿ ದೂರು ಸ್ವೀಕರಿಸಿದ ಮುನಿರಾಬಾದ್ ಪೊಲೀಸರು ಪ್ರಕರಣದ ತನಿಖೆಯನ್ನು ಕೊಪ್ಪಳ ಗ್ರಾಮೀಣ ವೃತ್ತದ ಸಿಪಿಐ ಅವರು ನಿರ್ವಹಿಸಿದ್ದು, ತನಿಖೆಯಲ್ಲಿ ಆರೋಪಿತನ ಮೇಲಿನ ಆರೋಪಣೆಗಳು ಮೇಲ್ನೋಟಕ್ಕೆ ಸಾಭಿತಾಗಿದ್ದರಿಂದ ಆರೋಪಿತನ ವಿರುದ್ದ ದೋಷಾರೋಪಣ ಪಟ್ಟಿಯನ್ನು ಸಲ್ಲಿಸಿದ್ದರು.

ಪ್ರಕರಣದಲ್ಲಿ ಆರೋಪಿ ಹಳೆಕನಕಾಪುರದ ದೇವೆಂದ್ರ ಕುಕನೂರು ಈತನ ಮೇಲಿರುವ ಆರೋಪಗಳು ಸಾಭೀತಾಗಿವೆ ಎಂದು 10 ವರ್ಷಗಳ ಜೈಲು ಶಿಕ್ಷೆ ಹಾಗೂ 25 ಸಾವಿರ ರೂ. ಗಳ ದಂಡ ಭರಿಸುವಂತೆ ಆದೇಶಿಸಿ

ಗೌರವಾನ್ವಿತ ಹೆಚ್ಚುವರಿ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರು ಹಾಗೂ ತ್ವರಿತ ವಿಲೇವಾರಿ (ಪೋಕ್ಸೊ) ನ್ಯಾಯಾಧೀಶರು ಕೊಪ್ಪಳ ಇವರು ತೀಪು ಹೊರಡಿಸಿದ್ದಾರೆ.

ಸರ್ಕಾರದ ಪರವಾಗಿ ವಿಶೇಷ ಸರ್ಕಾರಿ ಅಭಿಯೋಜ-ಕರಾದ ಗೌರಮ್ಮ ದೇಸಾಯಿ ಅವರು ಪ್ರಕರಣ ನಡೆಸಿ ವಾದ ಮಂಡಿಸಿದ್ದರು ಎಂದು ವಿಶೇಷ ಸರ್ಕಾರಿ ಅಭಿಯೋಜ-ಕರ ಕಚೇರಿ, ಹೆಚ್ಚುವರಿ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರು ತ್ವರಿತ ವಿಲೇವಾರಿ (ಪೋಕ್ಸೊ) ನ್ಯಾಯಾಲಯ ಕೊಪ್ಪಳ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

## ವಿದ್ಯುತ್ ವ್ಯತ್ಯಯ; ಸಹಕರಿಸಲು ಮನವಿ

ಶಿವಮೊಗ್ಗ: ಆಲ್ಕೊಳ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣೆ ಇರುವುದರಿಂದ ಜೂ.04 ರ ಬೆಳಿಗ್ಗೆ 10–00 ರಿಂದ ಸಂಜೆ 06–00 ಗಂಟೆವರೆಗೆ ಶ್ರೀರಾಂಪುರ, ಗೆಜ್ಜೆನಹಳ್ಳಿ, ಪೆಸಿಟ್, ದೇವಕಾತಿಕೊಪ್ಪ ವ್ಯಾಪ್ತಿಯಲ್ಲಿ ಬರುವ ಶ್ರೀರಾಂಪುರ, ಆಲದೇವರಹೊಸೂರು, ಗುಡ್ಡದಹರಕೆರೆ, ತ್ಯಾವರೆಕೊಪ್ಪ, ವಿರುಪಿನಕೊಪ್ಪ, ಸಿದ್ಲಿಪುರ, ಮುದ್ದಿನಕೊಪ್ಪ, ಬೋವಿಕಾಲೋನಿ, ಹುಲಿ-ಸಿಂಹಧಾಮ, ವೀರಗಾರನ ಬೈರನಕೊಪ್ಪ, ಚನ್ನಹಳ್ಳಿ ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸಹಕರಿಸುವಂತೆ ಮೆಸ್ಕಾಂ ಪ್ರಕಟಣೆ ತಿಳಿಸಿದೆ.

## ಭೂಮಿ ಬಳಸಿಕೊಳ್ಳದ ಕೈಗಾರಿಕೆಗಳ ವಿವರ ಕೇಳಿದ ಸಚಿವ ಎಂ. ಬಿ. ಪಾಟೀಲ್



ಕೊಪ್ಪಳ: 'ರಾಜ್ಯದಲ್ಲಿ ಕೈಗಾರಿಕಾ ಉದ್ದೇಶಕ್ಕಾಗಿ ಪಡೆದುಕೊಂಡ ಭೂಮಿಯನ್ನು ಅದೇ ಕಾರಣ-ಕ್ಕೆ ಬಳಸದೇ ಇರುವವರ ಕುರಿತು ಮಾಹಿತಿ ನೀಡುವಂತೆ ಸೂಚಿಸಿದ್ದೇನೆ. ಒಂದು ವಾರದಲ್ಲಿ ಮಾಹಿತಿ ಲಭ್ಯವಾಗಲಿದೆ. ಬಳಿಕ ಅವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು" ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವ ಎಂ.ಬಿ. ಪಾಟೀಲ ಹೇಳಿದರು.

ಸಚಿವರಾದ ಬಳಿಕ ಮೊದಲ ಬಾರಿಗೆ ಇಲ್ಲಿಗೆ ಭೇಟಿ ನೀಡಿದ ಅವರು ಗವಿಸಿದ್ಧೇಶ್ವರ ಮಠಕ್ಕೆ ತೆರಳಿ ಅಭಿನವ ಗವಿಸಿದ್ಧೇಶ್ವರ ಸ್ವಾಮೀಜಿ ಆಶೀರ್ವಾದ ಪಡೆದರು. ಸುಮಾರು ಅರ್ಧ ಗಂಟೆ ಸ್ವಾಮೀಜಿ ಜೊತೆ ಚರ್ಚಿಸಿದ ಬಳಿಕ ಮಾಧ್ಯಮದವರ ಜೊತೆ ಮಾತನಾಡಿದರು.


'ಜಿಲ್ಲೆಯಲ್ಲಿ ಉಕ್ಕು ಕಾರ್ಖಾನೆಗಳಿಂದ ಪರಿಸರ ಹಾಳುತ್ತಿದ್ದರೂ ಸರ್ಕಾರ ಕ್ರಮ ಕೈಗೊಳ್ಳುತ್ತಿಲ್ಲ ಎನ್ನುವ ಮಾಧ್ಯಮದವರ ಪ್ರಶ್ನೆಗೆ 'ಪರಿಸರ ಸಂರಕ್ಷಣೆಗೆ ಆದ-್ಯತೆ ನೀಡಿಯೇ ಕೈಗಾರಿಕೆಗಳನ್ನು ನಡೆಸಬೇಕು ಎಂದು ಸೂಚಿಸಲಾಗಿದೆ. ಕೈಗಾ-ರಿಕೆಯವರು ಇಲ್ಲಿನ ಭೂಮಿ ಹಾಗೂ ನೀರು ಬಳಸಿಕೊಳ್ಳುತ್ತಾರೆ. ಅವರು ಸ್ಥಳೀಯ ಮಕ್ಕಳಿಗೆ ಸಿಎಸ್ಆರ್ ಅನುದಾನದಲ್ಲಿ ಕಡ್ಡಾಯವಾಗಿ ಶೈಕ್ಷಣಿಕ ಸೌಲಭ್ಯ ಕಲ್ಪಿಸುವಂತೆ ನಿರ್ದೇಶನ ನೀಡಲಾಗುವುದು' ಎಂದರು.

'ಗ್ಯಾರಂಟಿಗಳನ್ನು ಈಡೇರಿಸಲು ಇಷ್ಟು ದಿನ ಕೆಲಸ ಮಾಡಬೇಕಾಯಿತು. ಇನ್ನು ಮುಂದೆ ಬಿಜೆಪಿ ಸರ್ಕಾರದ ಅವಧಿಯಲ್ಲಿ ನಡೆದ ಪಿಎಸ್ಐ ಹಗರಣ, ಶೇ. 40ರಷ್ಟು ಕಮಿಷನ್ ದಂಧೆ ಮತ್ತು ಕೋವಿಡ್ ಸಮಯದಲ್ಲಿ ವೈದ್ಯಕೀಯ ಪರಿಕರಗಳ ಖರೀದಿಯಲ್ಲಿನ ಭ್ರಷ್ಟಾಚಾರದ ಬಗ್ಗೆ ತನಿಖೆ ನಡೆಸಲಾಗುವುದು' ಎಂದರು.

'ಲಕ್ಷ್ಮಣ ಸವದಿ ಮತ್ತು ಜಗದೀಶ ಶೆಟ್ಟರ್ ಅವರಿಗೆ ಪಕ್ಷದಲ್ಲಿ ಸೂಕ್ತ ಸ್ಥಾನಮಾನ ನೀಡುವ ನಿಟ್ಟಿನಲ್ಲಿ ಹೈಕಮಾಂಡ್ ತೀರ್ಮಾನ ಕೈಗೊಳ್ಳಲಿದೆ. ಅವರಿಗೆ ಯಾವ ಸ್ಥಾನಮಾನ ಕೊಡಲಾಗುತ್ತದೆ ಎಂದು ಹೇಳಲು ನಾನು ಹೈಕಮಾಂಡ್ ಅಲ್ಲ. ಗ್ಯಾರಂಟಿ ಯೋಜನೆಗಳಲ್ಲಿ ಯಾವುದೆ ಗೊಂದಲವಿಲ್ಲ. ಬಿಜೆಪಿ ವಿನಾಕಾರಣ ಗೊಂದಲ ಸೃಷ್ಟಿಸುವ ಕೆಲಸ ಮಾಡುತ್ತಿದೆ' ಎಂದು ಆರೋಪಿಸಿದರು.

'ಕೊಪ್ಪಳದ ಗವಿಸಿದ್ಧೇಶ್ವರ ಮಠ ಈ ಭಾಗದ ತುಮಕೂರಿನ ಸಿದ್ಧಗಂಗ ಇದ್ದಂತೆ. ಗವಿಮಠದ ಸ್ವಾಮೀಜಿ ಜೊತೆ ಜಿಲ್ಲೆಯ ನೀರಾವರಿ, ಕೈಗಾರಿಕೆ ಮತ್ತು ಉದ್ಯೋಗ ಸೃಷ್ಟಿಯ ಬಗ್ಗೆ ಚರ್ಚೆ ನಡೆಸಲಾಯಿತು' ಎಂದು ತಿಳಿಸಿದರು. ಶಾಸಕ ರಾಘವೇಂದ್ರ ಹಿಟ್ನಾಳ ಇದ್ದರು.

## ರಾಜ್ಯ ರೈತ ಸಂಘದ ಪದಾಧಿಕಾರಿಗಳ ಆಯ್ಕೆ




ನಿಡಗುಂದಿ : ತಾಲೂಕಿನ ಮಸೂತಿ ಗ್ರಾಮದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಗ್ರಾಮ ಘಟಕದ ಪದಾಧಿಕಾರಿಗಳ ಆಯ್ಕೆಯ ಸಭೆ ನಡೆಯಿತು. ಸಭೆಯನ್ನುದ್ದೇಶಿಸಿ ಮಾತನಾಡಿದ ಸಂಘದ ತಾಲೂಕಾ ಅಧ್ಯಕ್ಷ ಡಾ.ಕೆ.ಎಮ್.ಬಿರಾದಾರ , ರೈತರು ತಮ್ಮ ಹಕ್ಕುಗಳನ್ನು ಪಡೆಯಬೇಕಾದರೆ ಸಂಘಟಿತರಾಗಬೇಕು, ಸರ್ಕಾರದ ಸೌಲಭ್ಯಗಳನ್ನು ಉತ್ತಮ ರೀತಿಯಲ್ಲಿ ಸದ್ಬಳಕೆ ಮಾಡಿಕೊಳ್ಳಬೇಕು , ರೈತರ ಏಕೈಕ ಧ್ವನಿಯಾಗಿ ಕರ್ನಾಟಕದಲ್ಲಿ ರೈತ ಸಂಘ ಕಾರ್ಯ ನಿರ್ವಹಿಸುತ್ತಿದೆ ಎಂದರು.

ಗೌರವಾಧ್ಯಕ್ಷರಾಗಿ ಚನ್ನಪ್ಪ ಮಕಾಶಿ, ಅಧ್ಯಕ್ಷರಾಗಿ ಚಾಂದಸಾಬ ಪ. ನದಾಫ, ಉಪಾಧ್ಯಕ್ಷರಾಗಿ ಬಮ್ಮಣ್ಣ ಕಾ. ಕೊಲಕಾರ ಮತ್ತು ಕರಿಯಪ್ಪ ಯ. ಆಲೂರ, ಪ್ರಧಾನ ಕಾರ್ಯದರ್ಶಿಯಾಗಿ ವಿಠ್ಠಲ ಬ.ಮುತ್ತಣ್ಣವರ, ಕಾರ್ಯಾಧ್ಯಕ್ಷರಾಗಿ ಅಮಾತ್ಯಪ್ಪ ಪುಂ.ಕರಿಭೀಯಪ್ಪನವರ, ಸಹಕಾರ್ಯದರ್ಶಿಯಾಗಿ ಜೆಟ್ಟೆಪ್ಪ ರಾ.ಮೇಲಿನಮನಿ, ಸಂಚಾಲಕರಾಗಿ ಸೋಮಣ್ಣ ಯ.ಹೂಗಾರ ಮತ್ತು ಬಸಪ್ಪ ಮು.ಹುಲ್ಲಳ್ಳಿ, ಸಹ–ಸಂಚಾಲಕರಾಗಿ ಗುರಪ್ಪ ಮಾ.ಹುಲ್ಲಳ್ಳಿ, ಖಜಾಂಚಿಂ-ಯಾಗಿ ಬಸಪ್ಪ ಕ.ಮುತ್ತಣ್ಣವರ, ಕೋಶಾಧ್ಯಕ್ಷರಾಗಿ ಮಾನಪ್ಪ ಶಿ.ಹುಲ್ಲಳ್ಳಿ, ಪ್ರಧಾನ ಸಂಚಾಲಕರಾಗಿ ಯಲಗೂರದಪ್ಪ ಜೆ.ಕರಿಭೀಯಪ್ಪನವರ, ಸಂಘಟನಾ ಕಾರ್ಯದರ್ಶಿಯಾಗಿ ವಿಠ್ಠಲ ದ್ಯಾ.ಮುತ್ತಣ್ಣವರ ಹಾಗೂ ಸಮೂಹ ಮಾಧ್ಯಮ ಪ್ರತಿನಿಧಿಯಾಗಿ ಮೌನೇಶ ಅ.ರೂಡಗಿ ಆಯ್ಕೆಯಾಗಿದ್ದಾರೆಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ನಿಡಗುಂದಿ ತಾಲೂಕಾ ಘಟಕದ ಅಧ್ಯಕ್ಷ ಡಾ.ಕೆ.ಎಮ್.ಬಿರಾದಾರ (ಗುಡ್ನಾಳ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಂಘದ ತಾಲೂಕಾ ಘಟಕದ ಗೌರವಾಧ್ಯಕ್ಷ ಎ.ಎಂ ಲಷ್ಕರಿ, ತಾಲೂಕಾ ಪ್ರಧಾನ ಕಾರ್ಯದರ್ಶಿ ವೈ.ಎಲ್.ಪಾಟೀಲ, ಬಳಬಟ್ಟಿ ಗ್ರಾಮ ಘಟಕದ ಸಹ-ಸಂಚಾಲಕ ಮಂಜುನಾಥ್ ಬೇವಿನಗಿಡದ, ಮಕ್ತುಮ್ ಪಟೇಲ ಗುಡ್ನಾಳ, ಶಾಹೀದ್ ತಹಶೀಲ್ದಾರ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ವಿಶ್ವ ಬೈಸಿಕಲ್ ದಿನ: ಆರೋಗ್ಯಕ್ಕಾಗಿ ಸೈಕಲ್ ಜಾಥಾ

ಶಿವಮೊಗ್ಗ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಎನ್.ಸಿ.ಡಿ ಘಟಕ ಮತ್ತು ನ್ಯಾಷನಲ್ ಮೆಡಿಕೋಸ್ ಆರ್ಗನೈಜೇಶನ್, ಶಿವಮೊಗ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಇವರುಗಳ ಸಂಯುಕ್ತಾಶ್ರಯದಲ್ಲಿ ಇಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾ-ರಿಗಳ ಕಚೇರಿಯಲ್ಲಿ ಸೈಕಲ್ ಜಾಥಾವನ್ನು ಹಮ್ಮಿಕೊಳ್ಳಲಾಗಿತ್ತು.




ಕಾರ್ಯಕ್ರಮದಲ್ಲಿ ಜಿಲ್ಲಾ ಮೆಗ್ಗಾನ್ ಬೋಧನಾ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ.ಶ್ರೀಧರ್, ಕಾರ್ಯಕ್ರಮ ಅನುಷ್ಠನಾಧಿಕಾರಿ ಡಾ. ಶಮಾ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಸಿದ್ಧನ ಗೌಡ ಪಾಟೀಲ್, ಕಿರಣ್, ಅರುಣ್, ಭದ್ರಾವತಿಯ ಹಿರಿಯ ಪತ್ರಕರ್ತ ರವೀಂದ್ರ, ಪ್ರೆಸ್ ಟ್ರಸ್ಟ್ನ ಅಧ್ಯಕ್ಷ ಎಂ.ಮಂಜುನಾಥ್ ಇತರರು ಉಪಸ್ಥತರಿದ್ದರು.

ಸೈಕಲ್ ಜಾಥಾವು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇ-ರಿಯಿಂದ ಹೊರಟು, ಕರ್ನಾಟಕ ಸಂಘ, ಅಮೀರ್ ಅಹಮದ್ ವೃತ್ತ, ಬಸ್ಟ್ಯಾಂಡ್, ಸರ್ಕೀಟ್ ಹೌಸ್ ವೃತ್ತ, ಕುವೆಂಪು ರಸ್ತೆ ಮೂಲಕ ಐ.ಎಂ.ಎ ಹಾಲ್ ತಲುಪಿತು.

ಬೈಸಿಕಲ್ ಉಪಯೋಗ & ಅಸಾಂಕ್ರಾಮಿಕ ರೋಗ ನಿರ್ವಹಣೆ: ಎರಡು ಶತಮಾನಗಳಿಂದ ಬಳಕೆಯಲ್ಲಿರುವ ಬೈಸಿಕಲ್ ಸರಳ ಕೈಗೆಟುಕುವ, ವಿಶ್ವಾಸಾರ್ಹ, ಸ್ವಚ್ಛ ಮತ್ತು ಪರಿಸರಕ್ಕೆ ಸೂಕ್ತವಾದ ಸುಸ್ಥಿರ ಸಾರಿಗೆ ಸಾಧನವಾಗಿದೆ, ಬೈಸಿಕಲ್ ಶುದ್ಧ ಗಾಳಿ ಮತ್ತು ಕಡಿಮೆ ದಟ್ಟಣೆಗೆ ಅವಕಾಶ ಮಾಡಿಕೊಡುವುದರಿಂದ ಶಿಕ್ಷಣ, ಆರೋಗ್ಯ ರಕ್ಷಣೆ ಮತ್ತು ಇತರ ಸಾಮಾಜಿಕ ಸೇವೆಗಳನ್ನು ಹೆಚ್ಚು ದುರ್ಬಲ ವರ್ಗದವರಿಗೆ ಲಭಿಸುವಂತೆ ಮಾಡುತ್ತದೆ.

ಬೈಸಿಕಲ್ ಪ್ರಯೋಜನಗಳನ್ನು ಗುರುತಿಸಿ ಪ್ರೇತ್ಸಾಹಿಸಲು ವಿಶ್ವ ಸಂಸ್ಥೆಯ ಸಾಮಾನ್ಯ ಸಭೆಯು ಜೂನ್ 3 ನ್ನು ವಿಶ್ವ ಬೈಸಿಕಲ್ ದಿನವೆಂದು ಘೋಷಿಸಿದೆ. ಆರೋಗ್ಯಕ್ಕಾಗಿ ಸೈಕಲ್ ಎಂಬುದು ಈ ವರ್ಷದ ಘೋಷ ವಾಕ್ಯವಾಗಿದೆ.

ಭಾರತದಲ್ಲಿ ಇತ್ತೀಚಿನ ವರ್ಷಗಳಲ್ಲಿ ಸಾಂಕ್ರಾಮಿಕ ರೋಗಗಳ ಹಾವಳಿ ಕಡಿಮೆಯಾಗಿದ್ದು, ಅಸಾಂಕ್ರಾಮಿಕ ರೋಗಗಳು ಹೆಚ್ಚಾಗಿ ಕಂಡುಬರುತ್ತವೆ. ಅಧಿಕ ರಕ್ತದೊತ್ತಡ, ಹೃದಯ ಸಂಬಂಧಿ ರೋಗಗಳು, ಹೃದಯ ಸ್ಥಂಭನ, ಪಾರ್ಶ್ವವಾಯು, ಮಧುಮೇಹ ಮತ್ತು ಕ್ಯಾನ್ಸರ್ ಪ್ರಮುಖ ಅಸಾಂಕ್ರಮಿಕ ರೋಗಗಳಾಗಿವೆ.

ವಿಶ್ವ ಆರೋಗ್ಯ ಸಂಸ್ಥೆಯ 2016 ರ ಅಂಕಿ ಅಂಶಗಳ ಪ್ರಕಾರ ಈ ರೋಗಗಳಿಂದ ವಿಶ್ವದಲ್ಲಿ ಪ್ರತಿವರ್ಷ 4 ಕೋಟಿ 10 ಲಕ್ಷ ಜನ ಅಂದರೆ ಪ್ರತಿ ಸೆಕೆಂಡಿಗೆ 75 ಜನರು ಮತ್ತು ಭಾರತದಲ್ಲಿ 60 ಲಕ್ಷ ಜನ ಅಂದರೆ ಪ್ರತಿ ಸೆಕೆಂಡಿಗೆ 12 ಜನ ಅಕಾಲಿಕ ಮರಣಕ್ಕೆ ತುತ್ತಾಗುತ್ತಿದ್ದಾರೆ. ಒಟ್ಟು ಮರಣಗಳಲ್ಲಿ ಶೇ 60% ಕ್ಕೂ ಹೆಚ್ಚು ಮರಣಗಳು ಅಸಾಂಕ್ರಾಮಿಕ ರೋಗಗಳಿಂದಲೇ ಅಂಭವಿಸುತ್ತಿವೆ.

ತಂಬಾಕು ವ್ಯಸನ, ವ್ಯಾಯಾಮ ಅಥವಾ ದೈಹಿಕ ಶ್ರಮವಿಲ್ಲದಿರುವುದು, ಅತಿಯಾದ ಮದ್ಯಪಾನ ಮತ್ತು ಅನಾರೋಗ್ಯಕರ ಆಹಾರ ಅಭಾಸಗಳು ಅಸಾಂಕ್ರಾಮಿಕ ರೋಗಗಳಿಗೆ ಮುಖ್ಯ ಕಾರಣಗಳು.


ತಂಬಾಕು ಸೇವನೆಯ ದುಷ್ಪರಿಣಾಮದಿಂದ ಉಂಟಾಗುವ ರೋಗಗಳಿಂದಲೇ ಭಾರತದಲ್ಲಿ ಪ್ರತಿ ವರ್ಷ 13.5 ಲಕ್ಷ ಜನ ಅಕಾಲಿಕ ಮರಣಕ್ಕೆ ತುತ್ತಾಗುತ್ತಿದ್ದಾರೆ. ಭಾರತದಲ್ಲಿ ಕಂಡುಬರುವ ಶೇ.40 ರಷ್ಟು ಕ್ಯಾನ್ಸರ್ಗೆ ತಂಬಾಕು ನೇರ ಕಾರಣವಾಗಿದೆ.

ತಂಬಾಕು ವ್ಯಸನ ತ್ಯಜಿಸಲು ಬಯಸುವವ-ರಿಗೆ ಸಹಾಯ ಮಾಡಲು ಜಿಲ್ಲಾ ಮೆಗ್ಗಾನ್ ಭೋದನಾ ಆಸ್ಪತ್ರೆಯ ಕೊಠಡಿ ಸಂಖ್ಯೆ 17 ರಲ್ಲಿ ತಂಬಾಕು ವ್ಯಸನ ಮುಕ್ತಿ ಕೇಂದ್ರವನ್ನು ಸ್ಥಾಪಿಸಲಾಗಿದ್ದು, ಸಾರ್ವಜನಿಕರು ಸದುಪಯೋಗ ಪಡೆದುಕೊಳ್ಳಬಹುದಾಗಿದೆ.

ಪ್ರತಿದಿನ ಕನಿಷ್ಠ 30 ನಿಮಿಷಗಳ ದೈಹಿಕ ವ್ಯಾಯಾಮ ಉತ್ತಮ ಆರೋಗ್ಯಕ್ಕೆ ಅತ್ಯಾವಶ್ಯಕ, ಮಧ್ಯಮ ತೀವ್ರತೆಯ ನಿಯಮಿತ ದೈಹಿಕ ಚಟುವಟಿಕೆಗಳಾದ ಸೈಕ್ಲಿಂಗ್, ಯೋಗ, ಈಜು ಅಥ-ವಾ ಇತರೆ ಕ್ರೀಡಾ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವುದರಿಂದ ಆರೋಗ್ಯಕ್ಕೆ ಗಮನಾರ್ಹ ಪ್ರಯೋಜನಗಳನ್ನು ಪಡೆಯಬಹುದಾಗಿದೆ.

ಎಲ್ಲಾ ಸಾರ್ವಜನಿಕ ಆಸ್ಪತ್ರೆಗಳಲ್ಲಿ 30 ವರ್ಷ ಮೇಲ್ಪಟ್ಟವರಿಗೆ ಅಸಾಂಕ್ರಾಮಿಕ ರೋಗಗಳ ಸ್ಕ್ರೀನಿಂಗ್ ಲಭ್ಯವಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬಹುದು.

# ಜನರ ನಿರೀಕ್ಷೆಗೆ ತಕ್ಕಂತೆ ಜವಾಬ್ದಾರಿಯಿಂದ ಕಾರ್ಯ ನಿರ್ವಹಿಸಿ: ಲಕ್ಷ್ಮೀ ಹೆಬ್ಬಾಳಕರ್



ಬೆಂಗಳೂರು: ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅತ್ಯಂತ ಮಹತ್ವದ ಇಲಾಖೆಯಾಗಿದ್ದು, ರಾಜ್ಯಕ್ಕೆ ಹಾಗೂ ಸರಕಾರಕ್ಕೆಉತ್ತಮ ಹೆಸರು ತರುವ ದಿಸೆಯಲ್ಲಿ ಎಲ್ಲರೂ ಜವಾಬ್ದಾರಿಯಿಂದ ಕೆಲಸ ನಿರ್ವಹಿಸಬೇಕು ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಹಾಗೂ ವಿಕಲಚೇತನರು ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅಧಿಕಾರಿಗಳಿಗೆ ಕರೆ ನೀಡಿದ್ದಾರೆ.

ಸಚಿವರಾದ ನಂತರ ಮೊದಲ ಬಾರಿಗೆ ಇಲಾಖೆಯ ಅಧಿಕಾರಿಗಳ ಸಭೆ ನಡೆಸಿದ ಅವರು, ಜನರು ಬಹಳ ನಿರೀಕ್ಷೆ ಇಟ್ಟು ಕಾಂಗ್ರೆಸ್ ಸರಕಾರವನ್ನು ಅಧಿಕಾರಕ್ಕೆ ತಂದಿದ್ದಾರೆ. ಅವರ ನಿರೀಕ್ಷೆಗೆ ತಕ್ಕಂತೆ ಕೆಲಸ ಮಾಡುವುದು ನಮ್ಮ ಕರ್ತವ್ಯ. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅತ್ಯಂತ ಜವಾಬ್ದಾರಿ ಮತ್ತು ಸೂಕ್ಷ್ಮವಾದ ಇಲಾಖೆ ಕೂಡ ಹೌದು. ಇಲಾಖೆಯಲ್ಲಿ ಸಣ್ಣ ಲೋಪವನ್ನೂ ಸಹಿಸಲು ಸಾಧ್ಯವಿಲ್ಲ. ನಮ್ಮ ನಿರೀಕ್ಷೆ ಮತ್ತು ವೇಗಕ್ಕೆ ತಕ್ಕಂತೆ ಕೆಲಸ ನಿರ್ವಹಿಸಬೇಕು ಎಂದು ಸೂಚಿಸಿದರು.

ಹೊಸದಾಗಿ ಘೋಷಣೆಯಾಗಿರುವ ಗೃಹಲಕ್ಷ್ಮೀ ಸೇರಿದಂತೆ ಇಲಾಖೆಯ ಪ್ರತಿಯೊಂದು ಯೋಜನೆಗಳನ್ನೂ ಜನಸಾಮಾನ್ಯರಿಗೆ ಸಮರ್ಪಕವಾಗಿ ತಲುಪಿಸಬೇಕು. ಯಾವುದೇ ರೀತಿಯ ದೂರುಗಳಿಗೆ ಅವಕಾಶವಿರಬಾರದು. ಇಲಾಖೆ ಉತ್ತಮವಾಗಿ ಕೆಲಸ ನಿರ್ವಹಿಸಿದರೆ ಸರಕಾರಕ್ಕೂ ಒಳ್ಳೆಯ ಹೆಸರು ಬರುತ್ತದೆ. ಹಾಗಾಗಿ ಪ್ರತಿಯೊಬ್ಬರೂ ತಮ್ಮ ತಮ್ಮ ಜವಾಬ್ದಾರಿಗಳನ್ನು ಅರ್ಥಮಾಡಿಕೊಂಡು ಕೆಲಸ ಮಾಡಬೇಕು ಎಂದು ಹೆಬ್ಬಾಳಕರ್ ತಿಳಿಸಿದರು.

ಮುಂದಿನ ದಿನಗಳಲ್ಲಿ ವಿಸ್ತೃತವಾಗಿ ಇಲಾಖೆಗೆ ಸಂಬಂಧಿಸಿದ ಚರ್ಚೆ ನಡೆಸಲಾಗುವುದು. ಜೊತೆಗೆ ಪ್ರತಿ ಜಿಲ್ಲೆಗೂ ತೆರಳಿ ಪ್ರಗತಿ ಪರಿಶೀಲನೆ ನಡೆಸಲಾಗುವುದು. ಹಾಗಾಗಿ ಹೊಸ ಸರಕಾರದ ನಿರೀಕ್ಷೆಗೆ ತಕ್ಕಂತೆ ನಿಮ್ಮ ಕಾರ್ಯನಿರ್ವಹಣೆ ಇರಲಿ ಎಂದು ಅವರು ಹೇಳಿದರು.

ಇಲಾಖೆಯ ಕಾರ್ಯದರ್ಶಿ ಡಾ.ಎನ್. ಮಂಜುಳಾ, ನಿರ್ದೇಶಕಿ ಡಾ.ಕೆ.ಎನ್. ಅನುರಾಧಾ, ಮಕ್ಕಳ ರಕ್ಷಣಾ ನಿರ್ದೇಶಕ ಚಂದ್ರಕಾಂತ, ಮಹಿಳಾ ಆಯೋಗದ ಕಾರ್ಯದರ್ಶಿ ಕವಿತಾ ಮಣ್ಣಿಕೇರಿ, ಮಹಿಳಾ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕಿ ಪುಷ್ಪಲತಾ, ವಿಕಲಚೇತನರ ಇಲಾಖೆಯ ಜಂಟಿ ನಿರ್ದೇಶಕ ಶೇಷಪ್ಪ, ಬಾಲವಿಕಾಸ ಅಕಾಡೆಮಿ ಕಾರ್ಯದರ್ಶಿ ಭಾರತಿ ಶೆಟ್ಟರ್, ಬಾಲಭವನದ ಕಾರ್ಯದರ್ಶಿ ರಾಜಮೂರ್ತಿ, ಇಲಾಖೆಯ ಎಲ್ಲ ಜಂಟಿ ನಿರ್ದೇಶಕರು, ಉಪನಿರ್ದೇಶಕರು ಮತ್ತಿತರ ಅಧಿಕಾರಿಗಳು ಉಪಸ್ಥಿತರಿದ್ದರು.

## ಸಬ್‌ಇನ್ಸ್‌ಪೆಕ್ಟರ್ ಪತ್ನಿ ಅನುಮಾನಾಸ್ಪದ ಸಾವು



ಬೆಂಗಳೂರು: ನಗರದ ಸಬ್‌ಇನ್ಸ್ಪೆಕ್ಟರ್ ಒಬ್ಬರ ಮೇಲೆ ಪತ್ನಿಗೆ ಕಿರುಕುಳ ನೀಡಿ ಕೊಲೆಗೈದ ಆರೋಪ ಕೇಳಿ ಬಂದಿದೆ.

ಮೃತ ಮಹಿಳೆಯನ್ನು ಶಿಲ್ಪಾ (33) ಎಂದು ಗುರುತಿಸಲಾಗಿದೆ. ಮಹಿಳೆಯ ಪತಿ ರಮೇಶ್ ಅವರ ಮೇಲೆ ಶಿಲ್ಪಾ ಪೋಷಕರು ಕೊಲೆ ಆರೋಪ ಹೊರಿಸಿದ್ದಾರೆ. ಅಲ್ಲದೆ ನಿರಂತರ ಪತ್ನಿಗೆ ಕಿರುಕುಳ ನೀಡುತ್ತಿದ್ದರು ಎಂಬ ಆರೋಪ ಸಹ ಕೇಳಿ ಬಂದಿದೆ.

ರಮೇಶ್ ಹಾಗೂ ಶಿಲ್ಪಾ ಹತ್ತು ವರ್ಷಗಳಿಂದ ಪ್ರೀತಿಸುತ್ತಿದ್ದರು. ಕಳೆದ ಐದಾರು ವರ್ಷಗಳಿಂದ ಲಿವಿಂಗ್ ಟುಗೇದರ್ ರಿಲೇಶನ್ಶಿಪ್ನಲ್ಲಿದ್ದರು. ಆದರೆ ಮದುವೆಯಾಗಲು ಕಾರಣ ಹೇಳಿ ತಪ್ಪಿಸಿಕೊಳ್ಳುತ್ತಿದ್ದ. ಬಳಿಕ ಹಠಬಿಡದೆ ಪೊಲೀಸರ ಸಮ್ಮುಖದಲ್ಲಿ ಶಿಲ್ಪಾ, ರಮೇಶ್ನನ್ನು ಮದುವೆಗೆ ಒಪ್ಪಿಸಿದ್ದಳು. ಮದುವೆ ಬಳಿಕ ಮನೆಯವರು ಒಪ್ಪುತ್ತಿಲ್ಲ ಎಂದು ಪತ್ನಿಗೆ ಪ್ರತ್ಯೇಕ ಮನೆ ಮಾಡಿಕೊಟ್ಟಿದ್ದ. ಆದರೆ ಜೀವನಕ್ಕೆ ಯಾವುದೇ ಅರ್ಥಿಕ ನೆರವು ನೀಡುತ್ತಿರಲಿಲ್ಲ. ಪದೇ ಪದೇ ಜಾತಿ ನಿಂದನೆ ಮಾಡಿ, ತನ್ನ ಅಕ್ಕನ ಮಗಳನ್ನು ಮದುವೆಯಾಗಲು ನೀನು ಅಡ್ಡಿಯಾಗಿದ್ದೀಯಾ ಮನೆಬಿಟ್ಟು ಹೋಗು ಎಂದು ಕಿರುಕುಳ ನೀಡುತ್ತಿದ್ದ ಎಂದು ಮಹಿಳೆಯ ಪೋಷಕರು ದೂರಿದ್ದಾರೆ. ಶುಕ್ರವಾರ ರಾತ್ರಿ ಕುಟುಂಬದವರ ಜೊತೆ ಫೋನಿನಲ್ಲಿ ಮಾತನಾಡಿದ್ದ ಶಿಲ್ಪಾ ಖರ್ಚಿಗೆ ಹಣ ಬೇಕು ಎಂದು ಹಾಕಿಸಿಕೊಂಡಿದ್ದಳು. ಆದರೆ ಇಂದು ಬೆಳಗ್ಗೆ ಮನೆಯ ಮಾಲೀಕರು ಬಾಗಿಲು ತೆರೆಯುತ್ತಿಲ್ಲ ಎಂದು ಕುಟುಂಬದವರಿಗೆ ತಿಳಿಸಿದ್ದಾರೆ. ಕುಟುಂಬದವರು ಬರುವ ಮುನ್ನವೇ ಶವವನ್ನು ಆಸ್ಪತ್ರೆಗೆ ಸಾಗಿಸಲಾಗಿದೆ. ಈ ಬಗ್ಗೆ ಸೂಕ್ತ ತನಿಖೆ ನಡೆಸಿ ನ್ಯಾಯ ಒದಗಿಸುವಂತೆ ಶಿಲ್ಪಾ ಕುಟುಂಬ ಆಗ್ರಹಿಸಿದೆ.

## ಸಿಎಂಸಿಯ ನಿರ್ಲಕ್ಷ್ಯ: ಆರ್‌ಆರ್‌ಆರ್ ಕೇಂದ್ರಗಳು ನಿಷ್ಕ್ರಿಯ




ಮಡಿಕೇರಿ: ಕೇಂದ್ರ ಸರ್ಕಾರದ ಹಲವು ಯೋಜನೆಗಳು ಬಹುತೇಕ ಪ್ರದೇಶಗಳಲ್ಲಿ ಕೇವಲ ಪೇಪರ್‌ಗಳಲ್ಲಿ ಮತ್ತು ಫೋಟೋದಲ್ಲಿ ಮಾತ್ರ ನೋಡಬಹುದು ಎಂಬುದಕ್ಕೆ ಮಡಿಕೇರಿಯ ಆರ್‌ಆರ್‌ಆರ್ ಕೇಂದ್ರಗಳು ಸಾಕ್ಷಿಯಾಗಿ ನಿಂತಿವೆ.

ಮಡಿಕೇರಿ ನಗರ ಪಾಲಿಕೆ ಆಯುಕ್ತರು, ಅಧ್ಯಕ್ಷರು ಮತ್ತು ಪದಾಧಿಕಾರಿಗಳು ನಗರದಲ್ಲಿ ಕಳೆದ ಮೇ 20 ರಂದು ಸ್ವಚ್ಛ ಭಾರತ್ ಮಿಷನ್ ನಗರ 2.0 ಯೋಜನೆಯಡಿ 'ಮೈ ಲೈಫ್, ಮೈ ಕ್ಲೀನ್ ಸಿಟಿ' ಉಪಕ್ರಮಕ್ಕೆ ಚಾಲನೆ ನೀಡಿದ್ದರು.

ಅಲ್ಲದೆ ನಗರದಾದ್ಯಂತ ಐದು ಆರ್‌ಆರ್‌ಆರ್ (ಕಡಿಮೆ ಮಾಡುವುದು, ಮರುಬಳಕೆ, ಪುನರ್ ಬಳಕೆ') ಕೇಂದ್ರಗಳನ್ನು ಸ್ಥಾಪಿಸುವುದಾಗಿ ಘೋಷಿಸಿದ್ದರು.

ಮೊಬೈಲ್ ವಾಹನಗಳಲ್ಲಿ ಅಳವಡಿಸಲಾದ ಲೌಡ್ ಸ್ಪೀಕರ್‌ಗಳು ಇನ್ನೂ ನಗರದಾದ್ಯಂತ ಸುತ್ತು ಹಾಕುತ್ತಿವೆ ಮತ್ತು ಹಳೆಯ ಪುಸ್ತಕಗಳು, ಇ-ತ್ಯಾಜ್ಯ ಹಾಗೂ ಇತರ ಮರುಬಳಕೆ ಮಾಡಬಹುದಾದ ಮತ್ತು ಸಂಸ್ಕರಿಸಬಹುದಾದ ವಸ್ತುಗಳನ್ನು ದಾನ ಮಾಡುವಂತೆ ಜನರಲ್ಲಿ ಮನವಿ ಮಾಡುತ್ತಿವೆ.

ಆದಾಗ್ಯೂ, ನಗರದಾದ್ಯಂತ ಇರುವ ಎಲ್ಲಾ ಐದು ಆರ್‌ಆರ್‌ಆರ್ ಕೇಂದ್ರಗಳು ನಿಷ್ಕ್ರಿಯಗೊಂಡಿವೆ. ಆದರೆ ಕೆಲವು ನಿವಾಸಿಗಳು ನೀಡಿದ ವಸ್ತುಗಳು ಆರ್‌ಆರ್‌ಆರ್ ಕೇಂದ್ರಗಳಲ್ಲಿ ಅನಾಥವಾಗಿ ಬಿದ್ದಿವೆ.

ಮಡಿಕೇರಿಯ ಟೌನ್ ಹಾಲ್ ನಗರದ ಮಧ್ಯಭಾಗದಲ್ಲಿ, ನಿವಾಸಿಗಳು ದಾನವಾಗಿ ನೀಡಿದ ಸಾಮಗ್ರಿಗಳು ಜೂನ್ 5 ರ ವೇಳೆಗೆ ಕಸದ ಗುಂಡಿ ಸೇರುವ ಸಾಧ್ಯತೆಯಿದೆ.

ಜೂನ್ 5 ರ ವಿಶ್ವ ಪರಿಸರ ದಿನದವರೆಗೆ ಈ ಕೇಂದ್ರಗಳು ಕಾರ್ಯ ನಿರ್ವಹಿಸಬೇಕಾಗಿತ್ತು. ಆದರೆ ಸಿಎಂಸಿ ಅಧಿಕಾರಿಗಳ ನಿರಾಸಕ್ತಿಯಿಂದ ಮೊದಲ ದಿನದಿಂದಲೇ ಸಮರ್ಪಕವಾಗಿ ಕಾರ್ಯ ನಿರ್ವಹಿಸಲು ವಿಫಲವಾಗಿವೆ.

ಡಂಪಿಂಗ್ ಯಾರ್ಡ್‌ಗೆ ಹೋಗುವ ತ್ಯಾಜ್ಯವನ್ನು ಕಡಿಮೆಗೊಳಿಸಿ, ಮರುಬಳಕೆ ಮತ್ತು ಪುನರ್ ಬಳಕೆಗೆ ಪ್ರೋತ್ಸಾಹ ನೀಡುವುದು ಈ ಆರ್‌ಆರ್‌ಆರ್ ಕೇಂದ್ರದ ಉದ್ದೇಶವಾಗಿದೆ.

## ಭಾರತ ಬೆಳಗಾವಿ ನಗರದಲ್ಲಿ ಸರಕಾರಿ ಕಚೇರಿಗಳ ಬಹುಮಹಡಿ ಕಟ್ಟಡ ನಿರ್ಮಾಣಕ್ಕೆ ಸ್ಥಳ ಪರಿಶೀಲನೆ



ಬೆಳಗಾವಿ: ನಗರದ ಹೃದಯಭಾಗದಲ್ಲಿ ಇರುವ ಜಿಲ್ಲಾಧಿಕಾರಿಗಳ ಕಚೇರಿ ಸೇರಿದಂತೆ ಇತರೆ ಕಚೇರಿಗಳ ಜಾಗೆಯಲ್ಲಿಯೇ ಸರಕಾರಿ ಕಚೇರಿಗಳ ಸುಸಜ್ಜಿತ ಬಹುಮಹಡಿ ಕಟ್ಟಡ ನಿರ್ಮಾಣಕ್ಕೆ ಸಂಬಂಧಿಸಿದಂತೆ ಲೋಕೋಪಯೋಗಿ ಇಲಾಖೆಯ ಹಿರಿಯ ಅಧಿಕಾರಿಗಳ ತಂಡ ಶನಿವಾರ(ಜೂ.3) ಸ್ಥಳ ಪರಿಶೀಲನೆ ನಡೆಸಿತು.

ಲೋಕೋಪಯೋಗಿ ಇಲಾಖೆಯ ಸಚಿವರಾಗಿರುವ ಸತೀಶ್ ಜಾರಕಿಹೊಳಿ ಅವರ ನಿರ್ದೇಶನದಂತೆ ನಗರಕ್ಕೆ ಆಗಮಿಸಿದ ತಂಡವು ಸ್ಥಳವನ್ನು ವೀಕ್ಷಿಸಿ ಅಗತ್ಯ ಮಾಹಿತಿಯನ್ನು ಪಡೆದುಕೊಂಡಿತು.

ಲೋಕೋಪಯೋಗಿ ಇಲಾಖೆಯ ಪ್ರಭಾರ ಮುಖ್ಯ ವಾಸ್ತುಶಿಲ್ಪಿ ಆರ್.ಶ್ರೀಧರ್ ಅವರ ನೇತೃತ್ವದ ತಂಡವು ಬಹುಮಹಡಿ ಕಟ್ಟಡವನ್ನು ನಿರ್ಮಿಸಲು ಉದ್ದೇಶಿಸಿರುವ ಜಾಗೆಯನ್ನು ವೀಕ್ಷಿಸಿತು.

ಈಗಿರುವ ಜಿಲ್ಲಾಧಿಕಾರಿ ಕಚೇರಿ, ಕಾಡಾ, ತೋಟಗಾರಿಕೆ, ಉಪ ನೋಂದಣಾಧಿಕಾರಿಗಳ ಕಚೇರಿ, ಸಣ್ಣ ಉಳಿತಾಯ, ಗ್ರಂಥಾಲಯ, ಲೋಕಾಯುಕ್ತ, ಉಪ ವಿಭಾಗಾಧಿಕಾರಿಗಳ ಕಚೇರಿ, ತಾಲ್ಲೂಕು ಪಂಚಾಯತ ಸೇರಿದಂತೆ ವಿವಿಧ ಕಚೇರಿಗಳನ್ನು ತೆರವುಗೊಳಿಸಿ ಅದೇ ಜಾಗೆಯಲ್ಲಿ ಬಹುಮಹಡಿ ಕಟ್ಟಡ ನಿರ್ಮಿಸಲು ಯೋಜನೆ ರೂಪಿಸಲಾಗುತ್ತಿದೆ.

ಜಿಲ್ಲಾಧಿಕಾರಿಗಳ ಕಚೇರಿ ಸೇರಿದಂತೆ ವಿವಿಧ ಕಚೇರಿಗಳನ್ನು ಒಂದೇ ಸೂರಿನಡಿಗೆ ತಂದು ವಿಶಾಲವಾದ ಪಾರ್ಕಿಂಗ್ ಒಳಗೊಂಡಂತೆ ಎಲ್ಲ ರೀತಿಯ ಮೂಲ ಸೌಕರ್ಯಗಳನ್ನು ಒದಗಿಸುವ ಉದ್ದೇಶವಿರುತ್ತದೆ.

ಜಿಲ್ಲೆಯ ಅಭಿವೃದ್ಧಿಗೆ ಸಂಬಂಧಿಸಿದಂತೆ ಇತ್ತೀಚೆಗೆ ಸುವರ್ಣ ವಿಧಾನಸೌಧದಲ್ಲಿ ನಡೆದ ಅಧಿಕಾರಿಗಳ ಸಭೆಯಲ್ಲಿ ಬಹುಮಹಡಿ ಕಟ್ಟಡ ನಿರ್ಮಾಣದ ಕುರಿತು ಪ್ರಾಥಮಿಕ ಚರ್ಚೆ ನಡೆಸಿದ್ದ ಸಚಿವರು, ಈ ಕುರಿತು ಸ್ಥಳ ಪರಿಶೀಲಿಸುವಂತೆ ಅಧಿಕಾರಿಗಳಿಗೆ ತಿಳಿಸಿದ್ದರು.

ಆ ಪ್ರಕಾರ ಲೋಕೋಪಯೋಗಿ ಇಲಾಖೆಯ ಮುಖ್ಯ ವಾಸ್ತುಶಿಲ್ಪಿ ನೇತೃತ್ವದ ತಂಡವು ನಗರಕ್ಕೆ ಭೇಟಿ ನೀಡಿರುತ್ತದೆ.

ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರನ್ನು ಭೇಟಿ ಮಾಡಿದ ಲೋಕೋಪಯೋಗಿ ಇಲಾಖೆಯ ಪ್ರಭಾರ ಮುಖ್ಯ ವಾಸ್ತುಶಿಲ್ಪಿ ಆರ್.ಶ್ರೀಧರ್ ಅವರು, ಉದ್ದೇಶಿತ ಬಹುಮಹಡಿ ಕಟ್ಟಡದಲ್ಲಿ ಇರಬೇಕಾದ ಅಗತ್ಯತೆಗಳು, ವಿನ್ಯಾಸ ಮತ್ತಿತರ ವಿಷಯಗಳ ಬಗ್ಗೆ ವಿಸ್ತೃತವಾಗಿ ಚರ್ಚೆ ನಡೆಸಿದರು.

ಲೋಕೋಪಯೋಗಿ ಇಲಾಖೆಯ ಉಪ ವಾಸ್ತುಶಿಲ್ಪಿ ಶ್ರೀಮತಿ ಆಶಾ, ಬೆಳಗಾವಿಯ ಕಾರ್ಯನಿರ್ವಾಹಕ ಎಂಜಿನಿಯರ್ ಎಸ್.ಎಸ್.ಸೊಬರದ, ಕಾರ್ಯನಿರ್ವಾಹಕ ಎಂಜಿನಿಯರ್ ಸುಭಾಸ್ ನಾಯ್ಕ, ರಮೇಶ್ ಮೇತ್ರಿ ಉಪಸ್ಥಿತರಿದ್ದರು.

## ಕೆಲಸಕ್ಕೆ ಹೋಗು ಎಂದಿದ್ದಕ್ಕೆ ಹೆಂಡತಿಯನ್ನೇ ಕೊಲೆಗೈದ ಗಂಡ



ಬೆಳಗಾವಿ: ಮನೆಯಲ್ಲೇ ಕಾಲಕಳೆಯುತ್ತಿದ್ದ ಪತಿಗೆ ಕೆಲಸಕ್ಕೆ ಹೋಗುವಂತೆ ಹೇಳಿದಕ್ಕೆ ಪತ್ನಿಯನ್ನೇ ಕೊಲೆಗೈದ ಪ್ರಕರಣ ಜಿಲ್ಲೆಯ ಮೂಡಲಗಿ ತಾಲೂಕಿನ ನಾಗನೂರ ಗ್ರಾಮದಲ್ಲಿ ನಡೆದಿದೆ. ಬಸವ್ವ (35) ಕೊಲೆಯಾದ ಮಹಿಳೆ. ಹಣಮಂತ ಹಿಡಕಲ್ ಕೊಲೆಗೈದ ಆರೋಪಿ ಎಂದು ತಿಳಿದು ಬಂದಿದೆ. ಕಳೆದ ಕೆಲ ದಿನಗಳಿಂದ ಆರೋಪಿ ಕೆಲಸಕ್ಕೆ ಹೋಗದೆ ಮನೆಯಲ್ಲಿ ಇರುತ್ತಿದ್ದ. ಇದರಿಂದ ಬೇಸತ್ತ ಪತ್ನಿ ಕೆಲಸಕ್ಕೆ ಹೋಗುವಂತೆ ಹೇಳಿದ್ದಾಳೆ. ಈ ವೇಳೆ ಸಿಟ್ಟಿಗೆದ್ದ ಆರೋಪಿ ಕತ್ತು ಹಿಸುಕಿ ಪತ್ನಿಯನ್ನು ಹತ್ಯೆ ಮಾಡಿದ್ದಾನೆ. ಬಳಿಕ ತಾನೇ ಪೊಲೀಸ್ ಠಾಣೆಗೆ ತೆರಳಿ ಶರಣಾಗಿದ್ದಾನೆ. ಈ ಸಂಬಂಧ ಮೂಡಲಗಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಲಿಂಗರಾಜ ಕಾಲೇಜಿನ ಶ್ರೀನಾಥ ದಳವಿ ಖೇಲೋ ಇಂಡಿಯಾ ದಲ್ಲಿ ರಾಷ್ಟ್ರೀಯ ಸಾಧನೆ: ಡಾ.ಪ್ರಭಾಕರ ಕೋರೆ ಹರ್ಷ



ಬೆಳಗಾವಿ : ಲಿಂಗರಾಜ ಕಾಲೇಜಿನ ಬಿ.ಕಾಂ. ಎರಡನೇ ಸೆಮಿಸ್ಟರದಲ್ಲಿ ಓದುತ್ತಿರುವ ಶ್ರೀನಾಥ ದಳವಿ ಇತ್ತೀಚಿಗೆ ಉತ್ತರ ಪ್ರದೇಶದ ಲಕ್ನೋದಲ್ಲಿ ಜರುಗಿದ ಅಂತರ ವಿಶ್ವವಿದ್ಯಾಲಯಗಳ ಖೇಲೋ ಇಂಡಿಯಾ ಅಥ್ಲೇಟಿಕ್ಸ್‌ನ 400 ಮೀಟರ್ ಓಟದಲ್ಲಿ ಕಂಚಿನ ಪದಕವನ್ನು ಪಡೆದು ಕಾಲೇಜಿಗೆ ಕೀರ್ತಿ ತಂದಿದ್ದಾನೆ.

ವಿದ್ಯಾರ್ಥಿ ಸಾಧನೆಗೆ ಕೆಎಲ್‌ಇ ಸಂಸ್ಥೆಯ ಕಾರ್ಯಾಧ್ಯಕ್ಷರಾದ ಡಾ.ಪ್ರಭಾಕರ ಕೋರೆಯವರು ಹರ್ಷ ವ್ಯಕ್ತಪಡಿಸಿ ಕೆಎಲ್‌ಇ ಸಂಸ್ಥೆಯ ಪ್ರಧಾನ ಕಚೇರಿಯಲ್ಲಿ ಸತ್ಕರಿಸಿ ಅಭಿನಂದಿಸಿದ್ದಾರೆ.

ಈ ಸಂದರ್ಭದಲ್ಲಿ ಕೆಎಲ್‌ಇ ಆಡಳಿತ ಮಂಡಳಿಯ ನಿರ್ದೇಶಕರಾದ ಎಸ್.ಸಿ.ಮೆಟಗುಡ್, ಡಾ.ವ್ಹಿ.ಎಸ್. ಸಾಧುನವರ, ಲಿಂಗರಾಜ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ಎಚ್.ಎಸ್.ಮೇಲಿನಮನಿ, ದೈಹಿಕ ನಿರ್ದೇಶಕರಾದ ಡಾ.ಸಿ.ರಾಮರಾವ್ ಉಪಸ್ಥಿತರಿದ್ದರು.

## ಟಾಟಾ ಸ್ಮಾರಕ ಕೇಂದ್ರಕ್ಕೆ ಐಸಿಐಸಿಐ ಬ್ಯಾಂಕ ರೂ 1,200 ಕೋಟಿ ಕೊಡುಗೆ

ಹುಬ್ಬಳ್ಳಿ: ದೇಶದಾದ್ಯಂತ ಕ್ಯಾನ್ಸರ್ ಚಿಕಿತ್ಸೆ ಮತ್ತು ಸಂಶೋಧನಾ ಕೇಂದ್ರಗಳನ್ನು ನಡೆಸುತ್ತಿರುವ ಪ್ರಮುಖ ಸಂಸ್ಥೆಯಾಗಿರುವ ಟಾಟಾ ಮೆಮೋರಿಯಲ್ ಸೆಂಟರ್‌ಗೆ (ಟಿಎಂಸಿ) ರೂ 1,200 ಕೋಟಿ ಮೊತ್ತದ ನೆರವು ನೀಡುವ ಬದ್ಧತೆಯನ್ನು ಐಸಿಐಸಿಐ ಬ್ಯಾಂಕ್ ಇಲ್ಲಿ ಪ್ರಕಟಿಸಿದೆ.

ಐಸಿಐಸಿಐ ಬ್ಯಾಂಕ್, ತನ್ನ ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ (ಸಿಎಸ್‌ಆರ್) ನಿಧಿಯಿಂದ ಈ ಮೊತ್ತವನ್ನು ದೇಣಿಗೆಯಾಗಿ ನೀಡಲಿದೆ. ಮಹಾರಾಷ್ಟ್ರದ ನವಿ ಮುಂಬೈ, ಪಂಜಾಬ್‌ನ ಮುಲ್ಲನಪುರ ಹಾಗೂ ಆಂಧ್ರಪ್ರದೇಶದ ವಿಶಾಖಪಟ್ಟಣದಲ್ಲಿನ 'ಟಿಎಂಸಿ' ಕೇಂದ್ರಗಳಲ್ಲಿ ಒಟ್ಟಾರೆ 7.5 ಲಕ್ಷ ಚದರ ಅಡಿ ವಿಸ್ತೀರ್ಣದಲ್ಲಿ ಮೂರು ಹೊಸ ಕಟ್ಟಡಗಳನ್ನು ನಿರ್ಮಿಸಲು ಮತ್ತು ಅತ್ಯಾಧುನಿಕ ಯಂತ್ರಗಳೊಂದಿಗೆ ಸಜ್ಜುಗೊಳಿಸಲು ಈ ದೇಣಿಗೆ ಬಳಕೆಯಾಗಲಿದೆ.

'ಟಿಎಂಸಿ'ಗೆ ಯಾವುದೇ ಸಂಸ್ಥೆಯಿಂದ ಇದುವರೆಗೆ ದೊರೆತಿರುವ ಅತಿ ದೊಡ್ಡ ದೇಣಿಗೆ ಇದಾಗಿದೆ. ಐಸಿಐಸಿಐ ಬ್ಯಾಂಕಿನ 'ಸಿಎಸ್‌ಆರ್'ನ ಅಂಗವಾಗಿರುವ ಐಸಿಐಸಿಐ ಫೌಂಡೇಷನ್ ಫಾರ್ ಇನ್‌ಕ್ಲೂಸಿವ್ ಗ್ರೋತ್ (ಐಸಿಐಸಿಐ ಫೌಂಡೇಷನ್) ಈ ಉಪಕ್ರಮವನ್ನು ಕಾರ್ಯಗತಗೊಳಿಸಲಿದೆ. ಈ ಯೋಜನೆ 2027ರ ವೇಳೆಗೆ ಪೂರ್ಣಗೊಳ್ಳುವ ಸಾಧ್ಯತೆಯಿದೆ.

ಅತ್ಯಾಧುನಿಕ ಉಪಕರಣಗಳು ಮತ್ತು ವಿಶೇಷ ಪರಿಣತಿಯ ವೃತ್ತಿಪರ ವೈದ್ಯರ ತಂಡದ ನೆರವಿನಿಂದ, ಕ್ಯಾನ್ಸರ್ ಚಿಕಿತ್ಸೆಯಲ್ಲಿನ ಈ ಶ್ರೇಷ್ಠತೆಯ ಹೊಸ ಕೇಂದ್ರಗಳು ಪ್ರತಿ ವರ್ಷ ಅಂದಾಜು 25,000 ಹೊಸ ರೋಗಿಗಳಿಗೆ ಸುಧಾರಿತ ಮತ್ತು ಪುರಾವೆ ಆಧಾರಿತ ಚಿಕಿತ್ಸೆ ಒದಗಿಸಲಿವೆ. ಸದ್ಯದ ಚಿಕಿತ್ಸಾ ಸಾಮರ್ಥ್ಯವನ್ನು ದ್ವಿಗುಣಗೊಳಿಸಲಿವೆ. ದೇಶದಲ್ಲಿನ ಕ್ಯಾನ್ಸರ್ ಚಿಕಿತ್ಸಾ ಮೂಲಸೌಕರ್ಯಗಳಿಗೆ ಗಮನಾರ್ಹ ಉತ್ತೇಜನವನ್ನೂ ನೀಡಲಿವೆ.

ದೇಣಿಗೆ ನೀಡುವ ಬದ್ಧತೆ ವ್ಯಕ್ತಪಡಿಸಲು ಐಸಿಐಸಿಐ ಫೌಂಡೇಷನ್ 'ಟಿಎಂಸಿ' ಜೊತೆಗೆ ಒಪ್ಪಂದಕ್ಕೆ ಸಹಿ ಹಾಕಿದೆ.

ಐಸಿಐಸಿಐ ಪ್ರತಿಷ್ಠಾನದ ಅಧ್ಯಕ್ಷ ಸಂಜಯ್ ದತ್ತಾ ಮತ್ತು ಟಾಟಾ ಸ್ಮಾರಕ ಕೇಂದ್ರದ ನಿರ್ದೇಶಕ ಡಾ. ಆರ್.ಎ. ಬಡವೆ ಅವರು ಐಸಿಐಸಿಐ ಬ್ಯಾಂಕ್ ಅಧ್ಯಕ್ಷ ಗಿರೀಶ್ ಚಂದ್ರ ಚತುರ್ವೇದಿ ಹಾಗೂ ಐಸಿಐಸಿಐ ಬ್ಯಾಂಕ್‌ನ ಕಾರ್ಯನಿರ್ವಾಹಕ ನಿರ್ದೇಶಕ ಸಂದೀಪ್ ಬಾತ್ರಾ ಅವರ ಉಪಸ್ಥಿತಿಯಲ್ಲಿ ಒಪ್ಪಂದಕ್ಕೆ ಸಹಿ ಹಾಕಿದರು.




ಮುಂಬೈನ ಪರೇಲ್‌ನಲ್ಲಿರುವ ಟಾಟಾ ಮೆಮೋರಿಯಲ್ ಹಾಸ್ಪಿಟಲ್‌ನಲ್ಲಿ ಹೊಸದಾಗಿ ಆರಂಭಿಸಿರುವ ಐಸಿಐಸಿಐ ಎಂಆರ್‌ಐ ಸೌಲಭ್ಯವನ್ನು ಡಾ. ಬಡವೆ ಮತ್ತು ಬಾತ್ರಾ ಅವರ ಉಪಸ್ಥಿತಿಯಲ್ಲಿ ಚತುರ್ವೇದಿ ಅವರು ಉದ್ಘಾಟಿಸಿದರು. ಈ ಸೌಲಭ್ಯವು ಐಸಿಐಸಿಐ ಫೌಂಡೇಷನ್‌ನಿಂದ ನೀಡಿರುವ ಸುಧಾರಿತ ಎಂಆರ್‌ಐ ಯಂತ್ರ ಹೊಂದಿದೆ,

ಈ ಸಂದರ್ಭದಲ್ಲಿ ಮಾತನಾಡಿದ ಐಸಿಐಸಿಐ ಬ್ಯಾಂಕ್ ಅಧ್ಯಕ್ಷ ಗಿರೀಶ್ ಚಂದ್ರ ಚತುರ್ವೇದಿ ಅವರು, 'ಐಸಿಐಸಿಐ ಬ್ಯಾಂಕ್, ದೇಶಕ್ಕೆ ಸೇವೆ ಸಲ್ಲಿಸುವ ವಿಷಯದಲ್ಲಿ ದೀರ್ಘ ಕಾಲದ ಪರಂಪರೆ ಹೊಂದಿದೆ. ಈ ಧ್ಯೇಯಕ್ಕೆ ಅನುಗುಣವಾಗಿಯೇ, ಐಸಿಐಸಿಐ ಫೌಂಡೇಷನ್ – ಪರಿಸರ ಸಂರಕ್ಷಣೆ, ಸುಸ್ಥಿರ ಜೀವನೋಪಾಯಕ್ಕಾಗಿ ಕೌಶಲ ಅಭಿವೃದ್ಧಿ, ಕೈಗೆಟುಕುವ ಆರೋಗ್ಯ ಮತ್ತು ಸಮುದಾಯ ಅಭಿವೃದ್ಧಿ ಯೋಜನೆಗಳಲ್ಲಿ ತನ್ನ ವಿವಿಧ ಉಪಕ್ರಮಗಳ ಮೂಲಕ ನಾಗರಿಕರ ಯೋಗಕ್ಷೇಮವನ್ನು ಸುಧಾರಿಸಲು ನಿರಂತರವಾಗಿ ಕೆಲಸ ಮಾಡುತ್ತಿದೆ. ಆರೋಗ್ಯ ರಕ್ಷಣೆ ಉತ್ತೇಜಿಸುವ ನಮ್ಮ ಬದ್ಧತೆಯ ಭಾಗವಾಗಿರುವ ಈ ಉಪಕ್ರಮವು ದೇಶದ ವಿವಿಧ ಭಾಗಗಳಲ್ಲಿ ಸಮಗ್ರ ಸ್ವರೂಪದ ಕ್ಯಾನ್ಸರ್ ಚಿಕಿತ್ಸಾ ಸೇವೆಗಳು ಲಭ್ಯವಾಗುವುದನ್ನು ಖಚಿತಪಡಿಸಲಿದೆ.

ಸಆ ಕೇಂದ್ರಗಳಲ್ಲಿ ರೋಗಿಗಳಿಗೆ ಸುಧಾರಿತ ಮತ್ತು ಅತ್ಯಾಧುನಿಕ ಕ್ಯಾನ್ಸರ್ ಗುಣಪಡಿಸುವ ಚಿಕಿತ್ಸೆ ದೊರೆಯಲಿದೆ. 'ಟಿಎಂಸಿ'ಗಳಲ್ಲಿನ ಈ ಹೊಸ ಚಿಕಿತ್ಸಾ ಕಟ್ಟಡಗಳು ಸ್ಥಳೀಯವಾಗಿಯೇ ಕ್ಯಾನ್ಸರ್‌ಗೆ ಗುಣಮಟ್ಟದ ಹಾಗೂ ಅತ್ಯಾಧುನಿಕ ಚಿಕಿತ್ಸೆ ನೀಡುವ ಕೇಂದ್ರಗಳಾಗಿಯೂ ಸೇವೆ ಸಲ್ಲಿಸಲಿವೆ. ಇದರಿಂದ ಮುಂಬೈನ ಪರೇಲ್‌ನಲ್ಲಿರುವ ಟಾಟಾ ಮೆಮೋರಿಯಲ್ ಹಾಸ್ಪಿಟಲ್‌ಗೆ ಭೇಟಿ ನೀಡಲು ರೋಗಿಗಳು ದೂರ ಪ್ರಯಾಣ ಕೈಗೊಳ್ಳುವ ಅನಿವಾರ್ಯತೆಯನ್ನು ದೂರ ಮಾಡಲಿವೆ' ಎಂದೂ ಅವರು ಹೇಳಿದ್ದಾರೆ.

## ಉತ್ತಮ ಆರೋಗ್ಯಕ್ಕಾಗಿ ಪ್ರತಿದಿನ ಸೈಕಲ್ ಬಳಸಿ; ಸೈಕಲ ತುಳಿಯುವದರಿಂದ ಪರಿಸರ ರಕ್ಷಣೆ: ವಿಭಾಗೀಯ ಜಂಟಿ ನಿರ್ದೇಶಕಿ ಡಾ.ಪುಷ್ಪ ಎಚ್.ಆರ್

ಧಾರವಾಡ: ಆಧುನಿಕ ಜಗತ್ತಿನಲ್ಲಿ ಬಿಡಯವಿಲ್ಲದ ಕೆಲಸ, ದೈಹಿಕ ಕಾರ್ಯಚಟುವಟಿಕೆಗಳ ಉದಾಶೀನತೆಯಿಂದಾಗಿ ಸಣ್ಣ ವಯಸ್ಸಿನಲ್ಲಿಯೇ ಅನೇಕರು ಅನಾರೋಗ್ಯಕ್ಕೆ ಬಲಿಯಾಗುತ್ತಿದ್ದಾರೆ. ಪ್ರತಿ ದಿನ ಸೈಕಲ ಬಳಸುವದರಿಂದ ಉತ್ತಮ ಆರೋಗ್ಯ ಹೊಂದಲು ಅನುಕೂಲವಾಗುತ್ತದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಬೆಳಗಾವಿ ವಿಭಾಗೀಯ ಜಂಟಿ ನಿರ್ದೇಶಕಿ ಡಾ.ಪುಷ್ಪ ಎಚ್. ಆರ್. ಹೇಳಿದರು.

ಅವರು ಇಂದು ಬೆಳಿಗ್ಗೆ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸರ್ವೇಕ್ಷಣಾಧಿಕಾರಿಗಳ ಕಚೇರಿ, ಧಾರವಾಡದ ಜಿಲ್ಲಾ ಎನ್.ಸಿ.ಡಿ ಘಟಕ, ಪ್ರೆಜೆಂಟೇಶನ್ ಸ್ಕೂಲ್ ಹಾಗೂ ಬೈಸಿಕಲ್ ಅಸೋಸಿಯೇಶನ ವತಿಯಿಂದ ರಾಷ್ಟ್ರೀಯ ಅಸಾಂಕ್ರಾಮಿಕ ರೋಗಗಳ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಕಾರ್ಯಕ್ರಮ (ಎನ್.ಪಿ–ಎನ್.ಸಿ.ಡಿ) ದಡಿಯಲ್ಲಿ "ವಿಶ್ವ ಬೈಸಿಕಲ್ ದಿನಾಚಾರಣೆ ಅಂಗವಾಗಿ ಆರೋಗ್ಯಕ್ಕಾಗಿ ಸೈಕಲ್ ಘೋಷವಾಖ್ಯದಡಿ ಆಯೋಜಿಸಿದ್ದ ಸೈಕಲಥಾನ್ ಕಾರ್ಯಕ್ರಮಕ್ಕೆ ಹಸಿರು ಬಾವುಟ ತೋರಿ, ಚಾಲನೆ ನೀಡಿ ಮಾತನಾಡಿದರು.

ಕೋವಿಡ್ ಸಮಯದಲ್ಲಿ ಹಾಕಲಾಗಿದ್ದ ನಿಬರ್ಂಧಗಳಿಂದಾಗಿ ಜಿಮ್, ವ್ಯಾಯಾಮ್, ಸೈಕಲ್ ಬಳಕೆ ಕಡಿಮೆ ಆಗಿದೆ. ಇದರಿಂದಾಗಿ ಸಣ್ಣ ವಯಸ್ಸಿನ, ಹದಿಹರೆಯದ ಅನೇಕರು ಮಧುಮೇಹ, ಹೃದಯಾಘಾತ, ರಕ್ತದೊತ್ತಡ ಮುತಾಂದ ರೋಗಗಳಿಗೆ ಬಲಿಯಾಗುತ್ತಿದ್ದಾರೆ ಎಂದು ಅವರು ಹೇಳಿದರು.

ಅಹಿತಕರ ಆಹಾರಪದ್ಧತಿ, ದೈಹಿಕ ಶ್ರಮ ಇಲ್ಲದಿರುವುದು, ಮದ್ಯಪಾನ ಹಾಗೂ ತಂಬಾಕು ಸೇವನೆ ಅಂತಹ ವ್ಯಸನಗಳು ಅಸಾಂಕ್ರಾಮಿಕ ರೋಗಗಳ ಪ್ರಮುಖ ಅಪಾಯಕಾರಿ ಅಂಶಗಳಾಗಿವೆ. ಇವುಗಳನ್ನು ತಡೆಗಟ್ಟಲು ನಿಯಮಿತ ಹಾಗೂ ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಆರೋಗ್ಯ ಇಲಾಖೆಯಿಂದ ಸೈಕಲ್ ಜಾಥಾ ಸಂಘಟಿಸುವ ಮೂಲಕ ಜನಸಾಮಾನ್ಯರಿಗೆ ಸೈಕಲ್ ಬಳಕೆಯ ಪ್ರಯೋಜನಗಳನ್ನು ಮನವರಿಕೆ ಮಾಡಲು ಪ್ರಯತ್ನಿಸಲಾಗುತ್ತದೆ ಎಂದು ಡಾ.ಪುಷ್ಪ ತಿಳಿಸಿದರು.




ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಆರೋಗ್ಯ ಅಧಿಕಾರಿ ಡಾ.ಪಾಟೀಲ ಶಶಿ ಮಾತನಾಡಿ, ಆರೋಗ್ಯ ಇಲಾಖೆಯ ಪ್ರಮುಖ ಕಾರ್ಯಕ್ರಮಗಳ ಕುರಿತು ಸಾರ್ವಜನಿಕರಿಗೆ ಪರಿಣಾಮಕಾರಿಯಾಗಿ ಮಾಹಿತಿ ತಿಳಿಸಲು, ಕಾರ್ಯಕ್ರಮ ಅಧಿಕಾರಿಗಳ ಮೂಲಕ ಐಇಸಿ ಕಾರ್ಯ ಚಟುವಟಿಕೆಗಳನ್ನು ಆದ್ಯತೆ ಮೇಲೆ ಸಂಘಟಿಸಲಾಗುತ್ತಿದೆ. ಸಾರ್ವಜನಿಕರಿಂದ ಉತ್ತಮ ಸ್ಪಂದನೆ ಇದೆ ಎಂದರು.

ಕಾರ್ಯಕ್ರಮ ಸಂಘಟಕರಾದ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಸುಜಾತಾ ಹಸವಿಮಠ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಅಸಾಂಕ್ರಾಮಿಕ ರೋಗಗಳ ಪತ್ತೆ ಮತ್ತು ಚಿಕಿತ್ಸೆಗಾಗಿ ಜಿಲ್ಲೆಯ ಮೂರು ತಾಲ್ಲೂಕು ಆಸ್ಪತ್ರೆಗಳಲ್ಲಿ ಹಾಗೂ ಜಿಲ್ಲಾ ಆಸ್ಪತ್ರೆಯಲ್ಲಿ ಎನ್.ಸಿ.ಡಿ.ಕ್ಲೀನಿಕ್ ಸ್ಥಾಪಿಸಲಾಗಿದೆ. ಅಧಿಕ ರಕ್ತದೊತ್ತಡ, ಮಧುಮೇಹ, ಹೃದಯ ಸಂಬಂಧಿ ಕಾಯಿಲೆಗಳು, ಕ್ಯಾನ್ಸರ್ ಸ್ಕ್ರೀನಿಂಗ್, ಪಾರ್ಶ್ವವಾಯು ರೋಗಗಳ ಪತ್ತೆ ಮತ್ತು ಚಿಕಿತ್ಸೆ ಮಾಡಲಾಗುತ್ತದೆ. 30 ವರ್ಷ ಮೇಲ್ಪಟ್ಟ ಎಲ್ಲರೂ ಎನ್.ಸಿ.ಡಿ ಘಟಕದಲ್ಲಿ ಚಿಕಿತ್ಸೆ ಪಡೆಯಬಹುದಾಗಿದೆ ಎಂದು ಅವರು ಹೇಳಿದರು.

ಧಾರವಾಡ ಜಿಲ್ಲಡಯ 4 ಎನ್ಸಿಡಿ ಕ್ಲಿನಿಕ್ಗಳಲ್ಲಿ ಎಪ್ರೀಲ್–2022 ರಿಂದ ಮಾರ್ಚ–2023ರವರೆಗೆ ಒಟ್ಟು 88,163 ಜನರಿಗೆ ಸ್ಕ್ರೀನಿಂಗ್ ಮಾಡಲಾಗಿದ್ದು, ಇದರಲ್ಲಿ 799 ಜನ ಮಧುಮೇಹ ಪೀಡಿತರು, 1,618 ಜನ ಅಧಿಕ ರಕ್ತದೊತ್ತಡ ಹೊಂದಿರುವವರು ಮತ್ತು ಈ ಎರಡು ಕಾಯಿಲೆ ಇರುವ 299 ಜನ, 11 ಜನ ಪಾರ್ಶ್ವವಾಯುವ ಪೀಡಿತರು ಮತ್ತು 22 ಜನ ಹೃದಯ ಸಂಬಂಧಿ ಕಾಯಿಲೆಗಳಿರುವ ಜನರು ಪತ್ತೆಯಾಗಿದ್ದಾರೆ. ಇವರಿಗೆ ಉಚಿತವಾಗಿ ಅಗತ್ಯ ಚಿಕಿತ್ಸೆಯನ್ನು ನೀಡಲಾಗುತ್ತಿದೆ ಎಂದು ತಿಳಿಸಿದರು.

ನಿಯಮಿತವಾಗಿ ಆಹಾರ ಸೇವನೆ, ವ್ಯಾಯಾಮ ಮತ್ತು ಆರೋಗ್ಯಕರ ಚಟುವಟಿಕೆಗಳಲ್ಲಿ ಭಾಗವಹಿಸುವದರಿಂದ ಮತ್ತು ಸೈಕಲ್ ತುಳಿಯುವದರಿಂದ ನಾವು ಅಸಾಂಕ್ರಾಮಿಕ ರೋಗಗಳಿಂದ ದೂರವಿರಬಹುದು ಎಂದು ಡಾ. ಸುಜಾತಾ ಹಸವಿಮಠ ಹೇಳಿದರು.

ಈ ಸೈಕಲಥಾನ್ ಜಾಗೃತಿ ಕಾರ್ಯಕ್ರಮದಲ್ಲಿ ಎಲ್ಲ ಕಾರ್ಯಕ್ರಮ ಅನುಷ್ಠಾನ ಅಧಿಕಾರಿಗಳು, ಧಾರವಾಡ ತಾಲೂಕ ಆರೋಗ್ಯಾಧಿಕಾರಿಗಳು, ವೈದ್ಯಾಧಿಕಾರಿಗಳು, ಎನ್.ಸಿ.ಡಿ ಕಾರ್ಯಕ್ರಮದ ಸಿಬ್ಬಂದಿಯವರು, ಆರೋಗ್ಯ ಇಲಾಖೆಯ ವಿವಿಧ ವಿಭಾಗಗಳ ಎಲ್ಲ ಸಿಬ್ಬಂದಿ ವರ್ಗದವರು, ಪ್ರೆಜೆಂಟೇಶನ್ ಸ್ಕೂಲ್ನ ವಿದ್ಯಾರ್ಥಿಗಳು, ಧಾರವಾಡ ಬೈಸಿಕಲ್ ಅಸೋಸಿಯೇಶನ ಮುಖ್ಯಸ್ತರು ಹಾಗೂ ಸದಸ್ಯರು ಭಾಗವಹಿಸಿದ್ದರು.

ಸೈಕಲಥಾನ್: ರಾಷ್ಟ್ರೀಯ ಅಸಾಂಕ್ರಾಮಿಕ ರೋಗಗಳ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಕಾರ್ಯಕ್ರಮ (ಎನ್.ಪಿ–ಎನ್.ಸಿ.ಡಿ) ದಡಿಯಲ್ಲಿ "ವಿಶ್ವ ಬೈಸಿಕಲ್ ದಿನಾಚಾರಣೆ ಅಂಗವಾಗಿ ಅಸಾಂಕ್ರಾಮಿಕ ರೋಗಗಳ ಪ್ರಮುಖ ಅಪಾಯಕಾರಿ ಅಂಶಗಳಾದ ಅಹಿತಕರ ಆಹಾರಪದ್ಧತಿ, ದೈಹಿಕ ಶ್ರಮ ಇಲ್ಲದಿರುವುದು, ವ್ಯಸನಗಳಾದ ಮದ್ಯಪಾನ ಹಾಗೂ ತಂಬಾಕು ಸೇವನೆ ಮತ್ತು ನಿಯಮಿತ ಹಾಗೂ ಆರೋಗ್ಯಕರ ಜೀವನಶೈಲಿಯಿಂದ ಅಸಾಂಕ್ರಾಮಿಕ ರೋಗಗಳನ್ನು ದೂರವಿಡಬಹುದು ಮತ್ತು ವಾಯು ಮಾಲಿನ್ಯದ ದುಷ್ಪರಿಣಾಮಗಳ ಕುರಿತು ಸೈಕಲಥಾನ್ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಯಿತು.

ಈ ಜಾಗೃತಿ ಕಾರ್ಯಕ್ರಮವು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿಯಿಂದ ಪ್ರಾರಂಭಗೊಂಡು ಹಳೇ ಎಸ್.ಪಿ ಸರ್ಕಲ್ ಮಾರ್ಗವಾಗಿ ಪ್ರೆಜೆಂಟೇಶನ್ ಸ್ಕೂಲ್ ಮುಂಭಾಗವಾಗಿ ಕೆ.ಸಿ.ಪಾರ್ಕ ಸುತ್ತುವರೆದು ಪೋಸ್ಟ ಆಫೀಸ್ ಮಾರ್ಗವಾಗಿ ಮರಳಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಛೇರಿಯಲ್ಲಿ ಮುಕ್ತಾಯಗೊಂಡಿತು.

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089